ಸಂಪುಟ: 05 ಸಂಚಿಕೆ: 149 ಪುಟಗಳು: 08 ಸೋಮವಾರ 11 ಆಗಸ್ಟ್ 2025

www.udayavahini.in | epaper.udayavahini.in | Udayavahini news | Udayavahini news | Udayavahini news youtube | udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 | +91 8035841833 | ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನೀನು ಎರಡು ಪಟ್ಟ ಕಷ್ಟಪಟ್ಟರು ನಿನ್ನ ಕಷ್ಟದಿಂದ ಬಂದ ಸುಖವನ್ನು ಯಾರು ಗುರುತಿಸುವುದಿಲ್ಲ. ಆದರೆ ನಿನ್ನಿಂದ ಎರಡು ನಿಮಿಷ ನೋವು ಪಟ್ಟರು ಅದನ್ನು ಜೀವನ ಪರ್ಯಂತ ನೆನಪಿನಲ್ಲಿ ಇಟ್ಟುಕೊಳ್ಳುತ್ತಾರೆ.

## ರಾಜ್ಯದ ಅಭಿವೃದ್ಧಿಗೆ ಬಿಜೆಪಿ ಸಂಸದರು 10 ರೂ. ಅನುದಾನ ತಂದಿಲ್ಲ: ಡಿಕೆಶಿ

• ಉದಯವಾಹಿನಿ ಬೆಂಗಳೂರು

ಬೆಂಗಳೂರು ಸೇರಿದಂತೆ ಕರ್ನಾಟಕದ ಅಭಿವೃದ್ಧಿಗೆ ಬಿಜೆಪಿಯ ಯಾವೊಬ್ಬ ಸಂಸದರು 10 ರೂ. ಅನುದಾನ ತಂದಿಲ್ಲ. ಇವರಿಗೆ ನಾಚಿಕೆಯಾಗಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಆಕ್ರೋಶ ಹೊರ ಹಾಕಿದರು. ಪ್ರಧಾನಿ ನರೇಂದ್ರ ಮೋದಿ ಅವರು ಮೆಟ್ರೊದ ಹಳದಿ ಮಾರ್ಗ ಉದ್ಘಾಟನೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿಯ ಯಾವೊಬ್ಬ ಸಂಸದರು ಕರ್ನಾಟಕಕ್ಕೆ, ಬೆಂಗಳೂರಿಗೆ ಅನುದಾನ ಕೊಡಿಸಿಲ್ಲ. ಕೇಂದ್ರದ ಯಾವುದೇ ಸಚಿವರನ್ನೂ ಭೇಟಿ ಮಾಡಿಲ್ಲ. ಕರ್ನಾಟಕದ ಪರ ದನಿ ಎತ್ತಿಲ್ಲ ಎಂದರು. ನರೇಗಾದಲ್ಲೂ ನಮಗೆ ಬರಬೇಕಾದ ಹಣ ಬಂದಿಲ್ಲ. ನಾನು ರಾಜಕಾರಣ ಮಾಡಲು ಹೋಗುವುದಿಲ್ಲ. ಎಲೆಕ್ಟ್ರಾನಿಕ್ ಸಿಟಿ ಫ್ಲೈ ಓವರ್ ನಿರ್ಮಾಣವಾಗಿದ್ದು ಮನಮೋಹನ್‌ಸಿಂಗ್‌ರವರು ಪ್ರಧಾನಿ ಯಾಗಿದ್ದಾಗ ಎಂದರು. ಬಿಜೆಪಿ ಸಂಸದರು ಇನ್ನಾದರೂ ಕರ್ನಾಟಕಕ್ಕೆ ಹೆಚ್ಚಿನ ಅನುದಾನ ಕೊಡಿಸುವತ್ತ ಗಮನ ಕೊಡಲಿ, ಟ್ವಿಟರ್‌ನಲ್ಲಿ, ಮಾಧ್ಯಮಗಳಲ್ಲಿ ಫೋಟೋ-ಸುದ್ದಿ ಹಾಕಿಸಿಕೊಂಡರೆ ಏನೂ ಸಾಧನೆಯಾಗಲ್ಲ. ರಾಜ್ಯದ ಪರ ದನಿ ಎತ್ತಿ ಅನುದಾನ ಕೊಡಿಸಬೇಕು ಎಂದು ಆಗ್ರಹಿಸಿದರು.

## ಆಡಳಿತ ವಿಪಕ್ಷಗಳ ನಡುವೆ ವಾಕ್ಸಮರಕ್ಕೆ ಅಖಾಡ ಸಜ್ಜು

• ಉದಯವಾಹಿನಿ ಬೆಂಗಳೂರು

ಇಂದಿನಿಂದ ಆರಂಭವಾಗಲಿರುವ ರಾಜ್ಯ ವಿಧಾನ ಮಂಡಲದ ಮಳೆಗಾಲದ ಅಧಿವೇಶನದಲ್ಲಿ ಪ್ರತಿಪಕ್ಷ ಹಾಗೂ ಆಡಳಿತ ಪಕ್ಷಗಳ ನಡುವೆ ವಾಕ್ಸಮರಕ್ಕೆ ಅಖಾಡ ಸಜ್ಜಾಗಿದ್ದು, ಸದನದ ಕಲಾಪಗಳು ಕಾವೇರುವುದು ನಿಶ್ಚಿತ.

ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಮುಂದಿಟ್ಟುಕೊಂಡು ಆಡಳಿತ ಪಕ್ಷವನ್ನು ತರಾಟೆಗೆ ತೆಗೆದುಕೊಳ್ಳಲು ಪ್ರತಿಪಕ್ಷಗಳು ಸಜ್ಜಾಗಿವೆ. ಪ್ರತಿಪಕ್ಷಗಳನ್ನು ಸಮರ್ಥವಾಗಿ ಎದುರಿಸಲು ಕಾಂಗ್ರೆಸ್ ಪಕ್ಷ ಸಹ ಎಲ್ಲಾ ರೀತಿಯ ತಯಾರಿ ಮಾಡಿಕೊಂಡಿದ್ದು, ಸದನ-ಕದನಕ್ಕೆ ವೇದಿಕೆ ಅಣಿಯಾಗಿದೆ. ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಕೊರತೆ, ಶಾಸಕರ ಅನುದಾನ ಬಿಡುಗಡೆಯಲ್ಲಿನ ತಾರತಮ್ಯ, ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಪ್ರಕರಣ, ಹಿಂದುಳಿದ ವರ್ಗಗಳ ಆಯೋಗದ ಜಾತಿ ಗಣತಿ ವರದಿಯನ್ನು ಅಂಗೀಕರಿಸದೆ ಹೊಸ ಜಾತಿ ಗಣತಿಗೆ ಮುಂದಾಗಿರುವುದು ಬಿಜೆಪಿ ಶಾಸಕರನ್ನು ಗುರಿಯಾಗಿಸಿ ಎಫ್‌ಐಆರ್ ದಾಖಲಿಸುತ್ತಿರುವುದು, ಪರಿಶಿಷ್ಟ ಸಮುದಾಯಕ್ಕೆ ಮೀಸಲಾದ ಅನುದಾನವನ್ನು ಬೇರೆ ಉದ್ದೇಶಗಳಿಗೆ ಬಳಕೆ, ಕಾನೂನು ಸುವ್ಯವಸ್ಥೆ ಕುಸಿದಿರುವುದು ಮುಂತಾದ ಹತ್ತು ಹಲವು ವಿಚಾರಗಳನ್ನು ಇಟ್ಟುಕೊಂಡು ಸರ್ಕಾರದ ವಿರುದ್ಧ ಮುಗಿಬೀಳಲು ಪ್ರತಿಪಕ್ಷಗಳಾದ ಬಿಜೆಪಿ - ಜೆಡಿಎಸ್ ತುದಿಗಾಲ ಮೇಲೆ ನಿಂತಿವೆ.

## ಮತಗಳ್ಳತನ: ಕೆಎನ್ ರಾಜಣ್ಣ ನೀಡಿರುವ ಹೇಳಿಕೆಯನ್ನೇ ಅಸ್ತ್ರವಾಗಿಸಿಕೊಂಡ ಬಿಜೆಪಿ

• ಉದಯವಾಹಿನಿ ಬೆಂಗಳೂರು

ಮತಗಳ್ಳತನ ಆರೋಪ ಮಾಡಿದ ತಮ್ಮದೇ ಪಕ್ಷದ ನಾಯಕರ ವಿರುದ್ಧ ಸಚಿವ ಕೆಎನ್‌ರಾಜಣ್ಣ ನೀಡಿರುವ ಹೇಳಿಕೆಯನ್ನು ರಾಜ್ಯ ಬಿಜೆಪಿ ನಾಯಕರು ಅಸ್ತ್ರವಾಗಿಸಿಕೊಂಡಿದ್ದಾರೆ. ''ಕೈ''ಲಾಗದ ರಾಹುಲ್ ಗಾಂಧಿ ಅವರ ಯೋಗ್ಯತೆಗೆ ಕನ್ನಡಿ ಹಿಡಿಯಲು ತಮ್ಮ ಪರಮಾಪ್ತ ಸಚಿವ ಕೆನ್ ರಾಜಣ್ಣ ಅವರ ಕೈಯಲ್ಲಿ ಹೇಳಿಕೆ ಕೊಡಿಸುತ್ತಿದ್ದಾರಾ ಸಿಎಂ ಸಿದ್ದರಾಮಯ್ಯನವರು? ಎಂದು ವಿಪಕ್ಷ ನಾಯಕ ಆರ್ ಅಶೋಕ್, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ವ್ಯಂಗ್ಯವಾಡಿದ್ದಾರೆ.

ಲೋಕಸಭಾ ಚುನಾವಣೆಯ ಸಮಯದಲ್ಲಿ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ 1 ಲಕ್ಷ ಮತಗಳ ಕಳ್ಳತನವಾಗಿದೆ ಎಂದು ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಆರೋಪಿಸಿದ್ದಾರೆ. ಆದರೆ, ''ವೋಟರ್ ಲಿಸ್ಟ್‌ನ್ನು ನಮ್ಮದೇ ಸರ್ಕಾರ ಇರುವಾಗ ಮಾಡಿರುವುದು. ಆಗ ಕಣ್ಮುಚ್ಚಿ ಕುಳಿತಿದ್ದು ಈಗ ಹೇಳಿದರೆ ಏನು ಪ್ರಯೋಜನ'' ಎಂದು ಸಚಿವ ಕೆ.ಎನ್ ರಾಜಣ್ಣ ಹೇಳುವ ಮೂಲಕ ತಮ್ಮದೇ ಪಕ್ಷದ ನಾಯಕರು ಮುಜುಗರಕ್ಕೀಡಾಗುವಂತೆ ಮಾಡಿದ್ದರು. ಈ ಹೇಳಿಕೆಯನ್ನಿಟ್ಟುಕೊಂಡು ವಿಪಕ್ಷ ನಾಯಕ ಆರ್ ಅಶೋಕ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ವಾಗ್ದಾಳಿ ಮಾಡಿದ್ದಾರೆ.

# ನವ ಯುಗ ಮೆಟ್ರೋ ವೇಗ



• ಹಳದಿ ಮೆಟ್ರೋಗೆ 'ನಮೋ' ಚಾಲನೆ
• ನಮ್ಮ ಮೆಟ್ರೋದಲ್ಲಿ ಪಿಎಂ, ಸಿಎಂ, ಡಿಸಿಎಂ ಸಂಚಾರ
• ಸೋಮವಾರದಿಂದ ಸಂಚಾರ ಆರಂಭ
• ನಮ್ಮ ಮೆಟ್ರೋ 3 ನೇ ಹಂತಕ್ಕೆ ಮೋದಿ ಚಾಲನೆ
• ನಮ್ಮ ಮೆಟ್ರೋಗೆ ರಾಜ್ಯದ ಪಾಲೇ ಹೆಚ್ಚು - ಮೋದಿ ಎದುರೇ ಸಿದ್ದರಾಮಯ್ಯ 'ಕ್ರೆಡಿಟ್' ಕ್ಲೈಮ್

• ಉದಯವಾಹಿನಿ ಬೆಂಗಳೂರು

ರಾಗಿಗುಡ್ಡ ಮೆಟ್ರೋ ನಿಲ್ದಾಣದಲ್ಲಿ ಹಳದಿ ಮೆಟ್ರೋಗೆ ಚಾಲನೆ ಕೊಟ್ಟು, ಮೆಟ್ರೋದಲ್ಲಿ ಸಂಚರಿಸಿದ ಬಳಿಕ, ಐಐಐಟಿ ಆಡಿಟೋರಿಯಂನಲ್ಲಿ 3ನೇ ಹಂತದ ಮೆಟ್ರೋಗೆ ಶಂಕುಸ್ಥಾಪನೆ ನೆರವೇರಿಸಿದರು. ಈ ವೇಳೆ ವೇದಿಕೆಯಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ, ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ, ವಿ ಸೋಮಣ್ಣ, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಸಂಸದರಾದ ಶೋಭಾ ಕರಂದ್ಲಾಜೆ, ವಿಪಕ್ಷ ನಾಯಕ ಆರ್ ಅಶೋಕ್, ತೇಜಸ್ವಿ ಸೂರ್ಯ, ಬಿ ವೈ ವಿಜಯೇಂದ್ರ, ಹರಿಯಾಣದ ಮಾಜಿ ಸಿಎಂ, ಮನೋಹರ್ ಲಾಲ್ , ಕೇಂದ್ರ ಸರ್ಕಾರದ ಮಂತ್ರಿ ಅಶ್ವಿನಿ ವೈಷ್ಣವ್, ಭೈರತಿ ಸುರೇಶ್, ಸಂಸದ ಡಾ ಮಂಜುನಾಥ್, ಭಾಗಿಯಾಗಿದ್ದಾರೆ. ಹಳದಿ ಮಾರ್ಗದ ಮೆಟ್ರೋ ಉದ್ಘಾಟನೆ ಬಳಿಕ ಬೆಂಗಳೂರು ಉತ್ತರ ಭಾಗವನ್ನು ಸಂಪರ್ಕಿಸುವ ಕೆಂಪಾಪುರ- ಜೆಪಿ ನಗರ ಮಾರ್ಗಕ್ಕೆ ಅಡಿಗಲ್ಲು ಹಾಕಿದ್ದಾರೆ. 44.65 ಕಿಮೀ ಉದ್ದದ ಈ ಮಾರ್ಗಕ್ಕೆ 15,611 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣ ಆಗುತ್ತಿದೆ. ಶಂಕುಸ್ಥಾಪನೆ ಕಾರ್ಯಕ್ರಮದ ವೇದಿಕೆಯಲ್ಲಿ ಕೆಲವೇ ಮಂದಿಗೆ ಅವಕಾಶ ಕೊಡಲಾಗಿತ್ತು. ನಮ್ಮ ಮೆಟ್ರೋ ಯೋಜನೆಗೆ ಕೇಂದ್ರ ಕೊಡುತ್ತಿರುವ ಅನುದಾನ ಕಡಿಮೆಯಾಗುತ್ತಿದೆ, ಹೆಚ್ಚು ಸಹಕಾರ ಕೊಡಿ ಎಂದು ಸಿಎಂ ಸಿದ್ದರಾಮಯ್ಯ ಪ್ರಧಾನಿಗೆ ಮನವಿ ಮಾಡಿದ್ದಾರೆ. ಅಲ್ಲದೆ 2030ರವೇಳೆಗೆ 30 ಲಕ್ಷ ಪ್ರಯಾಣಿಕರಿಗೆ ಅನುಕೂಲ ಆಗುವಂತೆ ಹೆಚ್ಚು ಮಾರ್ಗಗಳ ನಿರ್ಮಾಣ ಆಗಲಿದೆ ಎಂದು ಸಿಎಂ ಇದೇ ವೇದಿಕೆಯಲ್ಲಿ ಹೇಳಿದ್ದಾರೆ.

**ಚೆನ್ನಾಗಿದ್ದೀರಾ ಎಂದು ಮಾತು ಆರಂಭಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್:** ಭಾರತದ ಆರ್ಥಿಕತೆ ಮುನ್ನುಗ್ಗುತ್ತಿದೆ. ಎಲೆಕ್ಟ್ರಾನಿಕ್ಸ್ ಸೆಕ್ಟರ್ ಹಾಗೂ ರೈಲಿನ ವಿಭಾಗದಲ್ಲಿ ಭಾರತದ ಆರ್ಥಿಕತೆಯು ಮುನ್ನುಗ್ಗಯತ್ತಿದೆ.

ಎಲೆಕ್ಟ್ರಾನಿಕ್ ಉತ್ಪನ್ನಗಳನ್ನು ಹೆಚ್ಚೆಚ್ಚು ಉತ್ಪಾದಿಸುತ್ತಿದ್ದು, ದೇವನಹಳ್ಳಿ ಐ ಫೋನ್ ಉತ್ಪತ್ತಿ ಮಾಡುತ್ತಿರುವ ಪ್ರಮುಖ ಪ್ರದೇಶ ಆಗುತ್ತಿದೆ., ಅಮೆರಿಕಕ್ಕೆ ಅತಿಹೆಚ್ಚು ಫೋನ್ ಗಳು ರಫ್ತಾಗುತ್ತಿವೆ. ಬೆಂಗಳೂರಲ್ಲಿ ಅತಿ ಹೆಚ್ಚು ಉತ್ಪಾದನೆ, ಸ್ಟಾರ್ಟ್ ಅಪ್ ಕಂಪನಿಗಳು ಕೆಲಸ ಮಾಡುತ್ತಿವೆ. 6 ಸೆಮಿ ಕಂಡಕ್ಟರ್ ಪ್ಲಾಂಟ್ ಇಂಡಸ್ಟ್ರಿಯೂ ಬಂದಿವೆ. ಇವೆಲ್ಲಾ ಸಾಧ್ಯವಾಗಿದ್ದು ಪ್ರಧಾನಿ ಮೋದಿ ನಿರ್ದೇಶನದಲ್ಲಿ ಎಂದಿದ್ದಾರೆ. ಕಳೆದ 11 ವರ್ಷದಲ್ಲಿ ಹೊಸ ಮಾರ್ಗಗಳು, ನಿಲ್ದಾಣಗಳ ನವೀಕರಣಗೊಳ್ಳುತ್ತಿವೆ. ಬುಲೆಟ್ ಟ್ರೈನ್ ನಿರ್ಮಾಣವೂ ವೇಗದಲ್ಲಿ ನಡೆಯುತ್ತಿದೆ ಎಂದರು. ಕರ್ನಾಟಕದದ ರೈಲಿಗೆ ಬಹುದೊಡ್ಡ ಯೋಜನೆ ಕೊಟ್ಟಿದ್ದಾರೆ ಎಂದು ಹೇಳಿದ್ದಾರೆ.

**ಯೋಜನೆಯ ಮಹತ್ವ ವಿವರಿಸಿದ ಸಿಎಂ:** ಸಿಎಂ ಸಿದ್ದರಾಮಯ್ಯ ಕರ್ನಾಟಕ ಸರ್ಕಾರದ ವತಿಯಿಂದ ಪ್ರಧಾನಿ ಮೋದಿಯವರಿಗೆ ಆತ್ಮೀಯ ಸ್ವಾಗತ ಕೋರಿದರು. ಮೂರು ಪ್ರಮುಖ ಕಾರ್ಯಕ್ರಮಗಳಿಗಾಗಿ ಬೆಂಗಳೂರಿಗೆ ಆಗಮಿಸಿದ ಮೋದಿಯವರನ್ನು ಗೌರವಿಸಿದ ಅವರು, ಹಳದಿ ಮಾರ್ಗದ ಉದ್ಘಾಟನೆಯು ನಗರದ ಸಾರಿಗೆ ವ್ಯವಸ್ಥೆಯಲ್ಲಿ ದೊಡ್ಡ ಮೈಲಿಗಲ್ಲಾಗಿದೆ ಎಂದರು. 19.15 ಕಿ.ಮೀ. ಉದ್ದದ ಈ ಮಾರ್ಗವು 7,160 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಿದ್ದು, ದಿನಕ್ಕೆ 3.5 ಲಕ್ಷ ಪ್ರಯಾಣಿಕರಿಗೆ ಸೇವೆ ಒದಗಿಸಲಿದೆ. ಈಗಾಗಲೇ 9 ಲಕ್ಷ ಜನರು ದಿನನಿತ್ಯ ಮೆಟ್ರೋದಲ್ಲಿ ಪ್ರಯಾಣಿಸುತ್ತಿದ್ದು, ಈ ಮಾರ್ಗದ ಸೇರ್ಪಡೆಯಿಂದ 12.5 ಲಕ್ಷ ಜನರಿಗೆ ಸೌಲಭ್ಯ ದೊರೆಯಲಿದೆ ಎಂದರು.

**ಭಾರತದ ಆರ್ಥಿಕತೆಗೆ ವೇಗ**

1. ಮೋದಿ 3 ನೇ ಹಂತದ ಮೆಟ್ರೋಗೆ ಶಂಕುಸ್ಥಾಪನೆ ನೆರವೇರಿಸಿದರು.
2. ಕೆಂಪಾಪುರ-ಜೆಪಿ ನಗರ ಮಾರ್ಗವು 44.65 ಕಿಮೀ ಉದ್ದದಿದ್ದು, ಇದರ ನಿರ್ಮಾಣಕ್ಕೆ 15,611 ಕೋಟಿ ರೂ ವೆಚ್ಚವಾಗಲಿದೆ.
3. ಭಾರತದ ಆರ್ಥಿಕತೆಯ ಪ್ರಗತಿಯ ಕುರಿತಂತೆ ಮಾತನಾಡಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
4. ಮೊದಲು ಕರ್ನಾಟಕಕ್ಕೆ 835 ಕೋಟಿ ರೈಲ್ವೆ ಬಜೆಟ್ ಸಿಗುತ್ತಿತ್ತು, ಆದರೆ ಪ್ರಗತಿಯು ಈಗ 7,500 ಕೋಟಿ ರೂ ಅನುದಾನಕ್ಕೆ ಏರಿಕೆಯಾಗಿದೆ.

### ಸುರಿವ ಮಳೆಯಲ್ಲೇ ಮೋದಿಗೆ ಬೀಳ್ಕೊಡುಗೆ

ನಮ್ಮ ಮೆಟ್ರೋ ಹಳದಿ ಮಾರ್ಗಕ್ಕೆ ಚಾಲನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಉದ್ಘಾಟನೆ ನೆರವೇರಿಸಿದ ಪ್ರಧಾನಿ ಮೋದಿ ಕರ್ನಾಟಕದ ಕಾರ್ಯಕ್ರಮ ಮುಗಿಸಿ ದೆಹಲಿಗೆ ವಾಪಸ್ಸಾದರು. ಕರ್ನಾಟಕ ಸರ್ಕಾರ, ವಸತಿ ಮತ್ತು ಕೇಂದ್ರ ನಗರ ವ್ಯವಹಾರಗಳ ಸಚಿವಾಲಯ ಹಾಗೂ ಕೇಂದ್ರ ರೈಲ್ವೆ ಮಂಡಳಿ ಮತ್ತು ರೈಲ್ವೇ ಸಚಿವಾಲಯದ ವತಿಯಿಂದ ಇಂದು ಹಮ್ಮಿಕೊಳ್ಳಲಾಗಿದ್ದ ಬೆಂಗಳೂರು ಮೆಟ್ರೋ ಹಂತ-2ರ ಹಳದಿ ಮಾರ್ಗ ಉದ್ಘಾಟನೆ, ಬೆಂಗಳೂರು ಮೆಟ್ರೋ ಹಂತ-3ರ ಶಂಕುಸ್ಥಾಪನೆ, ಮೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಚಾಲನೆ ನೀಡುವ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿ ಅವರು ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ದೆಹಲಿಗೆ ವಾಪಸ್ಸಾದರು. ಸುರಿವ ಮಳೆಯ ನಡುವೆಯೇ ಪ್ರಧಾನ ಮಂತ್ರಿಗಳನ್ನು ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಆತ್ಮೀಯವಾಗಿ ಬೀಳ್ಕೊಟ್ಟರು.



### ಮೋದಿ ಹಾಸ್ಯಕ್ಕೆ ಸಿದ್ದು, ಡಿಕೆಶಿಗೆ ನಗುವೋ ನಗು..!

ನಮ್ಮ ಮೆಟ್ರೋ ಹಳದಿ ಮಾರ್ಗಕ್ಕೆ ಚಾಲನೆ ನೀಡಿದ ಬಳಿಕ ಪ್ರಧಾನಿ ನರೇಂದ್ರ ಮೋದಿ, ಸಿಎಂ ಸಿದ್ದರಾಮಯ್ಯ, ಡಿಕೆಶಿವಕುಮಾರ್ ಜೊತೆಯಾಗಿ ಪ್ರಯಾಣಿಸಿದರು. ಮೆಜೆಸ್ಟಿಕ್‌ನಲ್ಲಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣದಲ್ಲಿ ಮೂರು ವಂದೇ ಭಾರತ್ ರೈಲಿಗೆ ಮೋದಿ ಚಾಲನೆ ನೀಡಿದ ಬಳಿಕ ಮೆಟ್ರೋ ಉದ್ಘಾಟನೆ ಮಾಡಲು ರಾಗಿಗುಡ್ಡಕ್ಕೆ ಬಂದರು. ಹಳದಿ ಮಾರ್ಗದಲ್ಲಿ ಸಂಚರಿಸುವ ರೈಲಿಗೆ ಮೋದಿ ಚಾಲನೆ ನೀಡಿದ ಬಳಿಕ ಪ್ರಧಾನಿ, ಸಿಎಂ, ಡಿಸಿಎಂ ಮೆಟ್ರೋ ರೈಲಿನಲ್ಲಿ ಜೊತೆಯಾಗಿ ಕುಳಿತು ಕೋನಪ್ಪನ ಅಗ್ರಹಾರ (ಇನ್ಫೋಸಿಸ್ ಫೌಂಡೇಶನ್ ಮೆಟ್ರೋ ಸ್ಟೇಷನ್) ಪ್ರಯಾಣಿಸಿದರು. ಈ ಪ್ರಯಾಣದ ವೇಳೆ ಎದುರುಗಡೆ ಬಿಜೆಪಿ ಸಂಸದರು ಕುಳಿತಿದ್ದರು. ಈ ಸಂದರ್ಭದಲ್ಲಿ ಮೋದಿ ಯಾವುದೇ ವಿಷಯನ್ನು ಪ್ರಸ್ತಾಪಿಸಿದ್ದಾರೆ. ಈ ಮಾತನ್ನು ಕೇಳಿ ಸಿದ್ದರಾಮಯ್ಯ ಮತ್ತು ಡಿಕೆಶಿವಕುಮಾರ್ ಬಿದ್ದು ಬಿದ್ದು ನಕ್ಕಿದ್ದಾರೆ.

> ಮೆಟ್ರೋ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ. ಕೇಂದ್ರ 50%, ರಾಜ್ಯ 50% ಖರ್ಚು ಮಾಡುವ ಒಪ್ಪಂದ ಆಗಿದೆ. ಆದ್ರೆ ರಾಜ್ಯ ಸರ್ಕಾರವೇ ಹೆಚ್ಚು ಖರ್ಚು ಮಾಡ್ತಿದೆ. ಈಗಾಗಲೇ 96.10 ಕಿಮೀ ಮೆಟ್ರೋ ರೈಲು ಕೆಲಸ ಮುಗಿದಿದೆ. ಇದಕ್ಕೆ ರಾಜ್ಯ 25,387 ಕೋಟಿ ರೂ. ಖರ್ಚು ಮಾಡಿದೆ. ಕೇಂದ್ರ 7,468.86 ಕೋಟಿ ಖರ್ಚು ಮಾಡಿದೆ, ಹಳದಿ ಮಾರ್ಗಕ್ಕೆ 7,160 ಕೋಟಿ ಖರ್ಚಾಗಿದೆ.
> -ಸಿದ್ದರಾಮಯ್ಯ, ಸಿಎಂ

> ಬೆಂಗಳೂರಿನ ನಮ್ಮ ಮೆಟ್ರೋ ಯೆಲ್ಲೋ ಲೈನ್‌ಗೆ ಪ್ರಧಾನಿ ಮೋದಿ ಅವರು ಭಾನುವಾರ ಹಸಿರು ನಿಶಾನೆ ತೋರಿಸಿದ್ದಾರೆ. ಈ ಭಾಗದಲ್ಲಿ ಮೆಟ್ರೋ ರೈಲಿನಿಂದ ಲಕ್ಷಾಂತರ ಜನರಿಗೆ ಅನುಕೂಲವಾಗಲಿದೆ. ಅಲ್ಲದೇ ಬೆಂಗಳೂರಿನ ಪ್ರಮುಖ ಭಾಗದಲ್ಲಿ ಟ್ರಾಫಿಕ್ ಜಾಮ್ ಸಹ ಕಡಿಮೆ ಆಗಲಿದೆ ಎಂದೂ ಹೇಳಲಾಗಿದೆ. ಬೆಂಗಳೂರು ನಗರದ ಮಹಾಜನರ ಬಹುನಿರೀಕ್ಷಿತವಾಗಿದ್ದ ನಮ್ಮ ಮೆಟ್ರೋ ಹಳದಿ ಮಾರ್ಗವನ್ನು ಲೋಕಾರ್ಪಣೆ ಮಾಡಿದರು. ಎಲೆಕ್ಟ್ರಾನಿಕ್ ಸಿಟಿ, ಬಿಟಿಎಂ ಲೇಔಟ್ ಮತ್ತು ಸಿಲ್ಕ್ ಬೋರ್ಡ್‌ನಂತಹ ಅತ್ಯಂತ ಪ್ರಮುಖ ತಂತ್ರಜ್ಞಾನ ತಾಣಗಳಿಗೆ ಪ್ರಯಾಣವನ್ನು ಪರಿವರ್ತನಾತ್ಮಕವಾಗಿ ಸುಗಮಗೊಳಿಸುತ್ತದೆ.-ಎಚ್.ಡಿ ಕುಮಾರಸ್ವಾಮಿ, ಕೇಂದ್ರ ಸಚಿವ

### ಕರ್ನಾಟಕಕ್ಕೆ ರೈಲ್ವೆ ಇಲಾಖೆಗೆ ಬೃಹತ್ ಕೊಡುಗೆ

ದೇಶದಲ್ಲಿ 35,000 ಕಿಮೀ ರೈಲು ಮಾರ್ಗ ನಿರ್ಮಾಣ ಆಗಲಿದೆ. ಎಲ್ಲಾ ಮಾರ್ಗಗಳೂ ವಿದ್ಯುದೀಕರಣಗೊಳ್ಳಿತ್ತಿದೆ. 1,300 ರೈಲು ನಿಲ್ದಾಣಗಳ ನವೀಕರಣ ಆಗಲಿದೆ. ವಿಶ್ವದ ದೊಡ್ಡರೈಲು ನಿಲ್ದಾಣವೂ ಪುನರ್ ಅಭಿವೃದ್ಧಿ ಆಗುತ್ತಿದೆ. ವಂದೇ ಭಾರತ್, ನವ ಭಾರತ್, ಅಮೃತ್ ಭಾರತ ರೈಲುಗಳು ಆಧುನೀಕರಣಗೊಂಡ ರೈಲುಗಳಾಗಿದ್ದು, ಇಂದೂ ಕೂಡಾ ಪ್ರಧಾನಿ 3 ರೈಲುಗಳಿಗೆ ಚಾಲನೆ ಕೊಟ್ಟಿದ್ದಾರೆ ಎಂದರು. 2014 ಕ್ಕಿಂತ ಮೊದಲು ಕರ್ನಾಟಕಕ್ಕೆ ಕೇವಲ 835 ಕೋಟಿ ಅಷ್ಟೇ ರೈಲ್ವೆ ಬಜೆಟ್ ಸಿಗುತ್ತತ್ತು. ಆದರೆ ಪ್ರಧಾನಿ 7,500 ಕೋಟಿರೂ ಅನುದಾನವನ್ನು ಕರ್ನಾಟಕಕ್ಕೆ ಕೊಟ್ಟಿದ್ದಾರೆ. 54,000 ಕೋಟಿ ರೂ ಯೋಜನೆಗಳು ನಡೆಯುತ್ತಿವೆ. 61 ನಿಲ್ದಾಣಗಳು ಅಭಿವೃದ್ಧಿಯಾಗುತ್ತಿವೆ.

### ದೇಶದ ಮಾಹಿತಿ ತಂತ್ರಜ್ಞಾನ, ರಕ್ಷಣಾ ಕ್ಷೇತ್ರಕ್ಕೆ ಬೆಂಗಳೂರಿನ ಕೊಡುಗೆ ಅಪಾರ

ದೇಶದ ಮಾಹಿತಿ ತಂತ್ರಜ್ಞಾನ, ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸುವಲ್ಲಿನ ಪ್ರಗತಿಗೆ ಬೆಂಗಳೂರು ಮತ್ತು ಬೆಂಗಳೂರು ಜನರ ಕೊಡುಗೆ ಅಪಾರವಾದದು ಎಂದು ಪ್ರಧಾನಿ ದಿ ಹೇಳಿದರು. ವಿಶ್ವದ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಬೆಂಗಳೂರು ಸ್ಥಾನ ಪಡೆದಿದೆ. ಬೆಂಗಳೂರನ್ನು ಭವಿಷ್ಯಕ್ಕೆ ಸಿದ್ಧಪಡಿಸಲು ಮೆಟ್ರೋ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಬೆಂಗಳೂರು ಈಗ ಅತಿ ಉದ್ದದ ಮೆಟ್ರೋ ಜಾಲಹೊಂದಿರುವ ದೇಶದ ಎರಡನೇ ನಗರವಾಗಿದೆ ಎಂದರು. 2014ರಲ್ಲಿ ದೇಶದ ಐದು ನಗರಗಳಲ್ಲಿ ಮಾತ್ರವೇ ಮೆಟ್ರೋ ರೈಲು ಮೂಸೌಕರ್ಯ ಇತ್ತು. ಈಗ ದೇಶದ 20 ನಗರಗಳಲ್ಲಿ ಮೆಟ್ರೋ ಇದೆ. ದೇಶದಲ್ಲಿ 1,000 ಕಿ.ಮೀ.ಗೂ ಹೆಚ್ಚು ಉದ್ದದ ಮೆಟ್ರೋ ಜಾಲವಿದೆ. 951 ಕಿ.ಮೀ. ಉದ್ದದ ಮೆಟ್ರೋ ಕಾಮಗಾರಿ ನಿರ್ಮಾಣ ಹಂತದಲ್ಲಿದೆ ಎಂದು ಮಾಹಿತಿ ನೀಡಿದರು.

# ಟೈಲರ್ ವೃತ್ತಿ ಬಾಂಧವರ ಸಮಸ್ಯೆ ಪರಿಹರಿಸಲು ಶೀಘ್ರದಲ್ಲೇ ಸಿಎಂ ಬಳಿಗೆ ನಿಯೋಗ

• ಸರ್ಕಾರದ ಗಮನ ಸೆಳೆದು ನಮ್ಮ ಟೈಲರ್ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಿಕೊಳ್ಳಬೇಕಾಗಿದೆ : ಜಯಪ್ರಕಾಶ್ ಹೆಗಡೆ

• ಉದಯವಾಹಿನಿ ಬೆಂಗಳೂರು

ರಾಜ್ಯದಲ್ಲಿ 10 ಲಕ್ಷಕ್ಕೂ ಹೆಚ್ಚು ಅಧಿಕ ಹೊಲಿಗೆ ವೃತ್ತಿಯಿಂದ ತಮ್ಮ ಜೀವನ ನಡೆಸುತ್ತಿದ್ದು ಈ ವೃತ್ತಿಬಾಂಧವರ ಶಾಂತಿಯುತ ಹೋರಾಟ ಸುಮಾರು ವರ್ಷಗಳಿಂದ ನಡೆಯುತ್ತಾ ಬಂದಿದ್ದರು ಸಹ ಸರ್ಕಾರ ಗಮನ ಹರಿಸದೆ ಇರುವುದು ನೋವಿನ ಸಂಗತಿ ಆದ್ದರಿಂದ ಕೂಡಲೇ ರಾಜ್ಯ ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಮುಖ್ಯಮಂತ್ರಿಗಳು ಮತ್ತು ಕಾರ್ಮಿಕ ಸಚಿವರು ಹಾಗೂ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳಿಗೆ ಟೈಲರ್ ಕಾರ್ಮಿಕ ಕಲ್ಯಾಣ ಮಂಡಳಿ ರಚನೆಗೆ ಚರ್ಚೆ ನಡೆಸಲು ಶೀಘ್ರದಲ್ಲಿ ತೆರಳುವುದಾಗಿ ಪ್ರಭಾವಿ ರಾಜಕಾರಣಿ ಹಾಗೂ ಮಾಜಿ ಸಚಿವರಾದ ಜಯಪ್ರಕಾಶ್ ಹೆಗಡೆ ತಿಳಿಸಿದರು.

ಸಭೆಯಲ್ಲಿ ಶ್ರೀ ಕೃಷ್ಣ ಮಠದ ಪರ್ಯಾಯ ಪುತ್ತಿಗೆ ಮಠದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಮಹಾಸ್ವಾಮಿಜಿಗಳು ಆಶೀರ್ವಚನ ನೀಡಿ ಟೈಲರ್ ವೃತ್ತಿ ಬಹಳ ಪವಿತ್ರವಾದ ಮತ್ತು ಸಾವಿರಾರು ವರ್ಷಗಳ ಇತಿಹಾಸ ಇರುವ ವೃತ್ತಿಯಾಗಿದ್ದು ಈ ವೃತ್ತಿಯನ್ನು ನೆನೆಸಿಕೊಂಡು ಬರುತ್ತಿರುವ ನಿಮಗೆ ಸರ್ಕಾರ ಕೂಡಲೇ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಆಗಲಿ ಇದಕ್ಕೆ ಶ್ರೀಕೃಷ್ಣ ಪರಮಾತ್ಮರ ಆಶೀರ್ವಾದ ತಮ್ಮ ಮೇಲೆ ಸದಾ ಇರಲಿ ಎಂದು ಆಶೀರ್ವಚನ ನೀಡಿದರು.


ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ಸಂಸ್ಥೆಯ ಬೇಡಿಕೆಗಳ ಬಗ್ಗೆ ಪ್ರಸ್ತಾವಿಕವಾಗಿ ಮಾತನಾಡಿದ ದಯಾನಂದ ಕೋಟಿಯನ್ ನಮ್ಮ ಸಂಘಟನೆ ಮಂಗಳೂರಿನಲ್ಲಿ 1999 ರಲ್ಲಿ ಪ್ರಾರಂಭಗೊಂಡು 2000ನೇ ಇಸ್ವಿಯಲ್ಲಿ ಉಡುಪಿಯಲ್ಲಿ ಪ್ರಾರಂಭವಾಗಿ 25 ವರ್ಷಗಳನ್ನು ಪೂರೈಸುತ್ತಿದ್ದು ರಜತ ಸಂಭ್ರಮ ಟೈಲರ್ ವೃತ್ತಿಬಾಂಧವರ ಸಮಾವೇಶವನ್ನು ಉಡುಪಿಯಲ್ಲಿ ನಡೆಸುತ್ತಿದ್ದು ಈ ಸಮಾವೇಶದ ಮುಖಾಂತರ ಸರ್ಕಾರಕ್ಕೆ ನಮ್ಮ ಸಮಸ್ಯೆಗಳನ್ನು ಕಳುಹಿಸುತ್ತೇವೆ ಸರ್ಕಾರ ಕೂಡಲೇ ಕರ್ನಾಟಕ ಟೈಲರ್ಸ್ ಕಲ್ಯಾಣ ಮಂಡಳಿಯನ್ನು ರಚಿಸಬೇಕು ಇದರ ಮುಖಾಂತರ ವೃದ್ಧಾಪ್ಯ ವೇತನ ವಿಧವಾ ವೇತನ ಮಾಸಾಶನ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿ ವೇತನ ಹೊಲಿಗೆ ಕಾರ್ಮಿಕರಿಗೆ ಉಚಿತ ಆರೋಗ್ಯ ಸೇವೆ ಜೀವ ವಿಮೆ ಆರೋಗ್ಯ ವಿಮೆ ಈ ಬೇಡಿಕೆಗಳನ್ನು ಈಡೇರಿಸಬೇಕಿದೆ ಟೈಲರ್ ವೃತ್ತಿಯನ್ನು ಕೂಡಲೇ ಜವಳಿ ನಿಗಮಕ್ಕೆ ಸೇರ್ಪಡೆಗೊಳಿಸಿ ಹೊಲಿಗೆ ಯಂತ್ರ ದಾರ ಇನ್ನಿತರ ಟೈಲರ್ಗಳು ಬಳಸುವ ಕಚ್ಚಾವಸ್ತುಗಳ ಮೇಲೆ ಸೆಸ್ ವಿಧಿಸಿ ಕರ್ನಾಟಕ ರಾಜ್ಯ ಮೋಟಾರ್ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಯ ರೀತಿಯಲ್ಲಿ ಟೈಲರ್ ಸಂಘಟನೆಗಳಿಗೂ ಸಹ ಸವಲತ್ತುಗಳನ್ನು ನೀಡಬೇಕಾಗಿದೆ ಇಂದಿನ ಸಮಾರಂಭದಲ್ಲಿ ಸುಮಾರು 10000 ಹೊಲಿಗೆ ಕಾರ್ಮಿಕರು ಸೇರಿದ್ದು ಸಚಿವರು ಈ ಸಮಾರಂಭಕ್ಕೆ ಬರದೇ ಇರುವುದು ತುಂಬ ಶೋಚನೀಯ ಸಂಗತಿ ಎಂದರು.

ಸಮಾರಂಭದಲ್ಲಿ ಟೈಲರ್ ಅಸೋಶಿಯೇಷನ್ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿದ ಹಲವಾರು ಮಹನೀಯರಿಗೆ ಸನ್ಮಾನಿಸಲಾಯಿತು. ಉಡುಪಿ ಜಿಲ್ಲೆಯ ವಲಯ ಸಮಿತಿ ತಾಲ್ಲೂಕು ಸಮಿತಿ ಜಿಲ್ಲಾ ಸಮಿತಿ ಹಾಗೂ ರಾಜ್ಯ ಟೈಲರ್ಸ್ ಅಸೋಶಿಯೇಷನ್ ಸಂಸ್ಥೆಯ ಹಲವಾರು ಜಿಲ್ಲೆಯ ಪದಾಧಿಕಾರಿಗಳು ಕ್ರಿಯಾಶೀಲರಾಗಿ ಭಾಗವಹಿಸಿದ್ದು ಸಂತೋಷ ತಂದಿತು ಸಮಾರಂಭದಲ್ಲಿ ಕರ್ನಾಟಕ ಸ್ಟೇಟ್ ಟೈಲರ್ ಸೋಶಿಯೇಶನ್ ರಾಜ್ಯಾಧ್ಯಕ್ಷರಾದ ಬಿ ಎ ನಾರಾಯಣ. ಕೋಶಾಧಿಕಾರಿಗಳಾದ ರಾಮಚಂದ್ರ. ಉಡುಪಿ ಜಿಲ್ಲಾಧ್ಯಕ್ಷರಾದ ಗುರುರಾಜ್ ಎಂ ಶೆಟ್ಟಿ ಉಡುಪಿ ಜಿಲ್ಲಾ ಕೋಶಾಧಿಕಾರಿಗಳಾದ ಯೋಗೇಶ್ ಕಾಮತ್ ಪ್ರಧಾನ ಕಾರ್ಯದರ್ಶಿ ದಯಾನಂದ ಕೋಟ್ಯಾನ್ ಉಪಸ್ಥಿತರಿದ್ದರು.





ಉದಯವಾಹಿನಿ ಚಿತ್ರ



> ಉಡುಪಿಯ ಶ್ರೀ ಕೃಷ್ಣ ಮಠದ ರಾಜಾಂಗಣದ ಆವರಣದಲ್ಲಿ ನಡೆದ ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ಸಂಸ್ಥೆಯ ರಜತ ಸಂಭ್ರಮ 25 ಟೈಲರ್ ವೃತ್ತಿಬಾಂಧವರ ಬೃಹತ್ ಸಮಾವೇಶ ಮತ್ತು ಮಹಾಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಈ ಸಭೆಯಲ್ಲಿ 10,000ಕ್ಕೂ ಹೆಚ್ಚು ವೃತ್ತಿಬಾಂಧವರು ಸೇರಿದ್ದು ಸಂತೋಷ ತಂದಿದೆ ನಿಮ್ಮ ಈ ಶಾಂತಿಯುತ ಹೋರಾಟ ಪ್ರಯೋಜನವಾಗುವುದಿಲ್ಲ ಮುಖ್ಯಮಂತ್ರಿಗಳು ಹಾಗೂ ಕಾರ್ಮಿಕ ಸಚಿವರು ಮತ್ತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳೊಂದಿಗೆ ಸಮಯವನ್ನು ಗೊತ್ತುಪಡಿಸಿ ಹೊಲಿಗೆ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ತಮ್ಮ ಹಲವಾರು ಬೇಡಿಕೆಗಳ ಬಗ್ಗೆ ಚರ್ಚೆ ನಡೆಸಿ ಸರ್ಕಾರದ ಗಮನ ಸೆಳೆದು ಈ ನಮ್ಮ ಟೈಲರ್ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಿಕೊಳ್ಳಬೇಕಾಗಿದೆ -ಜಯಪ್ರಕಾಶ್ ಹೆಗಡೆ, ಮಾಜಿ ಸಚಿವ

**ಟೈಲರ್ ವೃತ್ತಿಬಾಂಧವರ ಸಮಾವೇಶ**

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,304 /Gram(24ct) ₹9,445/Gram(22ct) | ಬೆಳ್ಳಿ: ₹117.00/Gram

# ಪಿಆರ್‌ಆರ್-1 ಯೋಜನೆ ಭೂ ಸ್ವಾಧೀನ: ಸಂಧಾನ ಸೂತ್ರದ ಸಭೆ

## ಭೂ ಪರಿಹಾರ ಕಗ್ಗಂಟು, ಬೆದರಿಸಿ ಸಂಧಾನ ಸೂತ್ರದ ಪತ್ರಕ್ಕೆ ಸಹಿ: ಭೂ ಮಾಲೀಕರ ಆರೋಪ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಉದ್ದೇಶಿತ ಪೆರಿಫೆರಲ್ ವರ್ತುಲ ರಸ್ತೆ ಪಿಆರ್‌ಆರ್1 ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಯೋಜನೆಗೆ ಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿರುವ ಜಮೀನುಗಳಿಗೆ ದರ ನಿಗದಿ ಸಂಬಂಧ ಭೂ ಮಾಲೀಕರೊಂದಿಗೆ ಸಂಧಾನ ಸೂತ್ರದ ಸಭೆ ಆಯೋಜಿಸಿದೆ. ಯೋಜನೆಗಾಗಿ ಸ್ವಾಧೀನ ಪಡಿಸಿಕೊಳ್ಳುವ ಜಮೀನಿಗೆ ಭೂ ಮಾಲೀಕರೊಂದಿಗೆ ಚರ್ಚಿಸಿ ದರ ನಿಗದಿ ಮಾಡಲು ಎಂಟು ಮಂದಿ ವಿಶೇಷ ಭೂ ಸ್ವಾಧೀನಾಧಿಕಾರಿಗಳ ತಂಡವನ್ನು ಪ್ರಾಧಿಕಾರ ರಚಿಸಿದೆ. ಈ ತಂಡವು ಆಗಸ್ಟ್ 11, 12 ರಂದು 66 ಗ್ರಾಮಗಳ ವ್ಯಾಪ್ತಿಯ ಭೂ ಮಾಲೀಕರ ಅಹವಾಲು ಆಲಿಸಲಿದೆ.

ಈ ಹಿಂದೆ ಅಧಿಕಾರಿಗಳು, ಯೋಜನೆಗೆ ಜಮೀನು ಬಿಟ್ಟುಕೊಡಲಿರುವ ಹಳ್ಳಿಗಳಿಗೆ ತೆರಳಿ ರೈತರನ್ನು ಮನವೊಲಿಸಲು ಸಂಧಾನ ಸಭೆ ನಡೆಸಿದ್ದರೂ ಪ್ರಯೋಜನವಾಗಿರಲಿಲ್ಲ. 2013ರ ಭೂಸ್ವಾಧೀನ ಕಾಯ್ದೆ ಅನ್ವಯ ಪರಿಹಾರ ನಿಗದಿ ಮಾಡಬೇಕು ಎಂದು ರೈತರು ಪಟ್ಟು ಹಿಡಿದರು. ಆದರೆ, ಪ್ರಾಧಿಕಾರ ಮಾತ್ರ ಭೂ ಸ್ವಾಧೀನ ಕಾಯ್ದೆ 1894ರ ಅನ್ವಯ ಸಂಧಾನ ಸೂತ್ರದಡಿ ಪರಿಹಾರ ನಿಗದಿಗೆ ಆದೇಶ ಮಾಡಿದ್ದರಿಂದ ಭೂ ಪರಿಹಾರ ಕಗ್ಗಂಟಾಗಿಯೇ ಉಳಿಯಿತು. ಕೆಲವು ಅಧಿಕಾರಿಗಳು ರೈತರನ್ನು ಬೆದರಿಸಿ ಸಂಧಾನ ಸೂತ್ರದ ಪತ್ರಕ್ಕೆ ಸಹಿ ಮಾಡಿಸಿಕೊಂಡಿದ್ದಾರೆ




ಎಂದು ಭೂ ಮಾಲೀಕರು ಆರೋಪಿಸಿದರು. ಈ ಬೆಳವಣಿಗೆ ನಡುವೆಯೇ ದರ ನಿಗದಿಗಾಗಿ ವಿಶೇಷ ತಂಡ ರಚಿಸಿದ್ದು, ಜಮೀನು ಮಾಲೀಕರಿಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಅವಕಾಶ ನೀಡಲಾಗಿದೆ.

**ಎಲ್ಲೆಲ್ಲಿ ಸಭೆ:** ಆಗಸ್ಟ್ 11 ರಂದು ಬೆಂಗಳೂರು ಪೂರ್ವದ ವರ್ತೂರು ನಾಡ ಕಚೇರಿ, ಬ್ಯಾಲಕರೆಯ ಗ್ರಾಮ ಪಂಚಾಯಿತಿ ಕಚೇರಿ, ಅವಲಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣ, ಚೀಮಸಂದ್ರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣ, ಬಿದರೇನ ಅಗ್ರಹಾರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣ, ಶೀಗೇಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣ ಹಾಗೂ ಕಾಡುಗೋಡಿಯ ಬಿಬಿಎಂಪಿ ಕಚೇರಿ ಆವರಣದಲ್ಲಿ ಸಭೆ ನಡೆಯಲಿದೆ. ಚನ್ನಸಂದ್ರ, ನಾಗೊಂಡನಹಳ್ಳಿ, ಹಗದೂರು, ಖಾನೆಕಂದಾಯ, ವಾಲೇಪುರ, ಬೆಳ್ಳಂದೂರು, ಅಮಾನಿಕೆರೆ, ಸೋರಹುಣಸೆ, ವರ್ತೂರು, ಗುಂಜೂರು, ಕಸಘಟ್ಟಪುರ, ಬ್ಯಾಲಕರೆ, ಜಾರಕಬಂಡಕಾವಲು, ಅವಲಹಳ್ಳಿ, ಚೀಮಸಂದ್ರ, ಅವಲಹಳ್ಳಿ, ಶೀಗೇಹಳ್ಳಿ, ಚಿಕ್ಕಬನಹಳ್ಳಿ, ಕುಂಬೇನ ಅಗ್ರಹಾರ, ಕಾಡುಗೋಡಿ, ಕೆಂಪಾಪುರ, ಕಾಳತಮ್ಮನಹಳ್ಳಿ, ಸೋಲದೇವನಹಳ್ಳಿ, ಚಿಕ್ಕಬಾಣವಾರ, ತಿರುಮೇನಹಳ್ಳಿ, ಚಿಕ್ಕಗುಬ್ಬಿ, ದೊಡ್ಡಗುಬ್ಬಿ ಗ್ರಾಮಗಳ ಜಮೀನು ಮಾಲೀಕರು ಭಾಗವಹಿಸಬಹುದು. ಆಗಸ್ಟ್ 12 ರಂದು ಯಲಹಂಕದ ಮಿನಿ ವಿಧಾನಸೌಧ, ಹುನ್ನೂರು ಕಂದಾಯ ನಿರೀಕ್ಷಕರ ಕಚೇರಿ, ರಾಂಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣ, ಬಿದರಹಳ್ಳಿಯ ಗ್ರಾಮ ಪಂ ಕಚೇರಿ ಹತ್ತಿರ, ಬೆಂಗಳೂರು ಉತ್ತರ ತಾಲ್ಲೂಕಿನ ಮಾದನಾಯಕನಹಳ್ಳಿ ನಾಡಕಚೇರಿ, ಉತ್ತರ ತಾಲ್ಲೂಕಿನ ದಾಸನಪುರ ಹೋಬಳಿಯ ಆಲೂರು ಗ್ರಾಮ ಪಂಚಾಯಿತಿ ಕಚೇರಿ ಹಾಗೂ ಕೊಡತಿ ಗ್ರಾಮದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಸಭೆ ನಡೆಯಲಿದೆ. ಹಾರೋಹಳ್ಳಿ, ಹೆಬ್ಬಗೋಡಿ, ಬಿಳಿಶಾವಲೆ, ರಾಂಪುರ, ವಡೇರಹಳ್ಳಿ, ಆದೂರು, ಬಿದರಹಳ್ಳಿ, ಹಿರಂಡಹಳ್ಳಿ, ಮಾದನಾಯಕನಹಳ್ಳಿ, ಹನುಮಂತಸಾಗರ, ತಮ್ಮೇನಹಳ್ಳಿ, ಕುದುರೆಗೆರೆ, ಕಾಚಮಾರನಹಳ್ಳಿ, ಸೂಲಿಕುಂಟೆ, ಚೊಕ್ಕಸಂದ್ರ, ಕೊಡತಿ, ಅವಲಹಳ್ಳಿ ರೈತರು ಭಾಗವಹಿಸಬಹುದು.

### ಸಂಧಾನ ಸೂತ್ರ ಸಭೆಗೆ ವಿರೋಧ

**ಪಿಆರ್‌ಆರ್-1 ಯೋಜನೆಗೆ 2007ರಲ್ಲಿ ಅಂತಿಮ ಅಧಿಸೂಚನೆ ಹೊರಡಿಸಲಾಯಿತು. 18 ವರ್ಷ ಕಳೆದರೂ ಯೋಜನೆ ಅನುಷ್ಠಾನಗೊಂಡಿಲ್ಲ. 2013ರ ಭೂ ಸ್ವಾಧೀನ ಕಾಯ್ದೆ ಅನ್ವಯ ಮಾರುಕಟ್ಟೆ ಬೆಲೆ ನೀಡಲು ಸಾಧ್ಯವಿಲ್ಲ ಎಂದು ಬಿಡಿಎ ಹೇಳಿದೆ. ಹಾಗಾಗಿ ಬಿಡಿಎ ಅಧಿಕಾರಿಗಳ ಸಂಧಾನ ಸೂತ್ರದ ಸಭೆಗೆ ನಮ್ಮ ವಿರೋಧ ಇದೆ.**

**ಪಿಆರ್‌ಆರ್ ಯೋಜನೆಗೆ ಜಮೀನು ನೀಡುವ ಭೂ ಮಾಲೀಕರಿಗೆ ಕೇಂದ್ರ ಸರ್ಕಾರದ 2013ರ ಭೂಸ್ವಾಧೀನ ಕಾಯ್ದೆ ಅಡಿ ಪರಿಹಾರ ನಿಗದಿ ನೀಡಬೇಕು. ಈ ಕಾಯ್ದೆ ಪ್ರಕಾರ ಮಾರುಕಟ್ಟೆ ಬೆಲೆಗಿಂತ ಎರಡು ಪಟ್ಟು ಪರಿಹಾರ ನೀಡುವುದರ ಜತೆಗೆ ಪುನರ್ವಸತಿ ಕಲ್ಪಿಸಬೇಕಾಗುತ್ತದೆ. ಆದರೆ, ಬಿಡಿಎ ಇದಕ್ಕೆ ಒಪ್ಪಿಕೊಂಡಿಲ್ಲ. ಹಾಗಾಗಿ ನಮಗೆ ನಿರಾಕ್ಷೇಪಣಾ (ಎನ್‌ಒಸಿ) ಪತ್ರ ಕೊಡಲಿ' ಎಂದು ಜಮೀನು ಮಾಲೀಕರು ಆಗ್ರಹಿಸಿದ್ದಾರೆ.**

---

## ಸುಧಾಕರ್ ದಲಿತ ವಿರೋಧಿ ಕರಪತ್ರ ಅಂಟಿಸಲು ಮುಂದಾದ ಪ್ರದೀಪ ಈಶ್ವರ್ ಬೆಂಬಲಿಗರು


• ಉದಯವಾಹಿನಿ, ಬೆಂಗಳೂರು

ಜಿ.ಪಂ ಮುಖ್ಯಲೆಕ್ಕಾಧಿಕಾರಿ ಕಾರು ಚಾಲಕ ಬಾಬು ಆತ್ಮಹತ್ಯೆ ಪ್ರಕರಣ ಚಿಕ್ಕಬಳ್ಳಾಪುರದಲ್ಲಿ ರಾಜಕೀಯ ರಂಗನ್ನು ತೀವ್ರವಾಗಿ ಪಡೆಯುತ್ತಿದೆ. ಸುಧಾಕರ್ ದಲಿತ ವಿರೋಧಿ ಎಂದು ಅವರ ಭಾವಚಿತ್ರವುಳ್ಳ ಪೋಸ್ಟರ್‌ಗಳನ್ನು ಅಂಟಿಸಲು ಮುಂದಾಗಿದ್ದವರನ್ನು ಸಂಸದರ ಬೆಂಬಲಿಗರು ತಡೆದಿದ್ದಾರೆ.

ನಡುರಾತ್ರಿ ಕಾಂಗ್ರೆಸ್ ಮುಖಂಡರು ಹಾಗೂ ಶಾಸಕ ಪ್ರದೀಪ್ ಈಶ್ವರ್ ಬೆಂಬಲಿಗರಾದ ವಿನಯ್ ಮತ್ತು ಹಮೀಮ್ ಎಂಬುವವರು ಪೋಸ್ಟರ್ ಅಂಟಿಸಲು ಮುಂದಾಗಿದ್ದಾರೆ. ಇದನ್ನು ತಡೆದ ಸಂಸದರ ಬೆಂಬಲಿಗರು ವಿಡಿಯೋ ಮಾಡಿದ್ದಾರೆ. ತಕ್ಷಣ ಸ್ಥಳಕ್ಕೆ ಬಂದ ಪೊಲೀಸರು ಶಾಸಕರ ಬೆಂಬಲಿಗರನ್ನು ಕರೆದೊಯ್ದಿದ್ದಾರೆ.ಈ ವಿಡಿಯೋ ಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದೆ. ನಡುರಾತ್ರಿಯೇ ಪೊಲೀಸ್ ಠಾಣೆ ಎದುರು ಬಿಜೆಪಿ ಕಾರ್ಯಕರ್ತರು ಮತ್ತು ಸುಧಾಕರ್ ಬೆಂಬಲಿಗರು ಜಮಾಯಿಸಿದ್ದಾರೆ. ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದ್ದಾರೆ. ಸಂಸದ ಸುಧಾಕರ್ ಅವರನ್ನು ದಲಿತ ವಿರೋಧಿ ಎಂದು ಅಪಪ್ರಚಾರ ಮಾಡಲು ಶಾಸಕರ ಆಪ್ತರು ಮುಂದಾಗಿದ್ದಾರೆ ಎಂದು ಬಿಜೆಪಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು. ಬಾಬು ಆತ್ಮಹತ್ಯೆ ಪ್ರಕರಣದಲ್ಲಿ ಸಂಸದ ಡಾ.ಕೆ.ಸುಧಾಕರ್ ಮೊದಲ ಆರೋಪಿ ಆಗಿದ್ದಾರೆ. ಅವರ ಮೇಲೆ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

---

## ಗುರುಸಾರ್ವಭೌಮರ ಪೂರ್ವಾರಾಧನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

**ಬೆಂಗಳೂರಿನ ರಾಜಾಜಿನಗರದ 2ನೇ ಹಂತದಲ್ಲಿರುವ ಸುಬ್ರಹ್ಮಣ್ಯನಗರದ ಸೋಸಲೆ ಶ್ರೀ ವ್ಯಾಸರಾಜ ಮಠದಲ್ಲಿ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಪೂರ್ವಾರಾಧನೆ ಪ್ರಯುಕ್ತ ದ್ರಾಕ್ಷಿ ಹಣ್ಣಿನಿಂದ ವಿಶೇಷ ಅಲಂಕಾರ ಮಾಡಲಾಗಿತ್ತು.**

---

## ಬೆಂಗಳೂರಿನಲ್ಲಿ ಮಳೆ ಆರ್ಭಟ: ರಸ್ತೆ ತುಂಬ ನೀರು-ತಗ್ಗು ಪ್ರದೇಶಗಳು ಜಲಾವೃತ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು


ರಾಜಧಾನಿ ಬೆಂಗಳೂರಿನಲ್ಲಿ ಬೆಳಗ್ಗೆಯಿಂದ ಧಾರಾಕಾರ ಮಳೆಯಾಗುತ್ತಿದೆ. ಇದು ಬೇರೆ ಜಿಲ್ಲೆಗಳಿಗೂ ವಿಸ್ತರಿಸಿಕೊಂಡಿದೆ. ರಾಜ್ಯದಲ್ಲಿ ಅಬ್ಬರಿಸುತ್ತಿರುವ ಆಶ್ಲೇಷ ಮಳೆ ಊರೂರಲ್ಲೂ ಅಲ್ಲೋಲ ಕಲ್ಲೋಲ ಸೃಷ್ಟಿಸಿದೆ. ಕಳೆದ ಎರಡು ಮೂರು ದಿನದಿಂದ ಬಿಟ್ಟೂ ಬಿಡದೆ ಮಳೆಯಾಗುತ್ತಿದ್ದು, ಉತ್ತರದ ಜಿಲ್ಲೆಗಳಲ್ಲಂತೂ ನೆರೆ ನರಕವೇ ಸೃಷ್ಟಿಯಾಗಿದೆ.

ಇಷ್ಟು ದಿನ ಶಾಂತವಾಗಿದ್ದ ಹಳ್ಳಕೊಳ್ಳಗಳೆಲ್ಲಾ ಮತ್ತೆ ಹುಚ್ಚೆದ್ದು ಹರಿಯುತ್ತಿದ್ದು, ಮಹಾಮಳೆಯ ಜೊತೆ ಜೊತೆಗೆ ಸಾವು ನೋವುಗಳನ್ನೂ ಹೊತ್ತು ತರ್ತಿದೆ. ಕೊಪ್ಪಳ, ಧಾರವಾಡ ಜಿಲ್ಲೆ ಜನರಂತೂ ಅಕ್ಷರಶಃ ಕಂಗಾಲಾಗಿ ಹೋಗಿದ್ದಾರೆ. ಬೆಂಗಳೂರಿಗೆ ಮಧ್ಯಮದಿಂದ ಭಾರೀ ಮಳೆಯಾಗಿದ್ದು, ರಸ್ತೆಗಳಲ್ಲೆಲ್ಲಾ ನೀರು ತುಂಬಿಕೊಂಡಿದೆ. ತಗ್ಗು ಪ್ರದೇಶಗಳಲ್ಲಿ ಮನೆಗಳಿಗೆ ನೀರು ನುಗ್ಗಿದೆ. ಜಯನಗರ, ಮೆಜೆಸ್ಟಿಕ್, ಎಂಜಿ ರಸ್ತೆ, ವಿಜಯ ನಗರ, ಆರ್‌ಟಿ ನಗರ, ಇಂದಿರಾನಗರ ಮತ್ತು ಕೆಆರ್ ಪುರಂನಲ್ಲಿ ಸಾಧಾರಣದಿಂದ ಭಾರೀ ಮಳೆಯಾಗಿದೆ.

ಬೆಂಗಳೂರಿನಲ್ಲಿ ಕಳೆದ ಒಂದು ವಾರದಿಂದ ದಿನವೂ ಮಳೆಯಾಗುತ್ತಿದೆ. ರಾಜ್ಯದ ಹಲವೆಡೆ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದ್ದು, 28 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಳಗ್ಗೆಯಿಂದಲೂ ಬೆಂಗಳೂರಿನ ಹಲವೆಡೆ ಜೋರು ಮಳೆಯಾಗುತ್ತಿದೆ. ಸಂಜೆ ಕೂಡ ಮಳೆ ಮುಂದುವರಿಯುವ ಸಾಧ್ಯತೆಯಿದೆ ಎಂದು ಹವಮಾನ ಇಲಾಖೆ ಮಾಹಿತಿ ನೀಡಿದೆ.

---

## ಮನೆ ಮನೆ ಮೇಲೆ ಕನ್ನಡ ಬಾವುಟ ಹಾರಿಸುವ ಅಭಿಯಾನಕ್ಕೆ ಚಾಲನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್.ಪುರ

ಕನ್ನಡ ಬಾವುಟ ಸುಮಂಗಲದ ಸೌಭಾಗ್ಯದ ಶುಭಸಂಕೇತ ಎಂದು ಸಾಹಿತಿ, ಕಸಾಪ ಕಾರ್ಯದರ್ಶಿ, ಉಪೇಂದ್ರ ಕುಮಾರ್ ಎಂ. ಆರ್ ತಿಳಿಸಿದರು.

ಮಹದೇವಪುರ ಕ್ಷೇತ್ರದ ಬಿದರಹಳ್ಳಿಯ ಗುಂಡೂರು ಗ್ರಾಮದಲ್ಲಿ ಮಹದೇವಪುರ ಕನ್ನಡ ಸಾಹಿತ್ಯ ಪರಿಷತ್ತು ಘಟಕ ಆಯೋಜಿಸಿದ್ದ ಮನೆ ಮನೆ ಮೇಲೆ ಕನ್ನಡ ಬಾವುಟ ಹಾರಿಸುವ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ವಿಶ್ವಕ್ಕೆ ಕರ್ನಾಟಕ ಮಾದರಿಯಾಗಿದೆ. 9-8-1947 ರೊಂದು ಭಾರತ ದೇಶದ ಒಕ್ಕೂಟಕ್ಕೆ ಕನ್ನಡನಾಡು ಸೇರಿದ ದಿವಸವಾಗಿದೆ. ಕಡ್ಡಾಯವಾಗಿ ಕರ್ನಾಟಕ ರಾಜ್ಯದ ಉದ್ದಗಲಕ್ಕೂ ಈ ಅಭಿಯಾನವನ್ನು ಚಾಲ್ತಿಗೆ ಬರುವಂತೆ ಸರ್ಕಾರವೂ ಆದೇಶಿಸಬೇಕೆಂದರು. ಕೀರ್ತಿಶೇಷರಾದ ಜಯ ಚಾಮರಾಜ ಒಡೆಯರು ರಾಜಪ್ರಭುತ್ವದಿಂದ ಪ್ರಜಾಪ್ರಭುತ್ವಕ್ಕೆ ಒಪ್ಪಿಗೆ ನೀಡಿದ ದಿನವಾದಕಾರಣ ಪ್ರತಿ ವರ್ಷವೂ ಮನೆ ಮನೆಯ ಮೇಲೆ ಕನ್ನಡ ಬಾವುಟವನ್ನು ಹಾರಿಸುವ ಅಭಿಯಾನದಡಿಯಲ್ಲಿ, ರಾಜ್ಯ ವ್ಯಾಪಿ ಸಂಘ ಸಂಸ್ಥೆಗಳು ಈ ಕಾರ್ಯಕ್ರಮವನ್ನು ಆಚರಿಸುತ್ತಿವೆ ಎಂದರು. ಕವಿ ಕಿರಣ್ ಕುಮಾರ್. ಆರ್. ದಲಿತ ಸಂಘರ್ಷ ಸಮಿತಿಯ ಪ್ರತಿನಿಧಿ ವಾಸುದೇವ.ಡಿ, ಸಮಾಜ ಸೇವಕರಾದ ರಾಜಣ್ಣ ಈ ಅಭಿಯಾನದಲ್ಲಿ ಭಾಗಿಯಾಗಿದ್ದರು ಸ್ಥಳೀಯರಿಗೆ ಕನ್ನಡ ಬಾವುಟಗಳನ್ನು ವಿತರಿಸಿದರು.

---

## ರೌಡಿ ಶೀಟರ್ ಪ್ರತಾಪ್ ಕೊಲೆ: ಮೂವರ ಸೆರೆ

• ಉದಯವಾಹಿನಿ, ಬೆಂಗಳೂರು

ಚಿಕ್ಕಬಾಣಾವರದ ಮಾರುತಿನಗರದ ಬಾರ್ ಎದುರು ತಡರಾತ್ರಿ ನಡೆದ ಗಲಾಟೆಯಲ್ಲಿ ರೌಡಿಶೀಟರ್ ಪ್ರತಾಪ್ (27) ಅವರನ್ನು ದುಷ್ಕರ್ಮಿಗಳು ಕೊಲೆ ಮಾಡಿದ್ದಾರೆ. ಕೊಲೆ ಪ್ರಕರಣದ ಸಂಬಂಧ ಅಕ್ಷಯ್, ತೇಜಸ್, ಲಿಖಿತ್ ಎಂಬುವವರನ್ನು ಸೋಲದೇವನಹಳ್ಳಿ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಹೆಸರಘಟ್ಟ ಮುಖ್ಯರಸ್ತೆಯಲ್ಲಿರುವ ಗುರು ಕೃಪಾ ಬಾರ್ ಅನ್ನು ರಾತ್ರಿ 11ರ ಸುಮಾರಿಗೆ ಸಿಬ್ಬಂದಿ ಬಂದ್ ಮಾಡಿದ್ದರು. ಬಂದ್ ಆಗಿದ್ದ ಬಾರ್ ಎದುರು ಪ್ರತಾಪ್ ನಿಂತಿದ್ದರು. ಸ್ಥಳಕ್ಕೆ ಬಂದಿದ್ದ ಆರೋಪಿಗಳು, ಮದ್ಯ ಬೇಕೆಂದು ವಿಚಾರಿಸಿದ್ದರು. ಬಾರ್ ಬಂದ್ ಆಗಿದ್ದು, ಸ್ಥಳದಿಂದ ಹೋಗುವಂತೆ ಆರೋಪಿಗಳಿಗೆ ಪ್ರತಾಪ್ ಸೂಚಿಸಿದ್ದರು. ಆ ವೇಳೆ ಮಾತಿಗೆ ಮಾತು ಬೆಳೆದು ಎರಡು ಗುಂಪುಗಳ ಮಧ್ಯೆ ಗಲಾಟೆ ಆಗಿತ್ತು' ಎಂದು ಪೊಲೀಸರು ಹೇಳಿದರು. ಸ್ಥಳದಿಂದ ಆರೋಪಿಗಳು ಕೆಬ್ಬೆಪಾಳ್ಯದ ಮನೆಗೆ ತೆರಳಿದ್ದರು. ಸ್ವಲ್ಪ ಸಮಯದ ಬಳಿಕ ಡ್ರ್ಯಾಗರ್ ಹಿಡಿದು ಸ್ಥಳಕ್ಕೆ ಆರೋಪಿಗಳು ಬಂದಿದ್ದರು. ಅಷ್ಟರಲ್ಲಿ ಪ್ರತಾಪ್ ಅವರು ಬೈಕ್‌ನಲ್ಲಿ ಮನೆಯತ್ತ ತೆರಳುತ್ತಿದ್ದರು.

ಬೈಕ್ ಅನ್ನು ಅಡ್ಡಗಟ್ಟಿ, ಪ್ರತಾಪ್ ಅವರ ಹೊಟ್ಟೆಯ ಭಾಗಕ್ಕೆ ಚುಚ್ಚಿದ್ದರು. ಮಾಹಿತಿ ತಿಳಿದು ಸ್ಥಳಕ್ಕೆ ಬಂದ ಹೊಯ್ಸಳ ಸಿಬ್ಬಂದಿ ಪ್ರತಾಪ್ ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದರು. ಆಸ್ಪತ್ರೆಯಲ್ಲಿ ಪ್ರತಾಪ್ ಮೃತಪಟ್ಟಿದ್ದಾರೆ' ಎಂದು ಮೂಲಗಳು ತಿಳಿಸಿವೆ. ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಮೃತದೇಹದ ಮರಣೋತ್ತರ ಪರೀಕ್ಷೆ ನಡೆಸಿ ಕುಟುಂಬದವರಿಗೆ ಹಸ್ತಾಂತರ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು. ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

## ರಾಜ್ಯದಲ್ಲಿ 10ನೇ ತರಗತಿ ಉತ್ತೀರ್ಣ ಅಂಕ ಇಳಿಕೆಗೆ ವಿರೋಧ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಶಾಲಾ ಪರೀಕ್ಷಾ, ಮೌಲ್ಯಮಾಪನ ಮಂಡಳಿ ಕಾಯ್ದೆ 1966ಕ್ಕೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ತಿದ್ದುಪಡಿ ತಂದಿರುವುದನ್ನು ಶಿಕ್ಷಣದ ಮೂಲಭೂತ ಹಕ್ಕಿಗಾಗಿ ಪೀಪಲ್ಸ್ ಅಲೈಯನ್ಸ್ ತೀವ್ರವಾಗಿ ವಿರೋಧಿಸಿದೆ. ಇದು ರಾಜ್ಯದ ಶಿಕ್ಷಣದ ಗುಣಮಟ್ಟಕ್ಕೆ ಧಕ್ಕೆ ತಂದಿದೆ ಎಂದು ಆರೋಪಿಸಿದೆ.

ತಿದ್ದುಪಡಿಯು 10 ನೇ ತರಗತಿಯ ವಿದ್ಯಾರ್ಥಿಗಳು ಲಿಖಿತ ಮತ್ತು ಆಂತರಿಕ ಮೌಲ್ಯಮಾಪನಗಳಲ್ಲಿ ಕನಿಷ್ಠ ಶೇ. 33 ರಷ್ಟು ಅಂಕಗಳನ್ನು ಗಳಿಸಿದರೆ ಮತ್ತು ಪ್ರತಿ ವಿಷಯದಲ್ಲಿ ಶೇ. 30% ರಷ್ಟು ಅಂಕಗಳನ್ನು ಗಳಿಸಿದರೆ ಉತ್ತೀರ್ಣರಾಗಿದ್ದಾರೆ ಎಂದು ಘೋಷಿಸಲು ಅವಕಾಶ ಕಲ್ಪಿಸುತ್ತದೆ. ಈ ಕ್ರಮವು ಶಿಕ್ಷಣದ ಗುಣಮಟ್ಟವನ್ನು ಹದಗೆಡಿಸುತ್ತದೆ ಎಂದು PAFRE ಸಂಚಾಲಕ ಪ್ರೊ.ನಿರಂಜನಾರಾಧ್ಯ ಟೀಕಿಸಿದ್ದಾರೆ. ಉತ್ತೀರ್ಣ ಅಂಕಗಳನ್ನು ಕಡಿಮೆ ಮಾಡುವುದರಿಂದ ಈಗಾಗಲೇ ಅಸ್ತಿತ್ವ ಉಳಿಸಿಕೊಳ್ಳಲು ಹೋರಾಡುತ್ತಿರುವ ಕನ್ನಡ ಮಾಧ್ಯಮ ಶಾಲೆಗಳನ್ನು ದುರ್ಬಲಗೊಳಿಸುವ



ಉದಯವಾಹಿನಿ ಚಿತ್ರ

ಅಪಾಯವಿದೆ. ಅಲ್ಲದೇ ಕನ್ನಡ ಭಾಷೆ ಮತ್ತು ಸಾಂಸ್ಕೃತಿಕ ಗುರುತನ್ನು ದುರ್ಬಲಗೊಳಿಸಬಹುದು ಎಂದು PAFRE ಎಚ್ಚರಿಸಿದೆ. ಇದನ್ನು ಎಲ್ಲಾ ಕನ್ನಡ ಪರ ಸಂಘಟನೆಗಳು ವಿರೋಧಿಸಬೇಕು ಎಂದು ಒತ್ತಾಯಿಸಿದೆ. ಶಿಕ್ಷಕರ ಕೊರತೆ, ಕಳಪೆ ಮೂಲ ಸೌಕರ್ಯಗಳಂತಹ ಆಳವಾದ ಬೇರೂರಿರುವ ಸಮಸ್ಯೆಗಳನ್ನು ಪರಿಹರಿಸುವ ಬದಲು ಉತ್ತೀರ್ಣತೆಯ ಶೇಕಡಾವಾರು ಹೆಚ್ಚಿಸಲು ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ ಎಂದು ಮಂಡಳಿ ಅಧ್ಯಕ್ಷರಿಗೆ ಪತ್ರದಲ್ಲಿ ಹೇಳಲಾಗಿದೆ.

ಅನೇಕ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರೇ ಇಲ್ಲ, ಸುಮಾರು 8,000 ಶಾಲೆಗಳು ಕೇವಲ ಒಬ್ಬ ಶಿಕ್ಷಕರೊಂದಿಗೆ ಕಾರ್ಯನಿರ್ವಹಿಸುತ್ತಿವೆ. ಆಗಾಗ್ಗೆ ಅನೇಕ ತರಗತಿಗಳು ಮತ್ತು ವಿಷಯಗಳನ್ನು ಅವರೇ ನಿರ್ವಹಿಸುತ್ತಿದ್ದಾರೆ. ಕೆಲವು ಪ್ರೌಢಶಾಲೆಗಳಲ್ಲಿ ಸಹ ಕೇವಲ ಒಬ್ಬ ಶಿಕ್ಷಕರಿದ್ದಾರೆ ಕಲ್ಯಾಣ ಕರ್ನಾಟಕದಲ್ಲಿ ಅರ್ಧದಷ್ಟು ಬೋಧಕ ಹುದ್ದೆಗಳು ಖಾಲಿ ಉಳಿದಿವೆ ಎಂದು ನಿರಂಜನಾರಾಧ್ಯ ಹೇಳಿದ್ದಾರೆ.

**ಕಲಿಕಾ ಮಟ್ಟ ಕುಸಿಯುತ್ತಿದೆ ಎಂದು ಆರೋಪಿಸಿ ಶಿಕ್ಷಕರನ್ನು ಶೈಕ್ಷಣಿಕೇತರ ಕರ್ತವ್ಯಗಳಿಗೆ ನಿಯೋಜಿಸಲಾಗುತ್ತಿದೆ. ಶಿಕ್ಷಕರು ಆಡಳಿತಾತ್ಮಕ ಮತ್ತು ಪಠ್ಯೇತರ ಕಾರ್ಯಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಂಡಿದ್ದಾರೆ. ಸರಕಾರ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಶಿಕ್ಷಕರು ಕೇವಲ ಬೋಧನೆಯತ್ತ ಗಮನ ಹರಿಸುವಂತೆ ನೋಡಿಕೊಳ್ಳಬೇಕು ಎಂದು ಅವರು ಪತ್ರದಲ್ಲಿ ಒತ್ತಾಯಿಸಿದ್ದಾರೆ.**

---

## ರಾಹುಲ್ ವಿರುದ್ಧ ಸಚಿವ ಪ್ರಹ್ಲಾದ್ ಜೋಶಿ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಚುನಾವಣಾ ಆಯೋಗದ ವಿರುದ್ಧ ಆರೋಪ ಮಾಡಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು, ಚುನಾವಣಾ ಆಯೋಗಕ್ಕೆ ಭೇಟಿ ನೀಡದೆ ತಮ್ಮ ಪಕ್ಷದವರಿಗೆ ಯಾವುದೇ ದಾಖಲೆಗಳನ್ನು ನೀಡದೆ ಕಳುಹಿಸಿ, ಹಿಟ್ ಅಂಡ್ ರನ್ ಪದ್ಧತಿ ಪಾಲಿಸಿದ್ದಾರೆಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ವಾಗ್ದಾಳಿ ನಡೆಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಹುಲ್ ಗಾಂಧಿ ಚುನಾವಣಾ ಆಯೋಗಕ್ಕೆ ಭೇಟಿ ನೀಡದೆ, ತಪ್ಪಿಸಿಕೊಂಡು ತಮ್ಮ ಪಕ್ಷದವರಿಗೆ ಯಾವುದೇ ದಾಖಲೆಗಳನ್ನು ನೀಡದೆ ಕಳುಹಿಸಿ, ಹಿಟ್ ಅಂಡ್ ರನ್ ಪದ್ಧತಿ ಪಾಲಿಸಿದ್ದಾರೆ. ಸಾರ್ವಜನಿಕವಾಗಿ ಇಲ್ಲ-ಸಲ್ಲದ ದೊಡ್ಡ ದೊಡ್ಡ ಸುಳ್ಳು ಹೇಳಿಕೆಗಳನ್ನು ನೀಡುತ್ತಾರೆ. ಆದರೆ, ಸಾಕ್ಷಿಗಳನ್ನು ಕೇಳಿದರೆ ಮಾಯವಾಗುತ್ತಾರೆ ಎಂದು ವ್ಯಂಗ್ಯವಾಡಿದ್ದಾರೆ.




ಈ ನಡುವೆ ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ರಾಹುಲ್ ಗಾಂಧಿ ಮತಗಳ್ಳತನದ ಆರೋಪ ಮಾಡಿ, ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿದ್ದಾರೆ.

ಯಾಕೆ ಪ್ರತಿಭಟನೆ ನಡೆಸಿದ್ದಾರೆ ಎಂದು ಕೇಳಿದರೆ ಅವರಿಗೆ ಗೊತ್ತಿರಲ್ಲ. ರಾಜ್ಯ ಚುನಾವಣಾ ಆಯೋಗ ಬಂದು ಸ್ಪಷ್ಟನೆ ನೀಡಿ ಎಂದು ಕೇಳಿದೆ. ಫ್ರೀಡಂ ಪಾರ್ಕ್‌ನಿಂದ ಆಯೋಗದ ಕಚೇರಿಗೆ ನಡೆದು ಹೋದರೆ 5 ನಿಮಿಷ. ಆದರೆ, ಆಯೋಗದ ಕಚೇರಿಗೆ ಹೋಗಿಲ್ಲ. ಬೇರೆ ಯಾರನ್ನೊ ಕಳುಹಿಸಿದ್ದಾರೆ.

ರಾಹುಲ್ ಗಾಂಧಿ ಅವರನ್ನು ಅಧಿಕಾರದಿಂದ ಜನರು ಕೆಳಗೆ ಹಾಕಿದ ಮೇಲೆ ಸುಳ್ಳಿನ ಅಂಗಡಿ ತೆಗೆಯುತ್ತಾರೆ. ಇವರ ಅಜ್ಜಿ ತುರ್ತು ಪರಿಸ್ಥಿತಿ ಹೇರಿದವರು. ಇವರು ಸಾಂವಿಧಾನಿಕ ಸಂಸ್ಥೆಗಳ ಬಗ್ಗೆ ಮನ ಬಂದಂತೆ ಮಾತನಾಡುತ್ತಿದ್ದಾರೆಂದು ಟೀಕಿಸಿದ್ದಾರೆ.

**ಆರೋಪ ಮಾಡಿ ಇನ್ಯಾರನ್ನೋ ಉತ್ತರ ಕೊಡಿಸಲು ಕಳಿಸಿದರೆ, ನಿಮ್ಮ ಸುಳ್ಳು ಆರೋಪಕ್ಕೆ ಆಧಾರ ಇಲ್ಲ ಎಂದು ಅರ್ಥ. ಎಲ್ಲಾ ರಾಜ್ಯಗಳ ಚುನಾವಣಾ ಆಯೋಗ ಅಫಿಡವಿಟ್ ಕೇಳಿವೆ. ಈವರೆಗೂ ಅಫಿಡವಿಟ್ ಫೈಲ್ ಮಾಡಿಲ್ಲ. ರಾಹುಲ್ ಸ್ಥಿತಿ ಹೇಗೆಂದರೆ ಸರ್ಕಾರದಲ್ಲಿ ಇದ್ದಾಗ ಲೂಟಿಯ ಅಂಗಡಿ. ಚುನಾವಣೆಯಲ್ಲಿ ಮಾತ್ರ ಅವರಿಗೆ ಪ್ರೀತಿಯ ಅಂಗಡಿ ಎಂದು ಲೇವಡಿ ಮಾಡಿದ್ದಾರೆ.**

---

## ಸಿಎಂಆರ್ ವಿಶ್ವವಿದ್ಯಾಲಯಕ್ಕೆ ನ್ಯಾಕ್ ಎ ಗ್ರೇಡ್ ಮಾನ್ಯತೆ

• ಉದಯವಾಹಿನಿ, ಬೆಂಗಳೂರು

ನಗರದ ಸಿಎಂಆರ್ ವಿಶ್ವವಿದ್ಯಾಲಯಕ್ಕೆ 'ನ್ಯಾಕ್ ಎ ಗ್ರೇಡ್ ಮಾನ್ಯತೆ ಲಭಿಸಿದೆ. ನ್ಯಾಷನಲ್ ಅಸೆಸ್ಮೆಂಟ್ ಆ್ಯಂಡ್ ಅಕ್ರಿಡೇಷನ್ ಕೌನ್ಸಿಲ್ (ನ್ಯಾಕ್), ಮೊದಲ ಅವಧಿಯಲ್ಲಿ 5 ವರ್ಷಗಳಿಗೆ 'ನ್ಯಾಕ್ ಎ' ಮಾನ್ಯತೆಯನ್ನು ನೀಡಿದೆ.

ನ್ಯಾಕ್ 'ಎ' ಮಾನ್ಯತೆ ಮತ್ತು ಮನ್ನಣೆ ಕುರಿತು ಮಾತನಾಡಿದ ಸಿಎಂಆರ್ ವಿಶ್ವವಿದ್ಯಾಲಯದ ಕುಲಪತಿ ಎಚ್.ಬಿ. ರಾಘವೇಂದ್ರ 'ಈ ಸಾಧನೆಗೆ ಆಡಳಿತ ಮಂಡಳಿಯ ಸಮರ್ಪಣಾ ಮನೋಭಾವ ಮತ್ತು ಸಮರ್ಥ ನಾಯಕತ್ವ, ನುರಿತ ಅಧ್ಯಾಪಕರು ಮತ್ತು ಸಿಬ್ಬಂದಿ ವರ್ಗ, ಪ್ರತಿಭಾವಂತ ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳ ಶೈಕ್ಷಣಿಕ ಪರಿಶ್ರಮ ಈ ಸಾಧನೆಗೆ ಕಾರಣ ಎಂದು ಹೇಳಿದರು.

ಮೌಲ್ಯಾಧಾರಿತ ಶಿಕ್ಷಣವನ್ನು ನೀಡುವ ಮೂಲಕ ದೇಶಕ್ಕೆ ಸಮರ್ಥ ಸಂಪನ್ಮೂಲರಾಗಬಲ್ಲ ವೃತ್ತಿಪರ ವಿದ್ಯಾರ್ಥಿ ಸಮುದಾಯವನ್ನು ಸೃಷ್ಟಿಸುವ ನಿಟ್ಟಿನಲ್ಲಿ ಸಿಎಂಆರ್ ವಿಶ್ವವಿದ್ಯಾಲಯ ಶ್ರಮಿಸುತ್ತಿದೆ. ನ್ಯಾಕ್ ಎ ಮಾನ್ಯತೆ ಪಡೆದಿರುವುದು ಹೆಮ್ಮೆಯ ಸಾಧನೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ನ್ಯಾಕ್ ಮಾನದಂಡಗಳು ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿನ ಶೈಕ್ಷಣಿಕ ಗುಣಮಟ್ಟ ಹಾಗೂ ನಿರ್ವಹಣಾ ಸಾಮರ್ಥ್ಯವನ್ನು ಕಾಪಾಡಿಕೊಂಡು ಸದಾ ಮುನ್ನಡೆಯುವಂತೆ ಪ್ರೇರೇಪಿಸುತ್ತವೆ. ಈ ನಿಟ್ಟಿನಲ್ಲಿ ಸಿಎಂಆರ್ ವಿಶ್ವವಿದ್ಯಾಲಯ ಸದಾ ಆತ್ಮವಿಶ್ವಾಸ ಮತ್ತು ಸಮರ್ಪಣಾ ಮನೋಭಾವದಿಂದ ಮುನ್ನಡೆಯಲು ಬದ್ಧವಾಗಿದೆ ಎಂದರು.

---

## ಆ.11ರಿಂದ ಫೀಡರ್ ಬಸ್‌ಗಳ ಸಂಚಾರ ಆರಂಭ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಹಳದಿ ಮಾರ್ಗಕ್ಕೆ ಮೊದಲ, ಕೊನೆಯ ಮೈಲಿ ಸಂಪರ್ಕವನ್ನು ಸುಧಾರಿಸಲು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಆಗಸ್ಟ್ 11 ರಿಂದ ಮೆಟ್ರೋ ಫೀಡರ್ ಬಸ್ ಸೇವೆಗಳನ್ನು ಪ್ರಾರಂಭಿಸುತ್ತಿದೆ. ಹೊಸ ಬಸ್ ಸೇವೆಗಳು ಎಲೆಕ್ಟ್ರಾನಿಕ್ ಸಿಟಿಯಿಂದ ದೊಡ್ಡ ಕನ್ನಲ್ಲಿ ಬಸ್ ನಿಲ್ದಾಣ, ಕೋನಪ್ಪನ ಅಗ್ರಹಾರದಿಂದ ಚಂದಾಪುರ ವೃತ್ತ, ಬೊಮ್ಮಸಂದ್ರದಿಂದ ಹೆಬ್ಬಗೋಡಿ ಹಾಗೂ ಕೋನಪ್ಪನ ಅಗ್ರಹಾರದಿಂದ ಎಲೆಕ್ಟ್ರಾನಿಕ್ ಸಿಟಿ ಮಾರ್ಗಗಳಲ್ಲಿ ಚರಿಸಲಿವೆ.

ಎಲೆಕ್ಟ್ರಾನಿಕ್ ಸಿಟಿಯ ವಿಪ್ರೋ ಗೇಟ್‌ನಿಂದ ಬೆಳಗ್ಗೆ 8.20 ರಿಂದ ಸಂಜೆ 4.55ರವರೆಗೆ ನಾಲ್ಕು ಬಸ್‌ಗಳು 32 ಸುತ್ತುವಳಿಗಳಲ್ಲಿ ಕಾರ್ಯಾಚರಣೆಗೊಳ್ಳಲಿವೆ.

ಈ ಬಸ್‌ಗಳು ಎಲೆಕ್ಟ್ರಾನಿಕ್ ಸಿಟಿಯ ವಿಪ್ರೋ ಗೇಟ್‌ನಿಂದ ಕೋನಪ್ಪನ ಅಗ್ರಹಾರ, ಹೊಸ ರೋಡ್, ಕಸವನಹಳ್ಳಿ, ಕೈಕೊಂಡ್ರಹಳ್ಳಿ ಮಾರ್ಗದ ಮೂಲಕ ದೊಡ್ಡಕನ್ನಲ್ಲಿ ಬಸ್ ನಿಲ್ದಾಣ ತಲುಪಲಿವೆ. ಅದೇ ರೀತಿ ಕೋನಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ, ಹುಸ್ಕೂರು ಗೇಟ್, ಚಿಂತಲ ಮಡಿವಾಳ, ಮುತ್ತಾನಲ್ಲೂರು ವೃತ್ತ, ತಿಮ್ಮಸಂದ್ರ ವೃತ್ತ, ಚಂದಾಪುರ ವೃತ್ತ ಮಾರ್ಗದಲ್ಲಿ ನಾಲ್ಕು ಬಸ್‌ಗಳು 20 ಸುತ್ತುವಳಿಗಳಲ್ಲಿ ಕಾರ್ಯಾಚರಣೆ ನಡೆಸಲಿವೆ.

ಎಲೆಕ್ಟ್ರಾನಿಕ್ ಸಿಟಿ ವಿಪ್ರೋ ಗೇಟ್‌ನಿಂದ ಹೊರಡುವ ಬಸ್‌ಗಳು ಬೆಳಗ್ಗೆ 8.40 ರಿಂದ ಸಂಜೆ 4.50ರವರೆಗೆ ಸಂಚರಿಸಲಿವೆ. ಕೊಡತಿ ವಿಪ್ರೋದಿಂದ ಹೊರಡುವ ಬಸ್‌ಗಳು ಬೆಳಗ್ಗೆ 8.05ಕ್ಕೆ ಕಾರ್ಯಾಚರಣೆ ಆರಂಭಿಸಿ, ಸಂಜೆ 5.35ಕ್ಕೆ ಕೊನೆಗೊಳಿಸಲಿವೆ. ಬೊಮ್ಮಸಂದ್ರ (ಚಕ್ರ ಮಾರ್ಗ)ದಿಂದ ತಿರುಪಾಳ್ಯ ವೃತ್ತ, ಎಸ್ ಮಾಂಡೋ-3, ಎಲೆಕ್ಟ್ರಾನಿಕ್ಸ್ ಸಿಟಿ ವಿಪ್ರೋ ಗೇಟ್, ಕೋನಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ಸ್ ಸಿಟಿ, ಹೆಬ್ಬಗೋಡಿಯಿಂದ ಬೊಮ್ಮಸಂದ್ರ ಮಾರ್ಗದಲ್ಲಿ ಎರಡು ಬಸ್‌ಗಳು 20 ಟ್ರಿಪ್‌ಗಳ ಕಾರ್ಯಾಚರಣೆ ನಡೆಸಲಿವೆ.

ಈ ಮಾರ್ಗದಲ್ಲಿ ಬೆಳಗ್ಗೆ 8.30ಕ್ಕೆ ಆರಂಭವಾಗುವ ಬಸ್‌ಗಳ ಸೇವೆ ಸಂಜೆ 6.5ಕ್ಕೆ ಮುಕ್ತಾಯಗೊಳ್ಳಲಿದೆ. ಕೋನಪ್ಪನ ಅಗ್ರಹಾರ (ಚಕ್ರ ಮಾರ್ಗ)ದಿಂದ ಎಲೆಕ್ಟ್ರಾನಿಕ್ ಸಿಟಿ ವಿಪ್ರೋ ಗೇಟ್, ಎಸ್-ಮಾಂಡೋ-3, ತಿರುಪಾಳ್ಯ ಕ್ರಾಸ್, ಬೊಮ್ಮಸಂದ್ರ, ಹೆಬ್ಬಗೋಡಿ, ಎಲೆಕ್ಟ್ರಾನಿಕ್ ಸಿಟಿ ಮಾರ್ಗದ ಮೂಲಕ ಪುನಃ ಕೋನಪ್ಪನ ಅಗ್ರಹಾರ ಮಾರ್ಗದಲ್ಲಿ ಎರಡು ಬಸ್‌ಗಳು 20 ಸುತ್ತುವಳಿಗಳಲ್ಲಿ ಕಾರ್ಯಾಚರಿಸಲಿವೆ. ಈ ಮಾರ್ಗದಲ್ಲಿ ಬೆಳಗ್ಗೆ 8.25ರಿಂದ ಸಂಜೆ 6.05ವರೆಗೆ ಬಸ್ ಸೇವೆ ಇರಲಿದೆ.

---

# ಚುನಾವಣಾ ಆಯೋಗದ ಸೂಚನೆ ಅಪ್ರಸ್ತುತ ಎಂದ ಕಾಂಗ್ರೆಸ್

## ವಿಧಾನಸಭಾ ಕ್ಷೇತ್ರವೊಂದರಲ್ಲೇ 1 ಲಕ್ಷ ನಕಲಿ ಮತದಾರರು ಪತ್ತೆಯಾಗಿದ್ದಾರೆ ಎಂದು ರಾಹುಲ್ ಗಾಂಧಿ ಆರೋಪ

• ಉದಯವಾಹಿನಿ, ಬೆಂಗಳೂರು

ಮತಗಳ್ಳತನ, ಅಕ್ರಮ ಮತದಾನದ ಆರೋಪ ಮಾಡುತ್ತಿರುವ ಲೋಕಸಭೆ ವಿರೋಧ ಪಕ್ಷಧ ನಾಯಕ ರಾಹುಲ್ ಗಾಂಧಿಯವರು ಅಫಿಡವಿಟ್ ಸಲ್ಲಿಸಿ ಆರೋಪಕ್ಕೆ ಬಲ ನೀಡಬೇಕೆಂಬ ಚುನಾವಣಾ ಆಯೋಗ ಸೂಚನೆಯನ್ನು ಕಾಂಗ್ರೆಸ್ ತಿರಸ್ಕರಿಸಿದೆ. ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಚುನಾವಣಾ ಆಯೋಗದ ನಡುವಿನ ಸಮರ ತಾರಕಕ್ಕೇರಿದೆ. ಕಾಂಗ್ರೆಸ್ ನಾಯಕ ಮಾಡಿರುವ ಆರೋಪ ಈಗ ರಾಷ್ಟ್ರ ರಾಜಕಾರಣದಲ್ಲಿ ಅಲ್ಲೋಲ-ಕಲ್ಲೋಲಕ್ಕೆ ಕಾರಣವಾಗಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ಭಾರೀ ಮತಗಳ್ಳತನ ನಡೆದಿದೆ. ಮಹದೇವಪುರ ವಿಧಾನಸಭಾ ಕ್ಷೇತ್ರವೊಂದರಲ್ಲೇ 1 ಲಕ್ಷ ನಕಲಿ ಮತದಾರರು ಪತ್ತೆಯಾಗಿದ್ದಾರೆ ಎಂದು ರಾಹುಲ್ ಗಾಂಧಿ ಆರೋಪ ಮಾಡಿದ್ದಾರೆ. ಮತಗಳ್ಳತನಕ್ಕೆ ವಿರೋಧ ವ್ಯಕ್ತಪಡಿಸಿ ಕಾಂಗ್ರೆಸ್ ಬೆಂಗಳೂರಿನಲ್ಲಿ ಆಗಸ್ಟ್ 8 ರಂದು ಬೃಹತ್ ಪ್ರತಿಭಟನೆ ನಡೆಸಿ ಚುನಾವಣಾ ಆಯೋಗಕ್ಕೆ ದೂರು ನೀಡಿದೆ. ಇದರ ಬೆನ್ನಲ್ಲೇ ಚುನಾವಣಾ ಆಯೋಗ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, ನೇರ ಸವಾಲನ್ನು ಹಾಕಿದೆ.

ಧೈರ್ಯವಿದ್ದರೆ ಅಫಿಡವಿಟ್ ಸಲ್ಲಿಸಿ ನಿಮ್ಮ ಆರೋಪಕ್ಕೆ ಬಲ ನೀಡಿ, ಇಲ್ಲವಾದಲ್ಲಿ ಆರೋಪ ಹಿಂಪಡೆದು ದೇಶದ ಕ್ಷಮೆ ಯಾಚಿಸಿ ಎಂದು ಹೇಳಿದೆ.



ಉದಯವಾಹಿನಿ ಚಿತ್ರ

ಚುನಾವಣಾ ಆಯೋಗದ ಸೂಚನೆ ಕುರಿತು ಪ್ರತಿಕ್ರಿಯೆ ನೀಡಿರುವ ಉಪಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷ ಡಿಕೆಶಿ ಅವರು, ಡಿಕ್ಲರೇಷನ್‌ಗೆ ಸಹಿ ಹಾಕಿ ಎಂದು ಸೂಚಿಸುವುದು ಅಪ್ರಸ್ತುತ ಎಂದು ಕಾನೂನು ತಜ್ಞರು ಹೇಳಿದ್ದಾರೆ. ಆ ನಿಯಮಗಳು ನಾನು ಸಲ್ಲಿಸಿರುವ ದೂರಿಗೆ ಅನ್ವಯಿಸುವುದಿಲ್ಲ. ನಾವು ಸಲ್ಲಿಸಿದ ಮನವಿ ಪತ್ರಕ್ಕೆ ಅನ್ವಯಿಸುವುದಿಲ್ಲ ಎಂದು ಹೇಳಿದ್ದಾರೆ.

ಸಚಿವ ಪ್ರಿಯಾಂಕ್ ಖರ್ಗೆ ಅವರು ಪ್ರತಿಕ್ರಿಯಿಸಿ, ಇದು ಬೆದರಿಕೆಯಲ್ಲದೆ ಬೇರೇನೂ ಅಲ್ಲ. ನಾವು ದೂರು ನೀಡಿದ್ದೇವೆ. ಅವರು ಅದರ ಮೇಲೆ ಕ್ರಮ ಕೈಗೊಳ್ಳುವುದು ಅವರ ಕರ್ತವ್ಯ ಎಂದು ಹೇಳಿದ್ದಾರೆ.

ಆಯೋಗವು ತನ್ನ ಕರ್ತವ್ಯದ ಬಗ್ಗೆ ಯೋಚಿಸಬೇಕು. ಪ್ರಜಾಪ್ರಭುತ್ವವನ್ನು ರಕ್ಷಿಸುವುದು ಸಾರ್ವಜನಿಕ ನಂಬಿಕೆಯನ್ನು ಪುನಃಸ್ಥಾಪಿಸಬೇಕು. ಪ್ರಸ್ತುತ ನಡೆದಿರುವುದು ಸಣ್ಣಪುಟ್ಟ ವ್ಯತ್ಯಾಸವಲ್ಲ. ಇದು ಮತದಾರರ ಪಟ್ಟಿಯ ವಿಶ್ವಾಸಾರ್ಹತೆ ಮತ್ತು ಚುನಾವಣೆಗಳ ಸಮಗ್ರತೆಯ ಪ್ರಶ್ನೆಗಳನ್ನು ಮೂಡಿಸುತ್ತದೆ. ನಮ್ಮ ನಗರದಲ್ಲಿನ ಪ್ರತಿಯೊಂದು ಮತವು ನ್ಯಾಯಸಮ್ಮತವಾಗಬೇಕು. ಈ ನಿಟ್ಟಿನಲ್ಲಿ ತನಿಖೆಗೆ ನಾವು ಒತ್ತಾಯಿಸುತ್ತಿದ್ದೇವೆ. ನಾಗರಿಕರು ಮುಕ್ತ, ನ್ಯಾಯಯುತ ಪಾರದರ್ಶಕ ಮತದಾನಕ್ಕೆ ಅರ್ಹರು ಎಂದು ಹೇಳಿದ್ದಾರೆ.

ಏತನ್ಮಧ್ಯೆ, ಸುಪ್ರೀಂ ಕೋರ್ಟ್ ವಕೀಲ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಜಿ ಕಾನೂನು ಸಲಹೆಗಾರ ಬ್ರಿಜೇಶ್ ಕಾಳಪ್ಪ ಅವರು ಮಾತನಾಡಿ, ದಾಖಲೆಗಳನ್ನು ಕೇಳಲು ಭಾರತೀಯ ಚುನಾವಣಾ ಆಯೋಗ ನ್ಯಾಯಾಲಯವಲ್ಲ. ಅಫಿಡವಿಟ್ ಸ್ವೀಕರಿಸಲು ಇಸಿಐಗೆ ಯಾವ ಅಧಿಕಾರವಿದೆ ಜನತಾ ಪ್ರಾತಿನಿಧ್ಯ ಕಾಯ್ದೆ ಕೂಡ ಇಸಿಐಗೆ ಅಫಿಡವಿಟ್ ಸ್ವೀಕರಿಸಲು ಅಧಿಕಾರ ನೀಡುವುದಿಲ್ಲ ಎಂದು ಹೇಳಿದ್ದಾರೆ.

**ರಾಹುಲ್ ಗಾಂಧಿ ಸಂಸತ್ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ವಿರೋಧ ಪಕ್ಷದ ನಾಯಕರಾಗಿ ಆಯ್ಕೆಯಾಗಿದ್ದಾರೆ. ಅವರು ಹೇಳಿರುವ ಎಲ್ಲವೂ ಸಾರ್ವಜನಿಕ ದಾಖಲೆಯ ವಿಷಯವಾಗಿದೆ. ಅಫಿಡವಿಟ್ ಸಲ್ಲಿಸುವ ಇಸಿಐ ಸೂಚನೆ ತುಂಬಾ ದುರ್ಬಲ ಮತ್ತು ಅತ್ಯಂತ ರಕ್ಷಣಾತ್ಮಕವಾಗಿದೆ. ಬಿಜೆಪಿ ಇಸಿಐ ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿದ್ದು, ಇದಕ್ಕೆ ಆಯೋಗದ ಬಳಿ ಯಾವುದೇ ಉತ್ತರಗಳಿಲ್ಲ ಎಂಬುದು ಈ ಸೂಚನೆಯಿಂದ ಸ್ಪಷ್ಟವಾಗುತ್ತಿದೆ ಎಂದು ತಿಳಿಸಿದ್ದಾರೆ**

**ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಮನ್ಸೂರ್ ಅಲಿ ಖಾನ್ ಅವರು ಮಾತನಾಡಿ, ವಿಪಕ್ಷ ನಾಯಕ ರಾಹುಲ್ ಗಾಂಧಿ ದಾಖಲೆಗಳ ಸಮೇತ ಆರೋಪ ಮಾಡಿದ್ದರೂ, ಭಾರತದ ಚುನಾವಣಾ ಆಯೋಗ ಕ್ರಮ ಕೈಗೊಳ್ಳಲು ನಿರಾಕರಿಸಿದೆ. ಸಮಸ್ಯೆಯನ್ನು ಪರಿಹರಿಸುವ ಬದಲು, ವ್ಯವಸ್ಥೆಯನ್ನು ರಕ್ಷಿಸುವ ಹೊರೆ ನಮ್ಮ ಮೇಲಿದೆ ಎಂಬಂತೆ ಸಹಿ ಮಾಡಿದ ಅಫಿಡವಿಟ್‌ಗಳನ್ನು ಸಲ್ಲಿಸಲು ಸೂಚಿಸುತ್ತಿದೆ ಎಂದು ಕಿಡಿಕಾರಿದ್ದಾರೆ.**

# ಜೆಡಿಎಸ್, ಬಿಜೆಪಿ ಪೊಳ್ಳು ಭರವಸೆ ನಂಬದಿರಿ: ಬೈರತಿ ಸುರೇಶ್ ವಾಗ್ದಾಳಿ

## ವೇಮಗಲ್ ಭಾಗದಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ರೂ.5 ಕೋಟಿ ಅನುದಾನ ಬಿಡುಗಡೆ

• **ಉದಯವಾಹಿನಿ, ವೇಮಗಲ್**

ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಸುಳ್ಳು ಹೇಳಿಕೊಂಡೇ ಜನರನ್ನು ಯಾಮಾರಿಸುವ ಜೆಡಿಎಸ್, ಬಿಜೆಪಿ ಮತ್ತು ವರ್ತೂರು ಪಕ್ಷಗಳನ್ನು ಯಾವುದೇ ಕಾರಣಕ್ಕೂ ನಂಬಬೇಡಿ. ಚುನಾವಣೆ ಪೂರ್ವದಲ್ಲಿ ನುಡಿದಂತೆ ಕೆಲಸ ಮಾಡುವ ಕಾಂಗ್ರೆಸ್ ಪಕ್ಷವನ್ನು ಮಾತ್ರ ಬೆಂಬಲಿಸಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ತಿಳಿಸಿದರು. ಪಟ್ಟಣದಲ್ಲಿ ವೇಮಗಲ್-ಕುರುಗಲ್ ಪಟ್ಟಣ ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದ ಜನರು ಜೆಡಿಎಸ್ ಮತ್ತು ಬಿಜೆಪಿಗೆ ಅಧಿಕಾರ ಕೊಟ್ಟಾಗ ಅಭಿವೃದ್ಧಿಗೆ ಒತ್ತು ನೀಡದೆ ಜಾತಿ ಧರ್ಮಗಳ ಮಧ್ಯೆ ತಂದಿಡುವುದೇ ಆ ಪಕ್ಷಗಳ ಕೆಲಸವಾಗಿದೆ. ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ಕೊಟ್ಟಾಗ ಹಾಳು ಮಾಡದೆ ಮನೆ ಮನೆಗೆ ಸೌಲಭ್ಯ ಒದಗಿಸಿದೆ. ಕಾಂಗ್ರೆಸ್ ಪಕ್ಷವು ಬಡವರ, ದಲಿತರ. ಮಹಿಳೆಯರ ಪರವಾಗಿದೆ' ಎಂದರು.

'ಜಿಲ್ಲೆಯಲ್ಲಿ ಈಗಾಗಲೇ ಅಭಿವೃದ್ಧಿಗೆ ಒತ್ತು ನೀಡಲಾಗಿದೆ. ವೇಮಗಲ್ ಭಾಗದಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ರೂ.5 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ವೈದ್ಯಕೀಯ ಕಾಲೇಜು, ಎಪಿಎಂಸಿಗೆ ನೂರು ಎಕರೆ ಜಾಗ, ರಿಂಗ್ ರಸ್ತೆ, ಮೂರು



ಸಾವಿರ ವೆಚ್ಚದ ರಸ್ತೆ ಸೇರಿದಂತೆ ಅಭಿವೃದ್ಧಿ ಪರ್ವ ಪ್ರಾರಂಭವಾಗಿದೆ. ಮುಂದೆಯೂ ವೇಮಗಲ್ ತಾಲ್ಲೂಕು ಕೇಂದ್ರವಾಗಿ ಮಾಡಲಾಗುತ್ತದೆ. ತಮ್ಮ ಋಣ ನಮ್ಮ ಮೇಲಿದೆ. ಅದನ್ನು ತೀರಿಸುವುದು ಕೂಡ ಕಾಂಗ್ರೆಸ್ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಇಲ್ಲಿ ಹಕ್ಕು ಪತ್ರ ವಿತರಣೆಯಾಗಿದ್ದು, ಇನ್ನೂ ಪಕ್ಕಾ ಖಾತೆ ಮಾಡಿಲ್ಲ. ಮುಂದಿನ ದಿನಗಳಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿ ಆ ಕೆಲಸ ಮಾಡಿಕೊಡುತ್ತೇನೆ. ಕಾನೂನು ತೊಡಕು ಬಾರದಂತೆ ಸೂರಿಗೆ ಗ್ಯಾರಂಟಿ ಮಾಡಿಕೊಡುತ್ತೇನೆ' ಎಂದು ನುಡಿದರು.

ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ, ಕಾಂಗ್ರೆಸ್ ಪಕ್ಷ ಸ್ವಾತಂತ್ರ್ಯ ಪೂರ್ವದಿಂದ ದೇಶಕ್ಕೆ ಅಪಾರ ಕೊಡುಗೆ ನೀಡಿದೆ. ಜೆಡಿಎಸ್ ಮತ್ತು ಬಿಜೆಪಿ ಜನರನ್ನು ಯಾಮಾರಿಸಿದ್ದು ಆಗಿದೆ.

> ಈ ಮಣ್ಣಿನ ಋಣದಲ್ಲಿ ನಾನು ಹಾಗೂ ನನ್ನ ಕುಟುಂಬ ಬದುಕಿದೆ. ಅದನ್ನು ಮರೆಯಲು ಸಾಧ್ಯವಿಲ್ಲ. ಈ ಭಾಗದ ಜನ ನಮ್ಮ ತಂದೆಯವರ ಕಾಲದಿಂದ ಶಕ್ತಿ ತುಂಬಿದ್ದಾರೆ. ಎಂದಿಗೂ ತಮ್ಮೊಂದಿಗೆ ಇರುತ್ತೇನೆ.
> -ಕೃಷ್ಣಬೈರೇಗೌಡ, ಕಂದಾಯ ಸಚಿವ

ಅವರ ಆಟ ಚುನಾವಣೆಯಲ್ಲಿ ನಡೆಯಲ್ಲ' ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಎಂ.ಎಲ್ ಅನಿಲ್ ಕುಮಾರ್, 'ವೇಮಗಲ್-ಕುರುಗಲ್ ಪಟ್ಟಣ ಪಂಚಾಯಿತಿ ಚುನಾವಣೆಗೆ ಎಲ್ಲಾ ಜಾತಿ ಧರ್ಮಗಳಿಗೂ ಸಾಮಾಜಿಕ ನ್ಯಾಯದ ಅಡಿಯಲ್ಲಿ ಅಭ್ಯರ್ಥಿ ಆಯ್ಕೆ ಮಾಡಲಾಗಿದೆ. 17 ವಾರ್ಡ್‌ಗಳಲ್ಲಿ ಪರಿಶಿಷ್ಟ ಜಾತಿ 5, ಹಿಂದುಳಿದ ವರ್ಗಕ್ಕೆ 5, ಒಕ್ಕಲಿಗ 4, ಪರಿಶಿಷ್ಟ ಪಂಗಡ 1, ಮುಸ್ಲಿಂ 1, ಲಿಂಗಾಯತ 1 ಸ್ಥಾನಗಳಲ್ಲಿ ಸ್ಪರ್ಧಿಸಲು ಅವಕಾಶ ನೀಡಲಾಗಿದೆ' ಎಂದರು.

ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮಾಜಿ ಸಭಾಪತಿ ವಿ.ಆರ್.ಸುದರ್ಶನ್, ಲೋಕಸಭಾ ಪರಾಜಿತ ಅಭ್ಯರ್ಥಿ ಕೆ.ವಿ.ಗೌತಮ್ ಮಾತನಾಡಿದರು. ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ 17 ವಾರ್ಡ್‌ಗಳ ಕಾಂಗ್ರೆಸ್

> ಜೆಡಿಎಸ್-ಬಿಜೆಪಿಯವರು ಎಚ್. ಕ್ರಾಸ್‌ನಲ್ಲಿ ಟೋಕನ್ ಕೊಟ್ಟು ಜನರನ್ನು ಮತ್ತೊಮ್ಮೆ ಯಾಮಾರಿಸಲು ಹೊರಟಿದ್ದಾರೆ. ಜನ ಸ್ವಾಭಿಮಾನದಿಂದ ತಕ್ಕ ಪಾಠ ಕಲಿಸಲಿದ್ದಾರೆ.
> -ಕೊತ್ತೂರು ಮಂಜುನಾಥ್ ಶಾಸಕ

> 'ಜಿಲ್ಲಾ ಉಸ್ತುವಾರಿ ಸಚಿವ, ಶಾಸಕ, ವಿಧಾನ ಪರಿಷತ್ ಸದಸ್ಯರು ಕಾಂಗ್ರೆಸ್‌ನವರು ಇದ್ದು ಪಟ್ಟಣ ಪಂಚಾಯಿತಿಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕು. ಇದು ಅಭಿವೃದ್ಧಿಗೆ ಪೂರಕವಾಗಲಿದೆ. ಕೈಗಾರಿಕೆ ಸ್ಥಾಪನೆಯಾದ ನಂತರ ಪಟ್ಟಣ ಪಂಚಾಯಿತಿ ಮೇಲ್ದರ್ಜೆಗೇರಿತು. ಮತ್ತಷ್ಟು ಅಭಿವೃದ್ಧಿಯಾಗಬೇಕೆಂದರೆ ಅದು ಕಾಂಗ್ರೆಸ್ ಸರ್ಕಾರದಿಂದ ಮಾತ್ರ ಸಾಧ್ಯ' ಎಂದರು.
> ಕಂದಾಯ ಸಚಿವ ಕೃಷ್ಣಬೈರೇಗೌಡ

ಪಕ್ಷದ ಅಭ್ಯರ್ಥಿಗಳು, ಕೋಮುಲ್ ನಿರ್ದೇಶಕ ಚಂಜಿಮಲೆ ಬಿ.ರಮೇಶ್, ಮುಖಂಡರಾದ ಸೀಸಂದ್ರ, ಗೋಪಾಲಗೌಡ, ಮೈಲಾಂಡಹಳ್ಳಿ ಮುರಳಿ, ಮುನಿಯಪ್ಪ ಇದ್ದರು.

# ರಸ್ತೆ ಪಕ್ಕದಲ್ಲೇ ವಾರದ ಸಂತೆ: ವ್ಯಾಪಾರಿಗಳು, ಗ್ರಾಹಕರಿಗೆ ತೊಂದರೆ

• **ಉದಯವಾಹಿನಿ, ತಿಪಟೂರು**

ತಾಲ್ಲೂಕಿನ ಬಿದರೆಗುಡಿಯಲ್ಲಿ ಪ್ರತಿ ಭಾನುವಾರ ನಡೆಯುವ ಸಂತೆ ರಸ್ತೆಯಲ್ಲಿಯೇ ನಡೆಯುತ್ತಿದ್ದು. ವ್ಯಾಪಾರಿಗಳು ಹಾಗೂ ಗ್ರಾಹಕರಿಗೆ ಕಿರಿಕಿರಿಯಾಗಿದೆ. ಈ ಸಂತೆಯಲ್ಲಿ ರೈತರು ತಾವು ಬೆಳೆದ ಬೆಳೆಗಳನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡುತ್ತಾರೆ.

ರಸ್ತೆಯ ಎರಡು ಬದಿ ಸಂತೆ ನಡೆಯುತ್ತಿದ್ದು, ಪಾದಚಾರಿಗಳಿಗೆ ಸ್ಥಳವಿಲ್ಲದಂತಾಗಿದೆ. ಭಾರಿ ವಾಹನಗಳ ನಿರಂತರ ಸಂಚಾರದ ನಡುವೆ ನಡೆಯುವ ವ್ಯಾಪಾರವು ಅನೇಕ ಬಾರಿ ಸಂಚಾರ ದಟ್ಟಣೆಗೆ ಕಾರಣವಾಗುತ್ತಿದೆ. ಮತ್ತಿಹಳ್ಳಿ ಗ್ರಾಮ ಪಂಚಾಯಿತಿಯ ಬಿದರೆಗುಡಿ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡು ಅರಸೀಕೆರೆ-ತಿಪಟೂರು-ಹೊನ್ನವಳ್ಳಿ ಮಧ್ಯೆ ಇರುವುದರಿಂದ ಸಂತೆ ಜನಸಂದಣಿಯಿಂದ ಕೂಡಿರುತ್ತದೆ. ಸಂತೆ ಸ್ಥಳದಲ್ಲಿ ನೂರಾರು ಪುಟ್ಟ ತರಕಾರಿ, ತಿಂಡಿ ತಿನಿಸು ಅಂಗಡಿಗಳು ಸೇರುವ ತಾಣವಾಗಿದೆ. ಹದಿನೈದು ಅಡಿ ಅಗಲವಿರುವ ರಸ್ತೆಯ ಅಕ್ಕಪಕ್ಕದಲ್ಲಿಯೇ ಕುಳಿತು ವ್ಯಾಪಾರ ಮಾಡಲಾಗುತ್ತಿದೆ.

ಇಲ್ಲಿನ ಅಂಗಡಿಗಳಲ್ಲಿ ಮಳೆ, ಗಾಳಿಗೆ ಯಾವುದೇ ಭದ್ರತೆ ಇಲ್ಲ. ಸಂತೆಗೆ ಯಾವುದೇ ನಿರ್ದಿಷ್ಟ ಸ್ಥಳ ನಿಗದಿಯಾಗಿಲ್ಲ. ರಾಜ್ಯ, ಹೆದ್ದಾರಿ, ಅಂತರಿಕ ಗ್ರಾಮೀಣ ರಸ್ತೆಗಳ ಪಕ್ಕದಲ್ಲಿ ನಡೆಯುತ್ತದೆ. ಸ್ಥಳೀಯರ ಪ್ರಕಾರ



> ಬಿದರೆಗುಡಿ ಸಂತೆಗೆ ಸೂಕ್ತ ಸ್ಥಳ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿರು ಒತ್ತಾಯಿಸಿದ್ದಾರೆ. ವ್ಯಾಪಾರ ನಡೆಯುವ ಸ್ಥಳವು ರಸ್ತೆ ಪಕ್ಕದಲ್ಲಿದ್ದು ಅಪಾಯಕ್ಕೆ ಆಹ್ವಾನ ನೀಡುವಂತಿದೆ. ಬಿದರೆಗುಡಿಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಸ್ವತ್ತು ಇದ್ದು, ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು ಪಂಚಾಯಿತಿ ಸ್ಥಳ ಗುರುತಿಸಿ ಕೊಟ್ಟರೆ ಸ್ಥಳೀಯ ಸರ್ಕಾರದಿಂದ ಸೂಕ್ತ ವ್ಯವಸ್ಥೆ ಮಾಡಲಾಗುವುದು.
> -ಜ್ಯೋತಿ ಮಹೇಶ್, ಮತ್ತಿಹಳ್ಳಿ ಗ್ರಾ.ಪಂ ಅಧ್ಯಕ್ಷ

ಸಂತೆಯಲ್ಲಿ ಉಂಟಾಗುವ ಜನಸಂದಣಿ ಹಾಗೂ ವಾಹನ ನಿಯಂತ್ರಣಕ್ಕೆ ಯಾವುದೇ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸುವುದಿಲ್ಲ. ಸಂಚಾರ ದಟ್ಟಣೆ ನಿಯಂತ್ರಣಕ್ಕೆ

> ಗ್ರಾಮೀಣ ಭಾಗದ ರೈತರು ಬೆಳೆದ ಹಣ್ಣು, ತರಕಾರಿಗಳನ್ನು ಅವರೇ ತಂದು ಮಾರಾಟ ಮಾಡುವುದರಿಂದ ತಾಜಾವಾಗಿರುತ್ತದೆ. ಆದರೆ ಸಂತೆ ನಡೆಯುವ ಸ್ಥಳದಲ್ಲಿ ರಸ್ತೆ ಕಿರಿದಾಗಿದ್ದು, ಸಂಚಾರ ದಟ್ಟಣೆ ಇರುತ್ತದೆ. ಸಂತೆಗೆ ಪರ್ಯಾಯ ಜಾಗ ಕಲ್ಪಿಸುವುದು ಉತ್ತಮ. -ಹರೀಶ್, ಗ್ರಾಹಕ

> ಹೊನ್ನವಳ್ಳಿ, ಹುಳಿಯಾರು, ಚಿತ್ರದುರ್ಗ, ಬಳ್ಳಾರಿ ಕಡೆಗೆ ಸಾಗುವ ಸಾವಿರಾರು ವಾಹನಗಳು ಸಾಗುವ ಹೆದ್ದಾರಿ ಪಕ್ಕದಲ್ಲಿ ಸಂತೆ ನಡೆಯುವುದರಿಂದ ಅಪಾಯ ಕಟ್ಟಿಟ್ಟ ಬುತ್ತಿ. ಪಕ್ಕದಲ್ಲಿಯೇ ಗ್ರಾಮ ಪಂಚಾಯಿತಿ ಮತ್ತು ಎಪಿಎಂಸಿ ಅನುದಾನಿತ ಮಾರುಕಟ್ಟೆ ಪ್ರಾಂಗಣ ಇದ್ದು, ಸಂತೆ ಸ್ಥಳ ಸ್ಥಳಾಂತರಕ್ಕೆ ಗಮನಹರಿಸಬೇಕು.
> -ವಿಜಯ್‌ಕುಮಾರ್, ಕರವೇ ಅಧ್ಯಕ್ಷ

ಸಿಬ್ಬಂದಿಯನ್ನು ನಿಯೋಜಿಸಬೇಕು ಎನ್ನುವುದು ಸ್ಥಳೀಯರ ಒತ್ತಾಯ.

# ಭ್ರಮೆ ಬಿಟ್ಟು ಕನಸು, ಗುರಿ ಬೆನ್ನಟ್ಟಿ ಗೆಲ್ಲಿ

• **ಉದಯವಾಹಿನಿ, ಕೋಲಾರ**

ಅಧಿಕಾರ ಅನುಭವಿಸಬಹುದು ಹಣ ಮಾಡಬಹುದೆಂಬ ಕೆಟ್ಟ ಆಲೋಚನೆ, ಉದ್ದೇಶ ಇಟ್ಟುಕೊಂಡು ಯಾವುದೇ ಕಾರಣಕ್ಕೂ ಸ್ಪರ್ಧಾತ್ಮಕ ಪರೀಕ್ಷೆ ಬರೆಯಬೇಡಿ. ಹಣಗಳಿಸಲು ಬೇರೆ ಹಲವಾರು ಮಾರ್ಗಗಳಿವೆ.

ಹಣ, ಅಧಿಕಾರ ಬಿಟ್ಟು ಗುರಿ, ಕನಸುಗಳನ್ನು ಬೆನ್ನಟ್ಟಿ ಗೆಲ್ಲುವ ಸಂಕಲ್ಪದೊಂದಿಗೆ ಅಧ್ಯಯನ ಮಾಡಿ' ಎಂದು ಜಿಲ್ಲಾಧಿಕಾರಿ ಎಂ.ಆರ್.ರವಿ ಕಿವಿಮಾತು ಹೇಳಿದರು. ನಗರದ ಟಿ.ಚೆನ್ನಯ್ಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಐಪಿಎಸ್ ಅಧಿಕಾರಿ ಡಿ.ದೇವರಾಜ್ ಅವರ ಡಿಎಂಆರ್ ಸಂಸ್ಥೆ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕಾ ತರಬೇತಿಯ ಉಚಿತ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತಾನು ಹಳ್ಳಿಯವ, ಬಡತನವಿದೆ. ಸಣ್ಣ ಜಾತಿ. ನಮ್ಮಂಥವರಿಗೆ ಆಗಲ್ಲ ಎಂಬ ಮನೋಭಾವ ಬಿಟ್ಟುಬಿಡಿ. ಎಷ್ಟು ಗಂಟೆ ಓದಿದ್ದೀರಿ ಎಂಬುದು ಮುಖ್ಯವಲ್ಲ; ಏನು ಓದಿದ್ದೀರಿ ಎಂಬುದು ಮುಖ್ಯ. ವ್ಯವಧಾನ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ವಿಶ್ವವಿದ್ಯಾಲಯ ಪರೀಕ್ಷೆಗಿಂತ ಯುಪಿಎಸ್‌ಸಿ ಪರೀಕ್ಷೆ ಸಂಪೂರ್ಣ ಭಿನ್ನವಾಗಿರುತ್ತದೆ. ಓದು, ಬರಹದ ಪ್ಯಾಷನ್ ಬೆಳೆಸಿಕೊಳ್ಳಿ. ಇಚ್ಛಾ ಶಕ್ತಿ, ಬದ್ಧತೆ, ತ್ಯಾಗ, ನಿಷ್ಠೆ, ಶಿಸ್ತು, ಸಿದ್ಧತೆ ಇರಬೇಕು. ಕೀಳರಿಮೆ, ಹಿಂಜರಿಕೆ ಬೇಡ. ಪರೀಕ್ಷೆ ಬರೆಯಲು ಜೀನಿಯಸ್ ಆಗಿರಬೇಕು ಎಂಬ ತಪ್ಪು ಕಲ್ಪನೆಯೂ ಬೇಡ. ದಿನಪತ್ರಿಕೆ ನಿತ್ಯ ಓದಿ ಎಂದು ಸಲಹೆ ನೀಡಿದರು. ಡಿಸಿಪಿ ದೇವರಾಜ್ ತಮ್ಮ ಊರಿನ ಯುವಕರಿಗಾಗಿ ಏನಾದರೂ ಮಾಡಬೇಕೆಂದು ಸಂಸ್ಥೆ ಕಟ್ಟಿ ಆದರ್ಶಪ್ರಾಯರಾಗಿದ್ದಾರೆ.

ತಮ್ಮ ಜನ್ಮ ಭೂಮಿಯ ಋಣ ತೀರಿಸಿಕೊಳ್ಳಲು ಪೋಷಕರ ಹೆಸರಿನಲ್ಲಿ ಈ ಸಂಸ್ಥೆ ಪ್ರಾರಂಭಿಸಿ ಅನೇಕ ಪ್ರತಿಭೆಗಳನ್ನು ದೇಶಕ್ಕೆ, ರಾಜ್ಯಕ್ಕೆ ಕೊಡುಗೆಯಾಗಿ ನೀಡುತ್ತಿರುವುದು ಅಭಿನಂದನಾರ್ಹ' ಎಂದರು. ಬೆಂಗಳೂರಿನ ಪೂರ್ವ ಡಿಸಿಪಿ ಡಿ.ದೇವರಾಜ್ ಮಾತನಾಡಿ, ಸಂಸ್ಥೆ ಸ್ಥಾಪನೆ ಹಿಂದೆ ಯಾರ ವೈಯಕ್ತಿಕ ಆಸೆ, ಆಕಾಂಕ್ಷೆ ಇಲ್ಲ. ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು, ತರಬೇತಿ ಪಡೆಯಲು ಪ್ರತಿಭಾವಂತ ಬಡ



> ಯಾವುದೇ ಸ್ಪರ್ಧಾತ್ಮಕ ಪರೀಕ್ಷೆಯು ಟಿ-20 ಪಂದ್ಯವಲ್ಲ; ಟೆಸ್ಟ್ ಪಂದ್ಯ ಇದ್ದಂತೆ ಎಂಬುದನ್ನು ನೆನಪಿನಲ್ಲಿ ಇಟ್ಟುಕೊಳ್ಳಬೇಕು. ಇದಕ್ಕೆ ಸಹನೆ, ಸಮಯ ನಿರ್ವಹಣೆ ಬಹಳ ಮುಖ್ಯ' ಎಂದರು. ಯಾರೂ ರಾತ್ರೋರಾತ್ರಿ ಸೂಪರ್ ಸ್ಟಾರ್ ಆಗಲು ಸಾಧ್ಯವಿಲ್ಲ. ಪ್ರತಿ ದಿನ ಓದಬೇಕು. ಅದಕ್ಕೆ ಮನೋಭಾವ ಬಹಳ ಮಹತ್ವದ್ದು. ಜೊತೆಗೆ ಸಿದ್ಧತೆ, ಯೋಜನೆಗೆ ಹೆಚ್ಚು ಒತ್ತು ನೀಡಬೇಕು. ಪರೀಕ್ಷೆಯನ್ನು ಮೊದಲು ಅರ್ಥ ಮಾಡಿಕೊಳ್ಳಬೇಕು ಎಂದು ತಿಳಿಸಿದರು.
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ.

ವಿದ್ಯಾರ್ಥಿಗಳಿಗೆ ಬೆಂಗಳೂರು ದುಬಾರಿಯಾಗಿದೆ. ಪ್ರಯಾಣ, ಊಟ, ವಸತಿ ಕಷ್ಟ. ಹಲವರಿಗೆ ಪೋಷಕರ ಹೆಸರಿನಲ್ಲಿ ಡಿಎಂಆರ್ ಸಂಸ್ಥೆಯನ್ನು ಕೋಲಾರದಲ್ಲಿ ಸ್ಥಾಪಿಸಲಾಗಿದೆ. ನಮ್ಮ ಸಂಸ್ಥೆಯಲ್ಲಿ ತರಬೇತಿ ಪಡೆದವರು ಹಲವಾರು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಶಸ್ವಿಯಾಗಿ ಎದುರಿಸಿದ್ದಾರೆ. ಸುಗಟೂರಿನ ಧರಣಿ ಮೊದಲ ಪ್ರಯತ್ನದಲ್ಲಿ ಯುಪಿಎಸ್‌ಸಿ ಸಂದರ್ಶನ ಎದುರಿಸಿ ಬಂದಿದ್ದಾರೆ ಎಂದು ಹೇಳಿದರು. ಸಂಪನ್ಮೂಲ ವ್ಯಕ್ತಿ ರಾಘವೇಂದ್ರ ರಾವ್, ಕೋಲಾರದ ಜನತೆಗಾಗಿ ಡಿಎಂಆರ್ ಸಂಸ್ಥೆ ಕಟ್ಟಿದ ಡಿಸಿಪಿ ದೇವರಾಜ್ ಅವರ ಸಾಮಾಜಿಕ ಕಾಳಜಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಐಎಎಸ್ ಪರೀಕ್ಷೆಯಲ್ಲಿ 522 ರ‍್ಯಾಂಕ್ ಪಡೆದ ಮಧು, ಎಸ್‌ಐ ಹುದ್ದೆಗೆ ಆಯ್ಕೆಯಾದ ಜಯ ಸೂರ್ಯ, ಸರ್ಕಾರಿ ಜೂನಿಯರ್ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಬಾಲಕೃಷ್ಣ ಅವರನ್ನು ಸನ್ಮಾನಿಸಲಾಯಿತು.

# ಕೈಬೀಸಿ ಕರೆಯುತ್ತಿದೆ ದೇಸಿ ಅಕ್ಕಿ ಮೇಳ

• **ಉದಯವಾಹಿನಿ, ಮೈಸೂರು**

ಕೆಂಪಕ್ಕಿ, ಸುವಾಸನೆಯುಳ್ಳ ಅಕ್ಕಿ, ಕಪ್ಪು ಅಕ್ಕಿ, ಔಷಧಿ ಅಕ್ಕಿ, ದಪ್ಪಕ್ಕಿ ...ಹೀಗೆ ವೈವಿಧ್ಯಮಯ ದೇಸಿ ಅಕ್ಕಿಗಳು ಹಾಗೂ ಅವುಗಳ ಮೌಲ್ಯವರ್ಧಿತ ಪದಾರ್ಥಗಳಿಂದ ನಗರದ ನಂಜರಾಜ ಛತ್ರವು ಕಳೆಗಟ್ಟಿದ್ದು, ಗ್ರಾಹಕರನ್ನು ಕೈಬೀಸಿ ಕರೆಯುತ್ತಿದೆ. ಭತ್ತ ಉಳಿಸಿ ಆಂದೋಲನ ಹಾಗೂ ಸಹಜ ಸಮೃದ್ಧ ಸಂಘಟನೆಯು ಏರ್ಪಡಿಸಿರುವ ಎರಡು ದಿನಗಳ ದೇಸಿ ಅಕ್ಕಿ ಮೇಳ'ವು ವಿವಿಧ ರಾಜ್ಯಗಳ ನೂರಕ್ಕೂ ಅಧಿಕ ದೇಸಿ ಅಕ್ಕಿಗಳ ಸಂಗ್ರಹದಿಂದ ಸೆಳೆಯಿತು.

ರಾಜಮುಡಿ, ಬರ್ಮಾ ಬ್ಲಾಕ್, ಸಿದ್ದ ಸಣ್ಣ, ರತ್ನಚೂಡಿ, ನವರ, ಗೋವಿಂದ ಭೋಗ್, ಎಚ್.ಎಂ.ಟಿ, ಸಿಂಧೂರ ಮಧುಸಾಲೆ ಮೊದಲಾದ ದೇಸಿ ಭತ್ತಗಳ ಬೀಜಗಳನ್ನೂ ಪ್ರದರ್ಶನಕ್ಕಿಟ್ಟಿದ್ದು, ಭತ್ತ ಸಂರಕ್ಷಕರು ತಾವು ಬೆಳೆದ ದೇಸಿ ಅಕ್ಕಿಗಳ ನೇರ ಮಾರಾಟ ಮಾಡಿದರು. ಸಿರಿಧಾನ್ಯ, ತರಕಾರಿ ಬಿತ್ತನೆ ಬೀಜಗಳು, ಗೆಡ್ಡೆ ಗೆಣಸು ಮತ್ತು ಸಾವಯವ ಉತ್ಪನ್ನಗಳು, ಹಣ್ಣಿನ ಗಿಡಗಳನ್ನು ಮಾರಾಟಕ್ಕೆ ಇಡಲಾಗಿದೆ.

ಅಸ್ಸಾಂನಿಂದ ಬಂದಿರುವ ಕೋಮಲ್ ಚಾವಲ್ ಅಕ್ಕಿ ಎಲ್ಲರನ್ನು ಸೆಳೆಯುತ್ತಿದೆ. ಇದರ ಅನ್ನ ಮಾಡಲು ವ್ ಹೊತ್ತಿಸಬೇಕಿಲ್ಲ. ಉಗುರು ಬೆಚ್ಚಗಿನ ಅಥವಾ ಕುದಿ

### ಅಕ್ಕಿ ಅಡುಗೆ ಮತ್ತು ಚಿತ್ರಕಲಾ ಸ್ಪರ್ಧೆ

ಮೇಳದಲ್ಲಿ ಮಧ್ಯಾಹ್ನ 12.30ಕ್ಕೆ ಅಕ್ಕಿ ಅಡುಗೆ ಸ್ಪರ್ಧೆ ಆಯೋಜಿಸಲಾಗಿದೆ. ಆಸಕ್ತರು ದೇಸಿ ಅಕ್ಕಿಯಿಂದ ಮಾಡಿದ ಯಾವುದೇ ಬಗೆಯ ಅಡುಗೆಗಳನ್ನು ಮನೆಯಲ್ಲೇ ತಯಾರಿಸಿ ತರಬಹುದು. ಆಯ್ದ ಉತ್ತಮ ಅಡುಗೆಗೆ ನಗದು ಬಹುಮಾನವಿದೆ. 15 ವರ್ಷದೊಳಗಿನ ಮಕ್ಕಳಿಗಾಗಿ 'ಭತ್ತದ ಲೋಕ ನಾ ಕಂಡಂತೆ ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿದೆ. ಆಸಕ್ತರು ಮನೆಯಲ್ಲೇ ಚಿತ್ರ ಬರೆದು ಬೆಳಿಗ್ಗೆ 11ಕ್ಕೆ ಮೇಳಕ್ಕೆ ತರಬೇಕು ಎಂದು ಸಂಘಟಕರು ತಿಳಿಸಿದ್ದಾರೆ.

ನೀರು ಸಾಕು. ಅದರಲ್ಲಿ ಅಕ್ಕಿ ನೆನೆಸಿಟ್ಟರೆ ಹತ್ತು ನಿಮಿಷದಲ್ಲಿ ಅನ್ನ ಸಿದ್ಧವಾಗುತ್ತದೆ. 'ಮ್ಯಾಜಿಕ್ ರೈಸ್' ಎಂದು ಕರೆಯುವ ಈ ಅಕ್ಕಿ ನೋಡಲು ಜನ ಮುಗಿಬಿದ್ದರು.

ಅಕ್ಕಿಯನ್ನೇ ಮೊಳಕೆ ಬರಿಸಿ ಆಹಾರ ತಯಾರಿಕೆಗೆ ಬಳಸುವ ಥಾಯ್ಲ್ಯಾಂಡಿನ ವಿಧಾನವನ್ನು ಮೇಳದಲ್ಲಿ ಪ್ರಾಯೋಗಿಕವಾಗಿ ತೋರಿಸಲಾಗಿದೆ. ತಮಿಳುನಾಡಿನ ರೈತರು ಮಾಪಿಳ್ಳೆ ಸಾಂಬ ಎಂಬ ಔಷಧೀಯ ಭತ್ತವನ್ನು ಮಾರಾಟ ಮಾಡುತ್ತಿದ್ದಾರೆ.

# ಆನೆಗಮಡುಗು: ಬರಡು ರಾಸು ತಪಾಸಣೆ, ಚಿಕಿತ್ಸಾ ಶಿಬಿರ

• **ಉದಯವಾಹಿನಿ, ಶಿಡ್ಲಘಟ್ಟ**

ತಾಲ್ಲೂಕಿನ ಆನೆಮಡುಗು ಗ್ರಾಮದಲ್ಲಿ ಅಂತಿಮ ವರ್ಷದ ಬಿಎಸ್‌ಸಿ (ಆನರ್ಸ್) ಕೃಷಿ ವಿದ್ಯಾರ್ಥಿಗಳು ಗ್ರಾಮೀಣ ಕೃಷಿ ಕಾರ್ಯಾನುಭವ 2025-26ರ ಅಡಿ ಬರಡು ರಾಸುಗಳ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ ಹಮ್ಮಿಕೊಂಡರು. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಚಿಂತಾಮಣಿಯ ಕುರುಬೂರಿನ ರೇಷ್ಮೆ ಕೃಷಿ ಮಹಾವಿದ್ಯಾಲಯ, ಆನೆಮಡುಗು ಹಾಲು ಉತ್ಪಾದಕರ ಸಂಘದ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಿತು.

ಚಿಮುಲ್ ಶಿಬಿರ ಘಟಕದ ವ್ಯವಸ್ಥಾಪಕ ಡಾ.ರವಿಕಿರಣ್ ಬಿ.ಆರ್ ಮಾತನಾಡಿ, ಗ್ರಾಮೀಣ ಪ್ರದೇಶದ ಪ್ರಮುಖ ಆದಾಯ ಮೂಲ ಪಶುಸಂಗೋಪನೆ ಆಗಿದೆ. ಹಾಲಿನ ಉತ್ಪಾದನೆ ಮತ್ತು ಗುಣಮಟ್ಟ ಹೆಚ್ಚಿಸಲು ಹಸುಗಳಿಗೆ ಪ್ರೋಟಿನ್ ಯುಕ್ತ ಆಹಾರ ನೀಡಬೇಕು. ಹಾಲಿನಲ್ಲಿ ಫ್ಯಾಟ್ ಪ್ರಮಾಣ ಹೆಚ್ಚುವುದರಿಂದ ರೈತರಿಗೆ ಹೆಚ್ಚಿನ ಆದಾಯ ಸಿಗಲಿದೆ ಎಂದರು. ಹಾಲಿನ ಉತ್ಪಾದನೆ ಹೆಚ್ಚಳದಿಂದ ರೈತರು ಹೆಚ್ಚಿನ ಆದಾಯ ಗಳಿಸಬಹುದು. ಕ್ಯಾಲ್ಸಿಯಂ ಮತ್ತು ಮಿನರಲ್ಸ್ ಇರುವ ನ್ಯೂಟ್ರಿಷನ್ ಆಹಾರವನ್ನು ಹಸುಗಳಿಗೆ ಕೊಡಬೇಕು. ಸೀಮೆ ಹುಲ್ಲಿನ ಜೊತೆ ದ್ವಿದಳ ಧಾನ್ಯಗಳ ಹುಲ್ಲು, ಅಜೋಲ ಕೊಡಬೇಕು ಎಂದರು. ಗ್ರಾಮದ 12 ಹಸು, 10 ಎಮ್ಮೆ ಸೇರಿದಂತೆ 60ಕ್ಕೂ ಹೆಚ್ಚು ಕುರಿ ಹಾಗು ಮೇಕೆಗಳಿಗೆ ಚಿಕಿತ್ಸೆ ನೀಡಲಾಯಿತು. ನಾಯಿಗಳಿಗೆ ರೇಬಿಸ್ ಲಸಿಕೆ ಹಾಕಿಸಲಾಯಿತು. ಜಿಕೆವಿಕೆ ಪ್ರಾಧ್ಯಾಪಕಿ ಡಾ.ಸಿ.ಎಂ.ಸವಿತಾ, ಕೆ.ನಾರಾಯಣಸ್ವಾಮಿ, ಪಶು ವೈದ್ಯಾಧಿಕಾರಿ ಡಾ.ಶ್ರೀನಾಥರೆಡ್ಡಿ, ವಿಸ್ತರಣಾಧಿಕಾರಿ ಶಶಿಕುಮಾರ್, ರೈತರು, ಗ್ರಾಮಸ್ಥರು, ರೈತ ಮಹಿಳೆಯರು ಹಾಗು ವಿದ್ಯಾರ್ಥಿಗಳು ಹಾಜರಿದ್ದರು.



# ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಆದೇಶ

## ಕರೆದೊಯ್ಯುವ ಪ್ರವೃತ್ತಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್ ಬ್ರೇಕ್ ಹಾಕಿದ್ದಾರೆ

• **ಉದಯವಾಹಿನಿ, ರಾಮನಗರ**

ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳನ್ನು ಇನ್ನು ಮುಂದೆ ಹೊರಗಿನ ಯಾವುದೇ ಕಾರ್ಯಕ್ರಮಗಳಿಗೆ ಪ್ರೇಕ್ಷಕರಾಗಿ ಕರೆದುಕೊಂಡು ಹೋಗುವಂತಿಲ್ಲ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆದೇಶ ಮಹತ್ವದ ಆದೇಶವನ್ನು ಹೊರಡಿಸಿದೆ. ಆ ಮೂಲಕ ಜನಪ್ರತಿನಿಧಿಗಳು, ರಾಜಕೀಯ ಮುಖಂಡರು, ಸರ್ಕಾರೇತರ ಸಂಘ ಸಂಸ್ಥೆಗಳು, ಸಂಘಟನೆಗಳ ಶೈಕ್ಷಣಿಕೇತರ ಕಾರ್ಯಕ್ರಮಗಳಿಗೆ ವಿದ್ಯಾರ್ಥಿಗಳನ್ನು ಕರೆದೊಯ್ಯುವ ಪ್ರವೃತ್ತಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್ ಬ್ರೇಕ್ ಹಾಕಿದ್ದಾರೆ. ಆದೇಶ ಉಲ್ಲಂಘಿಸುವವರ ವಿರುದ್ಧ ಶಿಸ್ತು ಕ್ರಮದ ಎಚ್ಚರಿಕೆ ನೀಡಿದ್ದಾರೆ.

**ಶಿಕ್ಷಕರೂ ಹೋಗುವಂತಿಲ್ಲ:** ಶಾಲಾವಧಿಯಲ್ಲಿ ತರಬೇತಿ, ಕಾರ್ಯಕ್ರಮ, ಕಾರ್ಯಾಗಾರ, ಸಭೆ ಇನ್ನಿತರ ಚಟುವಟಿಕೆಗಳಿಗೆ ಶಿಕ್ಷಕರನ್ನು ನಿಯೋಜನೆ ಅಥವಾ ಕರ್ತವ್ಯದ ಮೇರೆಗೆ ಮೌಖಿಕ ಅಥವಾ ಲಿಖಿತ ಆದೇಶದ ಮೂಲಕ ಕಳುಹಿಸಬಾರದು. ಜಿಲ್ಲಾಧಿಕಾರಿ ಜಿಲ್ಲಾ ಪಂಚಾಯಿತಿಯ ಸಿಇಒ ಸಹ ಇಂತಹ ನಿರ್ದೇಶನಗಳನ್ನು ನೀಡುವಂತಿಲ್ಲ. ತರಗತಿ ಅವಧಿಯಲ್ಲಿ ಶಿಕ್ಷಕರು, ಮುಖ್ಯ ಶಿಕ್ಷಕರನ್ನು ಸಭೆಗಳಿಗೆ ಕರೆಯಬಾರದು. ವಿಡಿಯೋ ಕಾನ್ಫರೆನ್ಸ್ ಮಾಡಬಾರದು. ಇಲಾಖೆ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿದಾಗ ತರಗತಿಗಳಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ಅವರು ಆದೇಶದಲ್ಲಿ ಸೂಚಿಸಿದ್ದಾರೆ.

**ಇತರ ಪರೀಕ್ಷೆಗೆ ಬ್ರೇಕ್:** ಶಾಲಾ ದಿನಗಳಲ್ಲಿ ಯಾವುದೇ ಬಾಹ್ಯ ಪರೀಕ್ಷೆಗಳನ್ನು (ಕೆಪಿಎಸ್‌ಸಿ, ಕೇಂದ್ರ, ರಾಜ್ಯ ಸರ್ಕಾರ, ಖಾಸಗಿ ಸಂಸ್ಥೆ ಅಥವಾ ಇತರ ಸಂಸ್ಥೆಗಳು ನಡೆಸುವ ಪರೀಕ್ಷೆಗಳು)


ಉದಯವಾಹಿನಿ ಚಿತ್ರ

> ಮಕ್ಕಳನ್ನು ಪ್ರೇಕ್ಷಕರಾಗಿ ಕರೆದೊಯ್ಯುವ, ಶೈಕ್ಷಣಿಕೇತರ ಕೆಲಸಗಳಿಗೆ ಶಿಕ್ಷಕರ ಬಳಕೆ ಕುರಿತು ದೂರುಗಳು ಇದ್ದವು. ಆ ಹಿನ್ನೆಲೆಯಲ್ಲಿ ಆದೇಶ ಹೊರಡಿಸಲಾಗಿದೆ.
> ವಿ.ರಶ್ಮಿ ಮಹೇಶ್, ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

ಶಾಲಾವರಣದಲ್ಲಿ ನಡೆಸಬಾರದು.

ನಡೆಸಲೇಬೇಕಾದ ಅಗತ್ಯವಿದ್ದಲ್ಲಿ, ಅದು ಸಾರ್ವತ್ರಿಕ ರಜೆ ಅಥವಾ ಬೇಸಿಗೆ ರಜೆಯಲ್ಲಿ ನಿಯಮಾನುಸಾರ ನಡೆಸಬೇಕು. ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಶಾಲಾವಧಿಯಲ್ಲಿ ಕಡ್ಡಾಯವಾಗಿ ತರಗತಿ ಯಲ್ಲಿರಬೇಕು. ಭೋದನೆ ಮತ್ತು ಕಲಿಕೆ ಅಡಚಣೆ ಇಲ್ಲದೆ ನಡೆಯಬೇಕು. ಮಕ್ಕಳ ಶೈಕ್ಷಣಿಕ ಪ್ರಗತಿ, ಫಲಿತಾಂಶ ಸುಧಾರಣೆ, ಗುಣಮಟ್ಟದ ಬೋಧನೆಗೆ ಆದ್ಯತೆ ನೀಡಬೇಕು. ಸಾಫ್ಟ್‌ವೇರ್‌ಗಳಲ್ಲಿ ಡೇಟಾ ಎಂಟ್ರಿ ಕೆಲಸ ಮಾಡುವಂತೆ ಶಿಕ್ಷಕರು ಅಥವಾ ಮುಖ್ಯ ಶಿಕ್ಷಕರಿಗೆ ಡಿಡಿಪಿಐಗಳು, ಬಿಇಒಗಳು, ಡಯಟ್ ಪ್ರಾಂಶುಪಾಲರು,

### ಖಾಸಗಿ ಶಾಲೆಗಳಿಗೂ ಅನ್ವಯಿಸಲಿ

ಹೊರಗಿನ ಕಾರ್ಯಕ್ರಮಗಳಿಗೆ ಪ್ರೇಕ್ಷಕರಾಗಿ ಕರೆದೊಯ್ಯಬಾರದು ಎಂಬ ಆದೇಶವು ಖಾಸಗಿ ಶಾಲೆಗಳಿಗೂ ಅನ್ವಯವಾಗಬೇಕು. ಈ ಆದೇಶ ಕಟ್ಟುನಿಟ್ಟಾಗಿ ಜಾರಿಯಾಗಲಿ ಎಂದು ಅನುದಾನ ರಹಿತ ಖಾಸಗಿ ಶಾಲಾ ಆಡಳಿತ ಮಂಡಳಿ ಒಕ್ಕೂಟದ ಬೆಂಗಳೂರು ದಕ್ಷಿಣ ಜಿಲ್ಲೆಯ ಮಾಜಿ ಅಧ್ಯಕ್ಷ ಪಟೇಲ್ ಸಿ. ರಾಜು ಪ್ರತಿಕ್ರಿಯಿಸಿದರು. ಸರ್ಕಾರೇತರ ಸಂಸ್ಥೆಗಳು ಸೇರಿ ಸಂಘ ಸಂಸ್ಥೆ, ಸಂಘಟನೆಗಳ ಶೈಕ್ಷಣಿಕೇತರ ಕಾರ್ಯಕ್ರಮಗಳಿಗೆ ವಿದ್ಯಾರ್ಥಿಗಳ ಕರೆದೊಯ್ಯುವುದು ಸಾಮಾನ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

> ಇಲಾಖೆ ಆದೇಶ ಕ್ರಾಂತಿಕಾರಕವಾಗಿದೆ. ಮಕ್ಕಳ ಗುಣಾತ್ಮಕ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಸಿಕ್ಕಂತಾಗಿದೆ.
> ಚಂದ್ರಶೇಖರ ನುಗ್ಗಲಿ ಅಧ್ಯಕ್ಷ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ

ಇಲಾಖೆಯ ಯಾವುದೇ ಮಟ್ಟದ ಅಧಿಕಾರಿಗಳು, ಖಾಸಗಿ ಸಂಸ್ಥೆಗಳ ಅಥವಾ ಯಾವುದೇ ಜ್ಞಾನ ಪಾಲುದಾರರು ಮೌಖಿಕ ಅಥವಾ ಲಿಖಿತ ಆದೇಶ ನೀಡಬಾರದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

# ಅರೆ ಸೇನಾಪಡೆ ನಿವೃತ್ತರಿಗೆ ಸೌಲಭ್ಯ ಕೊಡಿ: ರಾಜಪ್ಪ



• **ಉದಯವಾಹಿನಿ, ರಾಮನಗರ**

ಅರೆ ಸೇನಾಪಡೆಯ ನಿವೃತ್ತ ಯೋಧರಿಗಾಗಿ ಸೈನಿಕ ಮಂಡಳಿ ಸ್ಥಾಪನೆ, ಕರ್ತವ್ಯದ ಸಂದರ್ಭದಲ್ಲಿ ಮೃತಪಟ್ಟರೆ ಹುತಾತ್ಮ ದರ್ಜೆ ಸೇರಿದಂತೆ ಸೇನಾ ಸಿಬ್ಬಂದಿಗೆ ನೀಡುವ ಸೌಲಭ್ಯಗಳನ್ನು ತಮಗೂ ನೀಡಬೇಕು ಎಂದು ಜಿಲ್ಲಾ ಎಕ್ಸ್‌ಪ್ಯಾರಾ ಮಿಲಿಟರಿ ಅಸೋಸಿಯೇಷನ್ ಅಧ್ಯಕ್ಷ ರಾಜಪ್ಪ ಆಗ್ರಹಿಸಿದರು. 'ಅರೆ ಸೇನಾಪಡೆ ಯೋಧರು ತಮ್ಮ ಪ್ರಾಣ ಒತ್ತೆ ಇಟ್ಟು ಕರ್ತವ್ಯ ನಿರ್ವಹಿಸುತ್ತಾರೆ. ಸೇನಾ ಸಿಬ್ಬಂದಿಗೆ ನೀಡುವ ಸೌಲಭ್ಯಗಳನ್ನು ನಮಗೂ ನೀಡುವಂತೆ ಒತ್ತಾಯಿಸಿ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಈಡೇರಿಲ್ಲ' ಎಂದು ನಗರದ ಗುರುಭವನದಲ್ಲಿ ಅಸೋಸಿಯೇಷನ್ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಬೇಸರ ವ್ಯಕ್ತಪಡಿಸಿದರು.

ನಿವೃತ್ತರ ಮಕ್ಕಳಿಗೆ ರಾಜ್ಯ ಸರ್ಕಾರದ ಉದ್ಯೋಗಗಳಲ್ಲಿ ಮೀಸಲಾತಿ ನೀಡಬೇಕು. ಜಿಲ್ಲಾಮಟ್ಟದಲ್ಲಿ ಅರೆ ಸೇನಾಪಡೆ ಕಚೇರಿಗೆ ಜಾಗ ನೀಡಬೇಕು. ಸರ್ಕಾರದ ಆದೇಶದಂತೆ ನಿವೃತ್ತರಿಗೆ ಭೂಮಿ ಮಂಜೂರು ಮಾಡಬೇಕು. ಮಾಜಿ ಯೋಧರು ಮೃತಪಟ್ಟಾಗ ಸ್ಥಳೀಯ ಪೊಲೀಸರಿಂದ ಅಂತಿಮ ಗೌರವ ಸಿಗಬೇಕು' ಎಂದು ಒತ್ತಾಯಿಸಿದರು. ಅಸೋಸಿಯೇಷನ್ ಹಾಸನ ಜಿಲ್ಲಾಧ್ಯಕ್ಷ ನಾಗೇಶ್, 'ಸಮಾನ ಕೆಲಸಕ್ಕೆ

> 'ಸೇನಾ ಸಿಬ್ಬಂದಿಗೆ ನೀಡುವ ಅರ್ಧದಷ್ಟು ಸೌಲಭ್ಯಗಳು ಸಹ ಅರೆ ಸೇನಾಪಡೆ ಯೋಧರಿಗೆ ಸಿಗುತ್ತಿಲ್ಲ. 2018ರಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕೆಲ ಸೌಲಭ್ಯಗಳನ್ನು ನೀಡಲು ಆದೇಶ ಹೊರಡಿಸಿತ್ತು. ಆದರೆ, ನಂತರದ ಸರ್ಕಾರ ಆದೇಶವನ್ನು ರದ್ದುಗೊಳಿಸಿತು. ಈಗಿರುವ ಅವರದ್ದೇ ಸರ್ಕಾರ ಮತ್ತೆ ಆದೇಶ ಹೊರಡಿಸಿ, ನಮ್ಮ ಮನವಿಗೆ ಸ್ಪಂದಿಸಬೇಕು' ಎಂದರು.
> ಅಸೋಸಿಯೇಷನ್ ರಾಜ್ಯ ಉಪಾಧ್ಯಕ್ಷ ಕೃಷ್ಣಪ್ಪ

ಸಮಾನ ವೇತನ ಸಿಗುತ್ತಿಲ್ಲ. ಅರೆ ಸೇನಾಪಡೆಯಲ್ಲಿ ನಿವೃತ್ತರೂ ಸೇರಿದಂತೆ ರಾಜ್ಯದಲ್ಲಿ 30 ಲಕ್ಷ ಜನರಿದ್ದಾರೆ. ಸರ್ಕಾರ ಇನ್ನಾದರೂ ನಮ್ಮ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು. ಅಸೋಸಿಯೇಷನ್ ರಾಜ್ಯಾಧ್ಯಕ್ಷ ಎಸ್. ನರಸಿಂಹರೆಡ್ಡಿ, ಮಂಡ್ಯ ಜಿಲ್ಲಾಧ್ಯಕ್ಷ ಚಲುವರಾಜು, ಜಿಲ್ಲಾ ಉಪಾಧ್ಯಕ್ಷ ಬಿ. ಬಸವರಾಜು, ಕಾರ್ಯದರ್ಶಿ ಖಜಾಂಚಿ ಬಿ.ಎಂ. ಸಿದ್ದಪ್ಪ, ಪದಾಧಿಕಾರಿಗಳಾದ ಬಿ.ಎಚ್. ಓಂಕಾರೇಶ್ವರ, ಕೆ. ರಾಘವ, ಸಿ.ಎಸ್. ಶೇಖರ್, ಗಾಯಿತ್ರಿ, ಮಂಜುಳ, ರೈತ ಸಂಘದ ಮುಖಂಡ ಚಂದ್ರಶೇಖರ್ ಹಾಗೂ ಇತರರು ಇದ್ದರು.

## ಮಿನಿ ನ್ಯೂಸ್

### ಕೈವಾರ ತಾತಯ್ಯ ಮಠದಲ್ಲಿ ಹುಣ್ಣಿಮೆ ರಥೋತ್ಸವ

• **ಉದಯವಾಹಿನಿ, ಚಿಂತಾಮಣಿ**

ತಾಲ್ಲೂಕಿನ ಕೈವಾರದಲ್ಲಿ ಸದ್ಗುರು ಯೋಗಿನಾರೇಯಣ ಮಠದಲ್ಲಿ ಶ್ರಾವಣ ಮಾಸದ ಹುಣ್ಣಿಮೆ ಪ್ರಯುಕ್ತ ರಥೋತ್ಸವ ನಡೆಯಿತು. ಗರ್ಭಗುಡಿಯಲ್ಲಿರುವ ಸದ್ಗುರು ಯೋಗಿ ನಾರೇಯಣ ತಾತಯ್ಯನವರ ಮೂಲ ಬೃಂದಾವನವನ್ನು ವಿವಿಧ ಬಗೆಯ ಹೂವುಗಳಿಂದ ಅಲಂಕರಿಸಲಾಗಿತ್ತು.

ಹುಣ್ಣಿಮೆ ಪೂಜೆಗಾಗಿ ಪೀಠ ಅಲಂಕರಿಸಿ ಶ್ರೀದೇವಿ ಭೂದೇವಿ ಸಮೇತ ಅಮರನಾರೇಯಣ ಹಾಗೂ ತಾತಯ್ಯನವರ ಉತ್ಸವ ಮೂರ್ತಿಗಳನ್ನು ಕೂರಿಸಲಾಗಿತ್ತು. ಉತ್ಸವ ಮೂರ್ತಿಗಳಿಗೆ ಪಂಚಾಮೃತ ಮತ್ತು ಮಂಗಳ ದ್ರವ್ಯಗಳಿಂದ ಅಭಿಷೇಕ ನೆರವೇರಿಸಲಾಯಿತು. ಶಾಸ್ತ್ರೋಕ್ತವಾಗಿ ಅಷ್ಟಾವಧಾನ ಸೇವೆ ಸಮರ್ಪಿಸಿ ಮಹಾಮಂಗಳಾರತಿ ಬೆಳಗಲಾಯಿತು. ತಾತಯ್ಯ ಅವರ ಉತ್ಸವ ಮೂರ್ತಿಯನ್ನು ಮಂಗಳ ವಾದ್ಯಗಳೊಂದಿಗೆ ಕರೆತಂದು ಅಲಂಕೃತ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. 'ಗೋವಿಂದ' ನಾಮಸ್ಮರಣೆಯೊಂದಿಗೆ ದೇವಾಲಯದ ಸುತ್ತಲೂ ರಥೋತ್ಸವ ನಡೆಯಿತು. ನೂರಾರು ಜನ ಭಕ್ತರು ರಥದೊಂದಿಗೆ ಸುತ್ತು ಹಾಕಿದರು.ಮಠದಲ್ಲಿ ಪ್ರಾತಃಕಾಲ ಘಂಟನಾದ, ಸುಪ್ರಭಾತದೊಂದಿಗೆ ಗೋಪೂಜೆ ಮಾಡಲಾಯಿತು. ತಾತಯ್ಯನವರು ಜೀವ ಸಮಾಧಿಯಾದ ಬೃಂದಾವನಕ್ಕೆ ತುಳಸಿ ಹಾರ ಹಾಗೂ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು. ಸಂಜೆ ನಾದಸುಧಾರಸ ಸಂಕೀರ್ತನ ವೇದಿಕೆಯಲ್ಲಿ ಸಂಗೀತ ಕಾರ್ಯಕ್ರಮ ನಡೆಯಿತು.

### ಒಳಮೀಸಲಾತಿ ವಿರೋಧಿಸಿಲ್ಲ: ಗೃಹ ಸಚಿವ ಜಿ. ಪರಮೇಶ್ವರ

• **ಉದಯವಾಹಿನಿ, ತುಮಕೂರು**

ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ಕಲ್ಪಿಸಲು ಯಾವುದೇ ರೀತಿ ವಿರೋಧ ವ್ಯಕ್ತಪಡಿಸಿಲ್ಲ' ಎಂದು ಗೃಹ ಸಚಿವ ಜಿ.ಪರಮೇಶ್ವರ ಸ್ಪಷ್ಟಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಒಳ ಮೀಸಲಾತಿ ಕುರಿತು ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ ದಾಸ್ ಆಯೋಗದ ವರದಿಯನ್ನು ವಿರೋಧಿಸಿಲ್ಲ. ಸಚಿವ ಸಂಪುಟ ಸಭೆಯಲ್ಲೂ ವಿರೋಧ ವ್ಯಕ್ತಪಡಿಸಿಲ್ಲ ಎಂದರು. ವಿಧಾನಸಭೆ ಚುನಾವಣೆ ಸಮಯದಲ್ಲಿ ಪಕ್ಷ ನೀಡಿದ್ದ ಪ್ರಣಾಳಿಕೆಯಲ್ಲಿ ಒಳ ಮೀಸಲಾತಿ ಕಲ್ಪಿಸುವ ಭರವಸೆ ನೀಡಲಾಗಿದೆ. ನಾನೇ ಪಕ್ಷದ ಪ್ರಣಾಳಿಕೆ ಸಿದ್ಧಪಡಿಸಿ. ಈ ವಿಚಾರವನ್ನು ಸೇರಿಸಿದ್ದೆ. ಈಗ ಏಕೆ ವಿರೋಧ ವ್ಯಕ್ತಪಡಿಸಲಿ' ಎಂದು ಪ್ರಶ್ನಿಸಿದರು. ಆ.16ರಂದು ನಡೆಯುವ ಸಚಿವ ಸಂಪುಟದ ವಿಶೇಷ ಸಭೆಯಲ್ಲಿ ವರದಿ ಬಗ್ಗೆ ಚರ್ಚಿಸಿ, ಒಳಮೀಸಲಾತಿ ಕಲ್ಪಿಸುವ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

### ಹೊಳೆಯಾದ ಹೆದ್ದಾರಿ, ರೈಲು ನಿಲ್ದಾಣಕ್ಕೆ ನುಗ್ಗಿದ ನೀರು

• **ಉದಯವಾಹಿನಿ, ಚನ್ನಪಟ್ಟಣ**

ನಗರದ ಸುತ್ತಮುತ್ತ ಸಂಜೆ ತಾಸಿಗೂ ಹೆಚ್ಚು ಧಾರಾಕಾರವಾಗಿ ಸುರಿದ ಮಳೆಯಿಂದಾಗಿ ಬೆಂಗಳೂರು ಮೈಸೂರು ಹೆದ್ದಾರಿ ಸೇರಿದಂತೆ ನಗರದ ಬಹುತೇಕ ರಸ್ತೆಗಳು ಹೊಳೆಯಂತಾಗಿದ್ದವು. ಸಂಜೆ 4ಕ್ಕೆ ಆರಂಭವಾದ ಮಳೆ ತಾಸಿಗೂ ಹೆಚ್ಚು ಮುಂದುವರೆಯಿತು. ಗುಡುಗು, ಮಿಂಚು, ಗಾಳಿ ಅಭರ್ಟ ಇರಲಿಲ್ಲ. ಈ ವರ್ಷದಲ್ಲಿ ಸುರಿದ ದೊಡ್ಡ ಮಳೆ ಇದಾಗಿದೆ. ರೈಲು ನಿಲ್ದಾಣದ ಬಳಿಯ ಚರಂಡಿಗಳ ನೀರು ಉಕ್ಕಿ ರೈಲ್ವೆ ಸ್ಟೇಷನ್ ಒಳಗೆ ನುಗ್ಗಿತು. ಹಳಿಗಳ ಮೇಲೆ ನೀರು ಸಂಗ್ರಹವಾಗಿ ಕೆರೆಯಂತಾಯಿತು. ಇದರಿಂದ ರೈಲುಗಳು ನಿಧಾನವಾಗಿ ಚಲಿಸಿದವು. ಗಾಂಧಿ ಭವನ. ಪಕ್ಕದ ಪೆಟ್ರೋಲ್ ಬಂಕ್, ರೇಷ್ಮೆ ಮಾರುಕಟ್ಟೆ, ತಾಲ್ಲೂಕು ಪಂಚಾಯತಿ ಹಾಗೂ ತಾಲ್ಲೂಕು ಕಚೇರಿ ಅವರಣಕ್ಕೂ ನುಗ್ಗಿತು. ಅಂಗಡಿ, ಮುಂಗಟ್ಟುಗಳಿಗೆ ನೀರು ನುಗ್ಗಿ, ಅಂಗಡಿಯಲ್ಲಿದ್ದ ವಸ್ತುಗಳು ನೀರಿನಲ್ಲಿ ತೇಲಾಡಿದವು. ಅಂಗಡಿಯಲ್ಲಿದ್ದ ನೀರು ಹೊರ ಹಾಕಲು ವರ್ತಕರು ಹೆಣಗಾಡಿದರು. ಹೆದ್ದಾರಿ ಮತ್ತು ರಸ್ತೆಯಲ್ಲಿ ರಭಸವಾಗಿ ಹರಿಯುತ್ತಿದ್ದ ನೀರಿನಲ್ಲಿ ಬೈಕ್, ಕಾರು, ಬಸ್ ಇತರ ವಾಹನಗಳು ಮುಂದೆ ಚಲಿಸಲು ಸಾಧ್ಯವಾಗದೆ ಮಧ್ಯದಲ್ಲಿಯೇ ಸಾಲುಗಟ್ಟಿ ನಿಂತಿದ್ದವು. ಬೈಕ್, ಕಾರುಗಳು ನೀರಿನಲ್ಲಿ ಮುಳುಗಿದ್ದವು. ನಗರದ ಸಾರ್ವಜನಿಕ ಆಸ್ಪತ್ರೆಯ ಒಳ ರೋಗಿಗ ವಾರ್ಡ್‌ಗಳಿಗೂ ನೀರು ನುಗ್ಗಿ ರೋಗಿಗಳು ಪರದಾಡುವಂತಾಯಿತು. ಶೆಟ್ಟಿಹಳ್ಳಿ ಕೆರೆ ಸ್ವಚ್ಛತೆ ಕಾರ್ಯ ನಡೆಯುತ್ತಿದ್ದು ಕೆರೆಯಲ್ಲಿ ಸಂಗ್ರಹವಾಗಿದ್ದ ಕೊಳಚೆನೀರು ಹೊರ ಬಿಡಲು ಕೆರೆಯ ಏರಿ ಒಡೆಯಲಾಗಿತ್ತು.

# ಜಮೀರ್ ಅಹಮದ್ ಅವರೇ ಉಸ್ತುವಾರಿ: ನಾಗೇಂದ್ರ ಸ್ಪಷ್ಟನೆ

• ಉದಯವಾಹಿನಿ, ಬಳ್ಳಾರಿ




ಸಚಿವ ಜಮೀರ್ ಅಹಮದ್ ಖಾನ್ ಅವರೇ ಬಳ್ಳಾರಿ ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂದು ಬಳ್ಳಾರಿ ಗ್ರಾಮಾಂತರ ಶಾಸಕ ಬಿ. ನಾಗೇಂದ್ರ ಸ್ಪಷ್ಟಪಡಿಸಿದ್ದಾರೆ. ಸಚಿವ ರಹೀಂ ಖಾನ್ ಅವರನ್ನು ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿ ನೇಮಿಸಿರುವ ಕುರಿತು ಸರ್ಕಾರ ಗುರುವಾರ ಆದೇಶ ಹೊರಡಿಸಿತ್ತು. ಆದರೆ, ಈ ವಿಚಾರದಲ್ಲಿ ಹಲವು ಗೊಂದಲ ಮೂಡಿವೆ. ಈ ಹಿನ್ನೆಲೆಯಲ್ಲಿ ಗೊಂದಲಗಳಿಗೆ ಬಿ. ನಾಗೇಂದ್ರ ತೆರೆ ಎಳೆದಿದ್ದಾರೆ.

ಆ.15ರ ಸ್ವಾತಂತ್ರ್ಯೋತ್ಸವ ಧ್ವಜಾರೋಹಣಕ್ಕೆ ಮಾತ್ರವೇ ರಹೀಂ ಖಾನ್ ಅವರನ್ನು ನಿಯೋಜಿಸಲಾಗಿದೆ. ಜಮೀರ್ ಅಹಮದ್ ಅವರು ಎರಡು ಜಿಲ್ಲೆಗಳಿಗೆ ಉಸ್ತುವಾರಿಯಾಗಿದ್ದಾರೆ. ಹೀಗಾಗಿ ಬಳ್ಳಾರಿಯಲ್ಲಿ ಧ್ವಜಾರೋಹಣ ಮಾಡಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ರಹೀಂ ಖಾನ್ ಅವರನ್ನು ನಿಯೋಜಿಸಲಾಗಿದೆಯೇ ಹೊರತು ಉಸ್ತುವಾರಿಯನ್ನು ಬದಲಿಸಿಲ್ಲ ಎಂದು ಹೇಳಿದರು. ಉಸ್ತುವಾರಿ ಬದಲಾವಣೆಗೆ ಸಂಬಂಧಿಸಿದ ಆದೇಶ ಪತ್ರ ನಕಲಿ ಇರಬಹುದು ಎಂದೂ ಅವರು ಹೇಳಿದರು.

ಈ ಮಧ್ಯೆ, ಶುಕ್ರವಾರ ಮತ್ತೊಂದು ಆದೇಶ ಹೊರಡಿಸಿರುವ ಸರ್ಕಾರ, ಬಳ್ಳಾರಿ ಜಿಲ್ಲೆಯಲ್ಲಿ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ನೆರವೇರಿಸಲು ರಹೀಂ ಖಾನ್ ಅವರನ್ನು ನಿಯೋಜಿಸಿರುವುದಾಗಿ ಹೇಳಿದೆ.

**ಗೊಂದಲದ ಗೂಡು:** ಬಳ್ಳಾರಿ ಜಿಲ್ಲಾ ಉಸ್ತುವಾರಿ ಗೊಂದಲಗಳಿಗೆ ಈಗಲೂ ಸರಿಯಾದ ಉತ್ತರ ಸಿಕ್ಕಿಲ್ಲ. ಜನಪ್ರತಿನಿಧಿಗಳಿಂದಲೂ ಸಮರ್ಪಕ ಉತ್ತರ ಬಂದಿಲ್ಲ. ಹಾಸನದ ಉಸ್ತುವಾರಿಯನ್ನು ಸಚಿವ ಕೆ.ಎನ್ ರಾಜಣ್ಣ ನಿರಾಕರಿಸಿದ್ದು, ಅವರು ಬಳ್ಳಾರಿ ಜಿಲ್ಲೆ ಉಸ್ತುವಾರಿ ಬಯಸಿದ್ದರು ಎಂದು ಹೇಳಲಾಗಿದೆ. ರಾಜಣ್ಣ ವಾಲ್ಮೀಕಿ ಸಮುದಾಯದ ನಾಯಕರಾಗಿದ್ದು, ಅವರನ್ನು ಬಳ್ಳಾರಿಗೆ ನಿಯೋಜಿಸಿದರೆ ರಾಜಕೀಯ ವಿರೋಧಗಳು ವ್ಯಕ್ತವಾಗಬಹುದು ಎಂಬ ಕಾರಣಕ್ಕೆ ನಿರಾಕರಿಸಲಾಗಿದೆ. ಅವರಿಂದ ತೆರವಾಗಿರುವ ಹಾಸನದ ಉಸ್ತುವಾರಿ ಜಾಗಕ್ಕೆ ಸಚಿವ ಕೃಷ್ಣಬೈರೇಗೌಡ ಅವರನ್ನು ಸರ್ಕಾರ ನಿಯೋಜಿಸಿ, ಅದರ ಜತೆಗೆ, ಬಳ್ಳಾರಿ ಉಸ್ತುವಾರಿಯನ್ನು ರಹೀಂ ಖಾನ್ ಅವರಿಗೆ ನೀಡಿ ಸರ್ಕಾರ ಗುರುವಾರ ಆದೇಶ ಹೊರಡಿಸಿತ್ತು ಎನ್ನಲಾಗಿದೆ. ಆದರೆ, ಈ ಮಧ್ಯೆ ನಡೆದ ಕೆಲ ಬೆಳವಣಿಗೆಗಳಿಂದ ಈ ಆದೇಶ ಮೂಲೆಗೆ ಸೇರಿದೆ ಎಂದು ಗೊತ್ತಾಗಿದೆ.

## ಮಂತ್ರಾಲಯದಲ್ಲಿ ಸಂಭ್ರಮದ ರಾಯರ ಪೂರ್ವಾರಾಧನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಯಚೂರು

ರಾಘವೇಂದ್ರ ಸ್ವಾಮಿಗಳ 354ನೇ ಆರಾಧನೆ ನಿಮಿತ್ತ ಮಂತ್ರಾಲಯದಲ್ಲಿ ಭಾನುವಾರ ಸುಬುಧೇಂದ್ರ ತೀರ್ಥ ಶ್ರೀಗಳ ನೇತೃತ್ವದಲ್ಲಿ ಪೂರ್ವಾರಾಧನೆ ವಿಜೃಂಭಣೆಯಿಂದ ಜರುಗಿತು. ಪೂರ್ವಾರಾಧನೆ ಪ್ರಯುಕ್ತ ಶ್ರೀರಂಗಂ ದೇವಸ್ಥಾನದ ಅಧಿಕಾರಿಗಳು, ಪುರೋಹಿತರು ಪವಿತ್ರ ಶೇಷವಸ್ತ್ರ ತಂದರು. ಕಲಾ ತಂಡಗಳ ವಾದ್ಯಗಳೊಂದಿಗೆ ಅವರಿಗೆ ಸಾಂಪ್ರದಾಯಿಕ ಸ್ವಾಗತ ನೀಡಲಾಯಿತು. ಸುಬುಧೇಂದ್ರ ತೀರ್ಥ ಸ್ವಾಮೀಜಿ ಶೇಷವಸ್ತ್ರವನ್ನು ರಾಯರಿಗೆ ಅರ್ಪಿಸಿದ್ದು, ಶ್ರೀರಂಗಂ ಅಧಿಕಾರಿಗಳಿಗೆ ಸನ್ಮಾನಿಸಿದರು. ನಂತರ ಭಕ್ತರಿಗೆ ಅನುಗ್ರಹ ಸಂದೇಶ ನೀಡಿದರು. ಬೆಳಗಿನ ಜಾವ ಪಂಚಾಮೃತ ಅಭಿಷೇಕ, ಉತ್ಸವ ರಾಯರ ಪಾದಪೂಜೆ, ರಜತ ಸಿಂಹವಾಹನೋತ್ಸವ ಇನ್ನಿತರ ಧಾರ್ಮಿಕ ಕಾರ್ಯಗಳು ವಿಧಿವತ್ತಾಗಿ ನಡೆದವು. ರಾಯರು ರಚಿಸಿರುವ ಪರಿಮಳ ಗ್ರಂಥವನ್ನು ಪಲ್ಲಕ್ಕಿಯಲ್ಲಿ ಇರಿಸಿ ಮಠದ ಪ್ರಾಂಗಣದಲ್ಲಿ ಸಕಲ ಭಕ್ತರೊಂದಿಗೆ ಮೆರವಣಿಗೆ ಮಾಡಲಾಯಿತು. ಸುಬುಧೇಂದ್ರ ತೀರ್ಥರು ಇದೇ ಸಂದರ್ಭದಲ್ಲಿ ರಾಯರ ಚಿನ್ನದ ಪಾದುಕೆಗಳಿಗೆ ಪೂಜೆ ಸಲ್ಲಿಸಿದರು. ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವದಲ್ಲಿ ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ಹಾಗೂ ಮಹಾರಾಷ್ಟ್ರದಿಂದ ಆಗಮಿಸಿರುವ ಭಕ್ತರು ಪಾಲ್ಗೊಂಡಿದ್ದರು.

### ತಂದೆ ತಾಯಿಯ ಸೇವೆಯ ಮಹತ್ವ ಸಾರುವ ಪಾಂಡುರಂಗ ವಿಠ್ಠಲನ ಚರಿತ್ರೆ: ಜಗನ್ನಾಥ ಶೇರಿಕಾರ

## ಬಸವರಾಜ ಐನೋಳ್ಳಿ, ಜಗನ್ನಾಥ ಶೇರಿಕಾರ ಅವರಿಗೆ ಸನ್ಮಾನ

• ಉದಯವಾಹಿನಿ, ಚಿಂಚೋಳಿ



ಉದಯವಾಹಿನಿ ಚಿತ್ರ

ತಂದೆ ತಾಯಿ ಎಂದರೆ ಭಾರ ಎನ್ನುವ ಇಂದಿನ ದಿನಗಳಲ್ಲಿ ಸಮಾಜವನ್ನು ಬಾಧಿಸುತ್ತಿರುವ ಸಂಸ್ಕಾರ ಕೊರತೆಯ ಮಧ್ಯೆ ಪಾಂಡುರಂಗ ವಿಠ್ಠಲನ ಚರಿತ್ರೆ, ತಂದೆ ತಾಯಿಯ ಸೇವೆಯ ಮಹತ್ವ ಸಾರುತ್ತದೆ ಎಂದು ಪತ್ರಕರ್ತ ಜಗನ್ನಾಥ ಶೇರಿಕಾರ ತಿಳಿಸಿದರು. ತಾಲ್ಲೂಕಿನ ಸಾಲೇಬೀರನಹಳ್ಳಿಯ ಸಣ್ಣ ನೀರಾವರಿ ಕೆರೆಯ ಪಕ್ಕದಲ್ಲಿ ನೂತನವಾಗಿ ನಿರ್ಮಾಣವಾದ ಪಾಂಡುರಂಗ ವಿಠ್ಠಲನ ಮಂದಿರದ ಆವರಣದಲ್ಲಿ ನಡೆದ ಶ್ರಾವಣ ಮಾಸದ ಏಕಾದಶಿ ಕಾರ್ಯಕ್ರಮದಲ್ಲಿ ದೇವಾಲಯದ ಸದ್ಭಕ್ತ ಮಂಡಳಿ ಹಾಗೂ ವೀರಮಾರುತಿ ನಾಟ್ಯ ಸಂಘ, ಸುಧೀಕರ ಕಲಾ ಬಳಗದ ವತಿಯಿಂದ ಸಾಹಿತಿ ಬಸವರಾಜ ಐನೋಳ್ಳಿ, ಪತ್ರಕರ್ತ ಜಗನ್ನಾಥ ಶೇರಿಕಾರ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ತಂದೆತಾಯಿಯನ್ನು ಅತ್ಯಂತ ನಿಕೃಷ್ಟವಾಗಿ ಕಾಣುತ್ತಿದ್ದ ಪುಂಡಲೀಕನಿಗೆ ಕಾಶಿ ಯಾತ್ರೆಯ ದಾರಿಯಲ್ಲಿ ಮನ ಪರಿವರ್ತನೆಯಾಗಿ ತಂದೆ ತಾಯಿಯ ಸೇವೆ ಮಾಡುತ್ತಿದ್ದಾಗ ಸಾಕ್ಷಾತ್ ವಿಷ್ಣು ದೇವನೇ ಬಂದರೂ ತಂದೆತಾಯಿಯ ಸೇವೆಯಲ್ಲಿಯೇ ತಲ್ಲೀನನಾಗಿರುವುದು ಆಗ ವಿಷ್ಣುದೇವ ಬಂದಿದ್ದಾನೆ ಎಂದರು. ಕಿಂಚಿತ್ತು ತಲೆ ಕೆಡಿಸಿಕೊಳ್ಳದೇ ಹೆತ್ತವರ ಸೇವೆ ಮಾಡುತ್ತಿರುವುದರ ಫಲವಾಗಿ ಪುಂಡಲೀಕನೇ ಪಾಂಡರಂಗ ವಿಠಲನಾದ ಎಂಬ ಕತೆ ಇಂದಿನ ಸಮಾಜಕ್ಕೆ ಪೂರಕವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಪಾಂಡುರಂಗ ವಿಠಲ ಮಂದಿರದ ಸದ್ಭಕ್ತ ಮಂಡಳಿಯ ಮುಖಂಡರಾದ ಪ್ರಭುಲಿಂಗ ಲೇವಡಿ, ಏಕಾದಶಿ ದಾಸೋಹಿಗಳಾದ ಸಂಗಮನಾಥರೆಡ್ಡಿ ಶೇರಿಕಾರ, ಸುಧೀರ ಕಲಾ ಬಳಗದ ಚಂದ್ರಶೇಖರ ಲಕಶೆಟ್ಟಿ, ಶ್ರೀಶೈಲ ಮಲ್ಲಿಕಾರ್ಜುನ ದೇವಾಲಯ ಪೂಜಾರಿ ಪ್ರಭು ಕಂಬಾರ, ಗ್ರಾ.ಪಂ.ಸದಸ್ಯ ಗುರು ಪಾಟೀಲ, ಗ್ರಾ.ಪಂ. ಮಾಜಿ ಅಧ್ಯಕ್ಷ ತುಕಾರಾಮ ಬಲ್ಲೆಮ್ ಮುಖಂಡರಾದ ಚನ್ನಪ್ಪ ಪಾಟೀಲ, ಮಹಿಬೂಬ ಪಟೇಲ್, ಹಣಮಂತರಾವ ಪಾಟೀಲ, ಶ್ರೀನಿವಾಸರೆಡ್ಡಿ ಶೇರಿಕಾರ, ಶಂಕರ ಶಿವಪುರಿ, ಮಧುಕರರೆಡ್ಡಿ, ಗೋಪಾಲರೆಡ್ಡಿ, ಸಿದ್ದು ಧೇಶಪಾಂಡೆ, ಬಕ್ಕಪ್ಪ ಪವಾಡಶೆಟ್ಟಿ, ಜಗನ್ನಾಥರೆಡ್ಡಿ ತುಮಕುಂಟಾ, ಜಗಪ್ಪ ಮಾಡಗಿ, ಚಂದ್ರಶೇಖರ ಸೋಮಾ, ವೆಂಕಟರೆಡ್ಡಿ, ಕಂಟೆಪ್ಪ ತುಮಕುಂಟಾ, ಮೊದಲಾದವರು ಇದ್ದರು.

ಚಂದ್ರಶೇಖರ ಲಕಶೆಟ್ಟಿ ಸ್ವಾಗತಿಸಿದರು, ಜಗನ್ನಾಥರೆಡ್ಡಿ ಚಟ್ನಳ್ಳಿ ನಿರೂಪಿಸಿದರು, ಜಗಪ್ಪ ಮಾಡಗಿ ವಂದಿಸಿದರು.

**ಭಕ್ತರ ಕರ್ತೃತ್ವ ಶಕ್ತಿಯೇ ಕಾರಣ**

**ಸಾಮಾನ್ಯವಾಗಿ ಭಜನೆಯಲ್ಲಿ ಎರಡು ಪ್ರಕಾರಗಳಿದ್ದು ಒಂದು ಹರಿ ಭಜನೆ ಇನ್ನೊಂದು ಶಿವ ಭಜನೆ, ಸಾಲೇಬೀರನಹಳ್ಳಿಯ ಪಾಂಡುರಂಗನ ಸನ್ನಿಧಿಯಲ್ಲಿ ಭಕ್ತರು ನಡೆಸುತ್ತಿರುವುದು ಶಿವ ಭಜನೆಯಾಗಿದೆ, ಉಡುಪಿಯ ಕೃಷ್ಣನನ್ನೇ ತನ್ನತ್ತ ತಿರುಗುವಂತೆ ಮಾಡಿದ ಕನಕದಾಸನ ಹಾಗೆಯೇ ಪಾಂಡುರಂಗನನ್ನು ಶಿವ ಭಜನೆಯ ಮೂಲಕ ಪ್ರಸನ್ನಗೊಳಿಸಲು ಸಾಧ್ಯ, ಎಂದರು.**

> **ಮಥುರಾದ ಕೃಷ್ಣ ಉಡುಪಿಯಲ್ಲಿ ನೆಲೆಗೊಂಡಂತೆ ಪಂಡರಾಪುರದ ಪಾಂಡುರಂಗ ವಿಠ್ಠಲ ಸಾಲೇ ಬೀರನಹಳ್ಳಿಯಲ್ಲಿ ನೆಲೆಗೊಂಡಿದ್ದಾರೆ, ಇದಕ್ಕೆ ಭಕ್ತರ ಕರ್ತೃತ್ವ ಶಕ್ತಿಯೇ ಕಾರಣ.**
> **– ಬಸವರಾಜ ಐನೋಳ್ಳಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ**

# ಮಿನಿ ನ್ಯೂಸ್

## ಸೋನಿಯಾ ಗಾಂಧಿ ಬ್ರಿಗೇಡ್ ಸಂಘಟನೆ ಎಸ್ಸಿ, ಎಸ್ಟಿ ಘಟಕದ ರಾಜ್ಯಾಧ್ಯಕ್ಷರಾಗಿ ಸುನೀಲ ನೇಮಕ

• ಉದಯವಾಹಿನಿ, ಚಿಂಚೋಳಿ



ತಾಲ್ಲೂಕಿನ ಸುನೀಲ್ ಸಿಂಗ್ ಚಿನ್ನ ರಾಥೋಡ್ ಇವರನ್ನು ಆಲ್ ಇಂಡಿಯಾ ಸೋನಿಯಾಗಾಂಧಿ ಬ್ರಿಗೇಡ್ ಸಂಘಟನೆಯ ಎಸ್‌ಸಿ, ಎಸ್‌ಟಿ ಘಟಕದ ರಾಜ್ಯಾಧ್ಯಕ್ಷರಾಗಿ ನೇಮಿಸಿ ರಾಷ್ಟ್ರೀಯ ಅಧ್ಯಕ್ಷರಾದ ನೀಶಾ ಮಂಗಲ್ ಚೌರಾಸೀಯಾ ಆದೇಶ ಹೊರಡಿಸಿದ್ದಾರೆ. ನೇಮಕಾತಿ ಪತ್ರ ನೀಡಿದ ಅವರು, ಆಲ್ ಇಂಡಿಯಾ ಸೋನಿಯಾ ಗಾಂಧಿ ಬ್ರಿಗೇಡ್ ಸಂಘಟನೆ ಎಸ್‌ಸಿ, ಎಸ್‌ಟಿ ಘಟಕದ ರಾಜ್ಯಾಧ್ಯಕ್ಷರನ್ನಾಗಿ ಚಿಂಚೋಳಿ ತಾಲ್ಲೂಕಿನ ಮುನ್ನು ನಾಯಕ ತಾಂಡಾದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಸುನೀಲ ಚಿನ್ನಾ ರಾಠೋಡ್ ಅವರನ್ನು ರಾಷ್ಟ್ರೀಯ ಕಾನೂನು ಘಟಕ ಅಧ್ಯಕ್ಷರಾದ ಸಿದ್ದಣ್ಣಗೌಡ ಪಾಟೀಲ ಮತ್ತು ರಾಷ್ಟ್ರೀಯ ಉಪಾಧ್ಯಕ್ಷರಾದ ಇಮಾಮ್ ಸಾಬರವರ ನಿರ್ದೇಶನದ ಮೇರೆಗೆ ರಾಷ್ಟ್ರೀಯ ಅಧ್ಯಕ್ಷರಾದ ನೀಶಾ ಮಂಗಲ ಚೌರಾಸಿಯಾರವರು ನೇಮಿಸಿ ಆದೇಶ ಮಾಡಲಾಗಿದ್ದು ಬರುವ ಮುಂದಿನ ದಿನಗಳಲ್ಲಿ ಪಕ್ಷದ ಸಂಘಟನೆ ಬಲಪಡಿಸಬೇಕು ಎಂದು ತಿಳಿಸಿದ್ದಾರೆ.

## ಅಪಘಾತ; ತಂದೆ-ಮಗ ಸ್ಥಳದಲ್ಲೇ ಸಾವು

• ಉದಯವಾಹಿನಿ, ಅಫಜಲಪುರ

ತಾಲ್ಲೂಕಿನ ಗೊಬ್ಬರ (ಕೆ) ಹತ್ತಿರ ರಾಜ್ಯ ಹೆದ್ದಾರಿ-150ರಲ್ಲಿ ಭಾನುವಾರ ಮಧ್ಯಾಹ್ನ 3 ಗಂಟೆಗೆ ಕೆಕೆಆರ್‌ಟಿಸಿ ಬಸ್ ಹಾಗೂ ಕಾರಿನ ನಡುವೆ ಸಂಭವಿಸಿದ ಅಪಘಾತದಲ್ಲಿ ತಂದೆ-ಮಗ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಾಗಲಕೋಟೆಯ ಬೀಳಗಿ ತಾಲ್ಲೂಕಿನ ಸೋಮಶೇಖರ ಭಾಸಗಿ (65) ಹಾಗೂ ಪ್ರಕಾಶ ಭಾಸಗಿ (28) ಮೃತರು. ದುರ್ಘಟನೆಯಲ್ಲಿ ರೂಪಾದೇವಿ ಸೋಮಶೇಖರ ಭಾಸಗಿ(55) ಗಂಭೀರವಾಗಿ ಗಾಯಗೊಂಡಿದ್ದು, ಕಲಬುರಗಿಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಾಗಲಕೋಟದಿಂದ ಕಲಬುರಗಿ ನಗರದ ರಾಣೇಶ ಪೀರ್ ದರ್ಗಾದಲ್ಲಿ ದೇವರ ದರ್ಶನ ಪಡೆದು ಮರಳಿ ಬಾಗಲಕೋಟೆಯತ್ತ ಪ್ರಯಾಣಿಸುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ವೃತ್ತಿಯಿಂದ ಎಂಜಿನಿಯರ್ ಆಗಿರುವ ಪ್ರಕಾಶ ಕಾರು ಓಡಿಸುತ್ತಿದ್ದರು ಎಂದು ಮೂಲಗಳು ತಿಳಿಸಿವೆ. ಸ್ಥಳಕ್ಕೆ ಹೆಚ್ಚುವರಿ ಎಸ್ಪಿ ಮಹೇಶ ಮೇಘಣ್ಣನವರ, ಆಳಂದ ಡಿವೈಎಸ್ಪಿ ತಮ್ಮಾರಾಯ ಪಾಟೀಲ, ಸಿಪಿಐ ಚನ್ನಯ್ಯ ಹಿರೇಮಠ, ಪಿಎಸ್‌ಐ ಸಂಗೀತಾ ಶಿಂದೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಈ ಕುರಿತು ದೇವಲಗಾಣಗಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮುಸ್ಲಿಂ ಯುವತಿಯರನ್ನು ಮದುವೆಯಾಗುವ ಹಿಂದೂ ಯುವಕರಿಗೆ 5 ಲಕ್ಷ: ಯತ್ನಾಳ

• ಉದಯವಾಹಿನಿ, ಕೊಪ್ಪಳ

ರಾಜ್ಯದಲ್ಲಿ ಮುಸ್ಲಿಮರ ಸರ್ಕಾರ ಅಧಿಕಾರದಲ್ಲಿದ್ದು, ಮುಸ್ಲಿಂ ಯುವತಿಯರನ್ನು ಮದುವೆಯಾಗುವ ಹಿಂದೂ ಯುವಕರಿಗೆ 5 ಲಕ್ಷ ನೀಡುವೆ. ಇದಕ್ಕಾಗಿ ಅಭಿಯಾನ ಆರಂಭಿಸಿ ಹಿಂದೂಗಳನ್ನು ಕೊಲೆ ಮಾಡುವ ಮನಸ್ಥಿತಿಯ ಮುಸ್ಲಿಮರಿಗೆ ತಕ್ಕ ಉತ್ತರ ನೀಡುವೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ನಗರದ ಕುರುಬರ ಓಣಿಯಲ್ಲಿ ಆ. 3ರಂದು ಮುಸ್ಲಿಂ ಯುವಕನಿಂದ ಕೊಲೆಯಾದ ಗವಿಸಿದ್ದಪ್ಪ ನಾಯಕ ಅವರ ಮನೆಯವರಿಗೆ ಸಾಂತ್ವಾನ ಹೇಳಿದ ಬಳಿಕ ಮಾಧ್ಯಮದವರ ಜೊತೆ ಮಾತನಾಡಿ 'ಮಸೀದಿ ಮುಂದೆಯೇ ಗವಿಸಿದ್ದಪ್ಪ ನಾಯಕನ ಕೊಲೆಯಾಗಿದ್ದರೂ ತಡೆಯುವ ಕೆಲಸವನ್ನು ಯಾರೂ ಮಾಡಿಲ್ಲ. ಲವ್ ಜಿಹಾದ್ ಮಾಡಿದಾಗ ಸರ್ಕಾರ ಅಲ್ಪಸಂಖ್ಯಾತರಿಗೆ ರಕ್ಷಣೆ ಕೊಡುತ್ತದೆ. ಮುಸ್ಲಿಮರಿಗೆ ಮಾತ್ರ ಈಗಿನ ಸರ್ಕಾರ ನೆರವಾಗುತ್ತಿದೆ. ಈ ಕುರಿತು ಅಧಿವೇಶನದಲ್ಲಿ ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳುತ್ತೇನೆ ಎಂದರು. ರಾಜ್ಯದಲ್ಲಿ ಮುಸ್ಲಿಂ ವ್ಯಕ್ತಿ ಕೊಲೆಯಾಗಿದ್ದರೆ ರಾಜ್ಯ ಸರ್ಕಾರ ಯಾವ ಮಾನದಂಡ ಆಧರಿಸಿ ಪರಿಹಾರ, ನೌಕರಿ ಕೊಡುತ್ತಿತ್ತು; ಅದೇ ರೀತಿ ಹಿಂದೂ ವ್ಯಕ್ತಿ ಕೂಡ ಹತ್ಯೆಯಾದಾಗ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು. ಇದೇ ವೇಳೆ ಅವರು ಗೃಹ ಸಚಿವರನ್ನು ತರಾಟೆಗೆ ತೆಗೆದುಕೊಂಡರು.

## ಸಿಡಿಲು ಬಡಿದು ಮಹಿಳೆ ಸಾವು

• ಉದಯವಾಹಿನಿ, ರಾಯಚೂರು



ಜಿಲ್ಲೆಯ ವಿವಿಧೆಡೆ ಭಾನುವಾರ ಗುಡುಗು ಸಹಿತ ಮಳೆಯಾಗಿದೆ. ರಾಯಚೂರು ತಾಲ್ಲೂಕಿನ ಯರಗೇರಾದ ಹೊಲದಲ್ಲಿ ಕೆಲಸ ಮಾಡುತ್ತಿದ್ದ ಭವಾನಿ ನಾಗರಾಜ ನಾಯಕ (26) ಅವರಿಗೆ ಸಿಡಿಲು ಬಡಿದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಲಿಂಗಸುಗೂರು ತಾಲ್ಲೂಕಿನ ಟಣಮನಕಲ್ ಸಮೀಪದ ಹಿರೇಹಳ್ಳ ಉಕ್ಕಿ ಹರಿದು, ನೆಲಮಟ್ಟದ ಸೇತುವೆ ಕಿತ್ತುಕೊಂಡು ಹೋಗಿ ಸಂಚಾರಕ್ಕೆ ಸಮಸ್ಯೆಯಾಗಿದೆ. ದೇವದುರ್ಗ ತಾಲ್ಲೂಕಿನ ಗಟ್ಟೂರು ಸಮೀಪದ ಗಣೇಕಲ್ ಹಳ್ಳ ತುಂಬಿ ಹರಿದು ಸಂಚಾರಕ್ಕೆ ತೊಂದರೆ ಆಯಿತು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರಿನ ಆವರಣದಲ್ಲಿ 3.2 ಮಿ.ಮೀ ಮಳೆ ದಾಖಲಾಗಿದೆ. ಸೋಮವಾರ ಹುಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ಈಜುಕೊಳದಲ್ಲಿ ಮುಳುಗಿ ಈಜುಪಟು ಸಾವು


• ಉದಯವಾಹಿನಿ, ಮಂಗಳೂರು

ನೀರಿನೊಳಗೆ ಉಸಿರು ಬಿಗಿ ಹಿಡಿದು ಸೋಮರ್‌ಸಾಲ್ಟ್ ಮತ್ತು ಆಸನಗಳನ್ನು ಪ್ರದರ್ಶಿಸಿ ವರ್ಲ್ಡ್ ವೈಡ್ ಬುಕ್ ಆಫ್ ರೆಕಾರ್ಡ್‌ನಲ್ಲಿ ಸ್ಥಾನ ಪಡೆದಿದ್ದ ಈಜುಪಟು ಕೆ. ಚಂದ್ರಶೇಖರ ರೈ ಸೂರಿಕುಮೇರು (52) ಈಜುಕೊಳದಲ್ಲಿ ಮುಳುಗಿ ಭಾನುವಾರ ಬೆಳಿಗ್ಗೆ ಮೃತಪಟ್ಟಿದ್ದಾರೆ.

ಬಂಟ್ವಾಳ ತಾಲ್ಲೂಕಿನ ಕಲ್ಲಡ್ಕ ಸಮೀಪದ ಸೂರಿಕುಮೇರು ಬರಿಬರದ ನಿವಾಸಿಯಾದ ಅವರು ಮಂಗಳೂರಿನ ಕುದ್ರೋಳಿಯಲ್ಲಿ ವಾಸವಾಗಿದ್ದರು. ಅವರಿಗೆ ಪತ್ನಿ ಮತ್ತು ಪುತ್ರಿ ಇದ್ದಾರೆ. ಉಡುಪಿ ಈಜುಕೊಳದಲ್ಲಿ ಗುತ್ತಿಗೆ ಆಧಾರದಲ್ಲಿ ಲೈಫ್ ಗಾರ್ಡ್ ಆಗಿದ್ದ ಅವರು ಮೂರು ವರ್ಷದ ಹಿಂದೆ ಮಂಗಳೂರಿಗೆ ಬಂದು ಮಹಾನಗರಪಾಲಿಕೆ ಈಜುಕೊಳದ ನಿರ್ವಹಣೆ ಮಾಡುತ್ತಿದ್ದರು. ಜೀವರಕ್ಷಕರಾಗಿ, ಕೆಲವರಿಗೆ ಈಜು ತರಬೇತುದಾರರಾಗಿಯೂ ಕಾರ್ಯನಿರ್ವಹಿಸುತ್ತಿದ್ದರು. ಭಾನುವಾರ ಈಜುಕೊಳಕ್ಕೆ ಸಾರ್ವಜನಿಕರಿಗೆ ಪ್ರವೇಶವಿಲ್ಲ. ನಿರ್ವಹಣೆಗೆ ಬಂದಿದ್ದ ಚಂದ್ರಶೇಖರ ರೈ ಕೊಳದ ನಿರ್ವಹಣೆಗೆ ತೆರಳಿದ್ದರು ಎಂದು ಪ್ರಭಾರ ವ್ಯವಸ್ಥಾಪಕ ರಮೇಶ್ ಬಿಜೈ ತಿಳಿಸಿದರು.

## ಧರ್ಮಸ್ಥಳ ಪ್ರಕರಣ; ಎಡಪಂಥೀಯರ ಷಡ್ಯಂತ್ರ

• ಉದಯವಾಹಿನಿ, ಹುಬ್ಬಳ್ಳಿ



ಧರ್ಮಸ್ಥಳದ ವಿಷಯದಲ್ಲಿ ಎಡಪಂಥೀಯರ ಷಡ್ಯಂತ್ರವಿದ್ದು, ಸರ್ಕಾರ ತಕ್ಷಣ ಎಚ್ಚೆತ್ತುಕೊಳ್ಳಬೇಕು. ಇಲ್ಲದಿದ್ದರೆ ಪ್ರಜಾಭುತ್ವದ ಅಡಿ ನಾವು ತೀವ್ರವಾಗಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಎಚ್ಚರಿಸಿದರು. ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಹಿಂದೂಗಳ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿದ್ದು, ಕೋಟ್ಯಂತರ ಹಿಂದೂಗಳಭಾವನೆಗೆ ಧಕ್ಕೆ ತರುವ ಹಾಗೆ ಮಾನಸಿಕವಾಗಿ ದಾಳಿ ನಡೆಸಲಾಗುತ್ತಿದೆ. ಇದಕ್ಕಾಗಿ ಎಡಪಂಥೀಯಯರ ಟೂಲ್‌ಕಿಟ್ ಸಿದ್ಧವಾಗಿದೆ. ಈ ಕುರಿತು ಸರ್ಕಾರ ನಡೆದುಕೊಳ್ಳುವ ರೀತಿಯು ಸಹ ಆಕ್ಷೇಪಾರ್ಹವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಧರ್ಮಸ್ಥಳ ಪ್ರಕರಣ ಈಗ ದಿನಕ್ಕೊಂದು ತಿರುವು ಪಡೆಯುತ್ತಿದೆ. ಶವ ಹೂತು ಹಾಕಿದ್ದೇನೆಂದು ಸಾಕ್ಷಿ ದೂರುದಾರ ತೋರಿಸಿದ್ದು 13 ಜಾಗ. ಆದರೆ, ಈಗ 19 ಸ್ಥಳಗಳನ್ನು ಗುರುತು ಮಾಡಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಸಾಕ್ಷಿ ದೂರುದಾರ ರಾತ್ರಿ ಎಲ್ಲಿಯೋ ಹೋಗುತ್ತಾನೆ, ಬೆಳಿಗ್ಗೆ ಬಂದು ಒಂದೊಂದು ಜಾಗ ತೋರಿಸುತ್ತಾನೆ.

ಇದಕ್ಕೆ ಸರ್ಕಾರ ಸಹ ಸೊಪ್ಪು ಹಾಕುತ್ತಿದೆ ಎಂದು ಆರೋಪಿಸಿದರು. ಜನಸಾಮಾನ್ಯರು ಜಾನುವಾರು ಮೇಯಿಸಲು ಅರಣ್ಯ ಪ್ರದೇಶದೊಳಗೆ ಹೋದರೆ ಪ್ರಕಣ ದಾಖಲಿಸುವ ಅರಣ್ಯ ಇಲಾಖೆ, ಅಷ್ಟೊಂದು ದೊಡ್ಡ ಪ್ರಮಾಣದಲ್ಲಿ ಅರಣ್ಯ ಪ್ರದೇಶದಲ್ಲಿ ಮಣ್ಣು ತೆಗೆದು ಉತ್ಖನನ ನಡೆಸಲು ಅನುಮತಿ ಪಡೆಯಲಾಗಿದೆಯೇ? ಈ ಹಿಂದೆ ಶಬರಿಮಲೆ, ತಿರುಪತಿಯಲ್ಲೂ ಹೀಗೆಯೇ ಆರೋಪ ಮಾಡಿ ಹಿಂದೂಗಳ ಭಾವನೆಗೆ ಘಾಸಿ ಮಾಡಲಾಗಿತ್ತು. ಅನ್ಯ ಧರ್ಮದವರ ಧಾರ್ಮಿಕ ಕೇಂದ್ರದಲ್ಲೂ ಶವ ಹೂತಿದ್ದೇವೆ ಎಂದು ಯಾರಾದರೂ ಆರೋಪಿಸಿದರೆ, ಅಲ್ಲಿ ಉತ್ಖನನ ಮಾಡುವ ತಾಕತ್ತು ಸರ್ಕಾರಕ್ಕೆ ಇದೆಯೇ ಎಂದು ಪ್ರಶ್ನಿಸಿದರು. ಮತಕಳವು ಪ್ರಕರಣಕ್ಕೆ ಸಂಬಂಧಿಸಿ ರಾಜ್ಯ ಚುನಾವಣಾ ಆಯೋಗ ದೂರು ನೀಡಿ ಎಂದು ರಾಹುಲ್ ಗಾಂಧಿ ಅವರಿಗೆ ಹೇಳಿದರೂ, ಭದ್ರತೆ ನೆಪವೊಡ್ಡಿ ದೆಹಲಿಗೆ ಹೋದರು. ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲೆಯೇ ಆರೋಪ ಮಾಡುವ ಅಪ್ರಬುದ್ಧ ನಕಲಿ ಗಾಂಧಿ ಮನೆತನದ ವ್ಯಕ್ತಿ ಅವರು ಎಂದು ಟೀಕಿಸಿದರು.

> **ಬೆಂಗಳೂರನ್ನು ದೇಶದ ರಾಜಧಾನಿಯನ್ನಾಗಿ ಘೋಷಿಸಬೇಕು ಎನ್ನುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವ ಜೋಶಿ, ಮುಂಬೈ, ದೆಹಲಿ, ಬೆಂಗಳೂರು, ಚೆನ್ನೈ ನಗರಗಳು ಸೇರಿದಂತೆ ಬಹುತೇಕ ನಗರಗಳು ಆರ್ಥಿಕವಾಗಿ ಸದೃಢವಾಗುತ್ತಿವೆ. ದೇಶದ ಅಭಿವೃದ್ಧಿಗೆ ಮಹತ್ತರ ಕೊಡುಗೆಗಳನ್ನು ನೀಡುತ್ತಿವೆ. ಕೇಂದ್ರ ಸರ್ಕಾರವು ಸಹ ಎಲ್ಲಾ ನಗರ, ರಾಜ್ಯಗಳಿಗೂ ಅನುದಾನವನ್ನು ಸಮರ್ಪಕವಾಗಿ ಹಂಚುತ್ತಿದೆ. ಹೀಗಿದ್ದಾಗ, ಬೆಂಗಳೂರನ್ನು ದೇಶದ ರಾಜಧಾನಿಯನ್ನಾಗಿ ಮಾಡಬೇಕೆನ್ನುವ ಡಿಕೆಶಿ ಹೇಳಿಕೆಗೆ ಹೆಚ್ಚು ಅರ್ಥನೀಡಬೇಕಿಲ್ಲ.**
> **– ಪ್ರಲ್ಹಾದ ಜೋಶಿ, ಕೇಂದ್ರ ಸಚಿವ**

## ನಾಳೆಯಿಂದ ಮೂರು ದಿನ ಅಹೋರಾತ್ರಿ ಧರಣಿ

• ಉದಯವಾಹಿನಿ, ಯಾದಗಿರಿ



ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಎಐಯುಟಿಯುಸಿ ಸಂಯೋಜಿತ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘಟನೆ ವತಿಯಿಂದ ಆ. 12ರಿಂದ 14ರವರೆಗೆ ಮೂರು ದಿನಗಳ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯ ಅಧ್ಯಕ್ಷ ಕೆ. ಸೋಮಶೇಖರ ತಿಳಿಸಿದರು. ಅಂದು ಬೆಳಿಗ್ಗೆ 11ಕ್ಕೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಜಿಲ್ಲೆಯ ಆಶಾ ಕಾರ್ಯಕರ್ತೆಯರು ಮೂರು ದಿನ ಅಹೋರಾತ್ರಿ ಪ್ರತಿಭಟನೆ ಮಾಡುವರು. ಪ್ರತಿಭಟನೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.


ಆಶಾ ಕಾರ್ಯಕರ್ತೆಯರಿಗೆ ಮಾಸಿಕ 15 ಸಾವಿರ ನಿಶ್ಚಿತ ಗೌರವ ಧನ ನೀಡುವಂತೆ ಆಗ್ರಹಿಸಿ ಜನವರಿಯಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗಿತ್ತು. ಈ ವೇಳೆ ಮಾತುಕತೆ ನಡೆಸಿದ್ದ ಸಿಎಂ, ಆರೋಗ್ಯ ಸಚಿವರು ಹಾಗೂ ಅಧಿಕಾರಿಗಳು, ಮಾಸಿಕ 10 ಸಾವಿರ ಗೌರವ ಧನ ನೀಡುವುದಾಗಿ ಘೋಷಿಸಿದ್ದರು. ಆದರೆ, ಈ ಬಗ್ಗೆ ಇದುವರೆಗೂ ಆದೇಶ ಹೊರಡಿಸಿಲ್ಲ ಎಂದರು. ಬಜೆಟ್‌ನಲ್ಲಿ ಘೋಷಿಸಿದಂತೆ ಎಲ್ಲಾ ಅಂಗನವಾಡಿ ಮತ್ತು ಬಿಸಿಯೂಟ ಕಾರ್ಯಕರ್ತೆಯರಿಗೆ 1,000 ಪ್ರೋತ್ಸಾಹ ಧನ ಹೆಚ್ಚಳ ಮಾಡಿದ್ದಾರೆ. ಆದರೆ, ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹ ಧನ ಹೆಚ್ಚಿಸದೆ ಅನ್ಯಾಯ ಮಾಡಿದ್ದಾರೆ.

ಆಶಾ ಕಾರ್ಯಕರ್ತೆಯರಿಗೂ ಕೈಹಿಡಿದಿದ್ದೇವೆ ಎಂದು ಪ್ರಚಾರ ಪಡೆಯುತ್ತಿದ್ದಾರೆ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದ ಪಾಲು ಸೇರಿ ಮಾಸಿಕ 10 ಸಾವಿರ ಗೌರವ ಧನ ನೀಡಬೇಕು. ಆಶಾ ಕಾರ್ಯಕರ್ತೆಯರ ಕೆಲಸದ ವ್ಯಾಪ್ತಿಯನ್ನು ಹೆಚ್ಚಳ ಮಾಡುತ್ತಿರುವ ಪ್ರಕ್ರಿಯೆಯನ್ನು ಕೈಬಿಡಬೇಕು. ಕಾರ್ಯನಿರ್ವಹಣೆ ಮೌಲಮಾಪನದ ವ್ಯವಸ್ಥೆಯು ಅವೈಜ್ಞಾನಿಕವಾಗಿದ್ದು, ಅದನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು. ಆಶಾ ಸುಗಮಕಾರರನ್ನು ಸೂಕ್ತ ವೇತನದೊಂದಿಗೆ ಮುಂದುವರಿಸಬೇಕು.

ಪಶ್ಚಿಮ ಬಂಗಾಳ ಮಾದರಿಯಲ್ಲಿ ಕರ್ನಾಟಕದ ನಿವೃತ್ತ ಆಶಾ ಕಾರ್ಯಕರ್ತೆಯರಿಗೆ 5 ಲಕ್ಷ ಇಡಿಗಂಟು ನೀಡಬೇಕು. ನಗರ ಪ್ರದೇಶದ ಆಶಾ ಕಾರ್ಯಕರ್ತೆಯರಿಗೆ ಹೆಚ್ಚುರಿಯಾಗಿ ಮಾಸಿಕ 2,000 ಗೌರವ ಧನವೂ ಕೊಡಬೇಕು ಎಂದು ಒತ್ತಾಯಿಸಿದರು.

## ರಸ್ತೆ ವಿಸ್ತರಣೆ ಶೀಘ್ರ ಆರಂಭಿಸುವಂತೆ ಸಿಎಂ ಸೂಚನೆ

• ಉದಯವಾಹಿನಿ, ನರಸಿಂಹರಾಜಪುರ



ಉದಯವಾಹಿನಿ ಚಿತ್ರ

ಪಟ್ಟಣದ ವ್ಯಾಪ್ತಿಯಲ್ಲಿ ಪರಿಹಾರ ನೀಡಿ ರಸ್ತೆ ವಿಸ್ತರಣೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 60 ಕೋಟಿ ಅನುದಾನ ಬಿಡುಗಡೆ ಮಾಡಿದ್ದು, ಶೀಘ್ರ ರಸ್ತೆ ಕಾಮಗಾರಿ ಆರಂಭಿಸುವಂತೆ ಸೂಚನೆ ನೀಡಿದ್ದಾರೆ ಎಂದು ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ಶ್ರೀನಿವಾಸ್ ಹೇಳಿದರು. ಪಟ್ಟಣದ ವ್ಯಾಪ್ತಿಯಲ್ಲಿ ರಸ್ತೆ ವಿಸ್ತರಣೆ ಕಾಮಗಾರಿ ಆರಂಭಿಸಲು ಕೈಗೊಳ್ಳಬೇಕಾಗಿರುವ ಪೂರ್ವ ಸಿದ್ಧತೆಯ ಬಗ್ಗೆ ಲೋಕೋಪಯೋಗಿ ಇಲಾಖೆಯ ಎಂಜಿನಿಯರ್ ಅವರೊಂದಿಗೆ ಪ್ರವಾಸಿ ಮಂದಿರದಲ್ಲಿ ಅವರು ಸಮಾಲೋಚನೆ ನಡೆಸಿದರು.

ರಸ್ತೆ ವಿಸ್ತರಣೆಗೆ ಬೇಕಾಗಿರುವ ಭೂಸ್ವಾಧೀನ ಮಾಡಿಕೊಳ್ಳಲು ಎರಡು ರೀತಿಯ ಪ್ರಕ್ರಿಯೆ ಕೈಗೊಳ್ಳಬಹುದು. ಮೊದಲನೇದಾಗಿ ರಸ್ತೆ ವಿಸ್ತರಣೆಯಾಗುವ ಪ್ರದೇಶದಲ್ಲಿರುವ ಖಾತೆ ಹೊಂದಿರುವ ಕಟ್ಟಡದ ಮಾಲೀಕರಿಗೆ ಎಷ್ಟು ಜಾಗ ಸ್ವಾಧೀನ ಪಡಿಸಿಕೊಳ್ಳಲಾಗುತ್ತದೆ ಎಂಬ ಬಗ್ಗೆ ನೋಟಿಸ್ ನೀಡಬಹುದು. ಎರಡನೇದಾಗಿ ರಸ್ತೆ ವಿಸ್ತರಣೆಗೆ ಬೇಕಾಗಿರುವ ಜಾಗ ಬಿಟ್ಟು ಕೊಡುವುದರಿಂದ ಅದಕ್ಕೆ ಸರ್ಕಾರದ ನಿಯಮಾನುಸಾರ ಪರಿಹಾರ ನೀಡುವುದರಿಂದ ಖಾತೆದಾರರು ಸ್ವಯಂ ಪ್ರೇರಿತವಾಗಿ ಜಾಗವನ್ನು ಬಿಟ್ಟುಕೊಡಬಹುದು. ಇದರ ಬಗ್ಗೆ ಚರ್ಚಿಸಲು ಮತ್ತು ಎಲ್ಲರ ವಿಶ್ವಾಸ ಪಡೆಯಲು ಶೀಘ್ರ ಖಾತೆದಾರರ ಸಭೆ ಕರೆಯಲು ಕ್ರಮ ಕೈಗೊಳ್ಳಬೇಕು ಎಂದರು.

ಪ್ರಾಥಮಿಕ ಹಂತದ ತಯಾರಿ ಮಾಡಿಕೊಂಡ ಬಳಿಕ ಮುಂದಿನ ದಿನಗಳಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯದರ್ಶಿ, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಭೆ ಕರೆಯಲಾಗುವುದು. ಹೊನ್ನೆಕೂಡಿಗೆ ಸೇತುವೆ ಕಾಮಗಾರಿ ತ್ವರಿತವಾಗಿ ಸಾಗಿದ್ದು, ಇದು ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ.

ಸೇತುವೆ ಸಂಪರ್ಕ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಸೇತುವೆ, ಪಟ್ಟಣದ ರಸ್ತೆ ಕಾಮಗಾರಿ ಶೀಘ್ರ ಪೂರ್ಣಗೊಳಿಸಿದರೆ ಲೋಕಾರ್ಪಣೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಪಟ್ಟಣಕ್ಕೆ ಬರಲಿದ್ದಾರೆ ಅವರು ತಿಳಿಸಿದರು.

## ವಸತಿನಿಲಯಕ್ಕೆ ರಸ್ತೆ ನಿರ್ಮಿಸಲು ವಿದ್ಯಾರ್ಥಿಗಳ ಒತ್ತಾಯ

• ಉದಯವಾಹಿನಿ, ಹುಮನಾಬಾದ್



ಉದಯವಾಹಿನಿ ಚಿತ್ರ

ಪಟ್ಟಣದ ಹೊರವಲಯದಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಸಂಪರ್ಕ ರಸ್ತೆ ಇಲ್ಲದೆ ವಿದ್ಯಾರ್ಥಿಗಳು ಮತ್ತು ಅಧಿಕಾರಿಗಳು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ವಸತಿ ನಿಲಯದಲ್ಲಿ 32ಕ್ಕು ಹೆಚ್ಚು ವಿದ್ಯಾರ್ಥಿಗಳು ಇದ್ದಾರೆ. ಈ ವಸತಿ ನಿಲಯದ ಎದುರುಗಡೆ ದೊಡ್ಡ ಹಳ್ಳ ಹರಿಯುತ್ತಿದ್ದು, ಈ ಹಳ್ಳದಲ್ಲಿ ಪಟ್ಟಣದ ನೈರ್ಮಲ್ಯ ಸೇರಿಕೊಂಡು ಗಬ್ಬುನಾರುತ್ತಿದೆ. ಮಳೆ ಬಂದರಂತೂ ಈ ಹಳ್ಳ ಉಕ್ಕಿ ಹರಿಯಲಿದ್ದು, ವಿದ್ಯಾರ್ಥಿಗಳು ಈ ದುರ್ನಾತದ ನೀರನ್ನೇ ತುಳಿದು ಒಳ ಬರುವ ಅನಿವಾರ್ಯತೆ ಎದುರಾಗಿದೆ. ಇನ್ನು ಸೊಳ್ಳೆ, ಹಂದಿಗಳ ಕಾಟ ಸೇರಿದಂತೆ ವಿಷ ಜಂತುಗಳು ಸಹ ಆಗಾಗ ವಸತಿ ನಿಲಯಕ್ಕೆ ಬರುತ್ತಿದ್ದ ಕಾರಣ ಜೀವ ಭಯದಲ್ಲಿ ನೆಲೆಸುವಂತೆ ಆಗಿದೆ ಎನ್ನಾತ್ತಾರೆ ವಿದ್ಯಾರ್ಥಿಗಳು. ಮಳೆ ಬಂದರೆ ವಸತಿ ನಿಲಯದ ಕೆಲವು ಕೊಠಡಿಗಳು ಸೋರುತ್ತಿವೆ. ಗೋಡೆಗಳು ಶಿಥಿಲ ವ್ಯವಸ್ಥೆಗೆ ತಲುಪಿವೆ. ಮಳೆಗಾಲದಲ್ಲಿ ವಸತಿ ನಿಲಯದ ಸುತ್ತಮುತ್ತಲಿನ ಈ ಪ್ರದೇಶ ಸಂಪೂರ್ಣ ಜಲಾವೃತಗೊಂಡು ಓಡಾಡಲು ಸಮಸ್ಯೆ ಉಂಟಾಗುತ್ತಿದೆ ಎನ್ನುತ್ತಾರೆ ವಿದ್ಯಾರ್ಥಿಗಳು.

ಈ ವಸತಿ ನಿಲಯಕ್ಕೆ ಸುಸಜ್ಜಿತ ಕಾಂಪೌಂಡ್ ಇದ್ದರೂ ಅಕ್ಕಪಕ್ಕದಲ್ಲಿ ಗಿಡ ಗಂಟಿಗಳಿಂದಾಗಿ ಹುಳ ಜಂತುಗಳ ಭಯ ಕಾಡುವಂತೆ ಮಾಡಿದೆ. ಪಟ್ಟಣದ ಹೊರವಲಯದಲ್ಲಿರುವ ಈ ವಸತಿ ನಿಲಯದ ಸ್ಥಳ ನಿರ್ಜನ ಪ್ರದೇಶದಂತೆ ಇದೆ. ಹೀಗಾಗಿ ವಸತಿ ನಿಲಯಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿ ಬೀದಿ ದೀಪ, ಸರಿಯಾದ ರಸ್ತೆ ಇಲ್ಲದಿರುವುದು ಮತ್ತಷ್ಟು ಭಯಕ್ಕೆ ಕಾರಣವಾಗಿದೆ. ಕಾಂಕ್ರಿಟ್ ರಸ್ತೆ ನಿರ್ಮಾಣ, ದೀಪಗಳ ಅಳವಡಿಕೆ ಮಾಡಬೇಕು ಎಂಬುದು ಸ್ಥಳೀಯರು, ವಿದ್ಯಾರ್ಥಿಗಳು ಒತ್ತಾಯವಾಗಿದೆ.

**ವಿದ್ಯಾರ್ಥಿಗಳ ಮನವಿ:** ವಸತಿ ನಿಲಯದಲ್ಲಿ ಕೆಲವು ಶೌಚಾಲಯಗಳು ಕೆಟ್ಟು ಹೋಗಿವೆ. ನಿಲಯದ ಕೊಠಡಿಗಳು ಸೋರುತ್ತಿವೆ ಇವುಗಳನ್ನು ರಿಪೇರಿ ಮಾಡಿಸಬೇಕು. ನಮಗೆ ಬಟ್ಟೆ ಶುಚಿಗೊಳಿಸುವ ಕಟ್ಟೆಗಳನ್ನು ನಿರ್ಮಿಸಬೇಕು, 10 ಕಂಪ್ಯೂಟರ್‌ಗಳನ್ನು ನೀಡಬೇಕು ಎಂದು ವಿದ್ಯಾರ್ಥಿಗಳು ಮನವಿ ಮಾಡಿದ್ದಾರೆ.

**ಕಚ್ಚಾರಸ್ತೆ ಪಯಣ ಹೈರಾಣ**

> **ರಸ್ತೆ ಸಮಸ್ಯೆ ಇದೆ. ಮಳೆಗಾಲ ಬಂದರೆ ಹೆಚ್ಚಿನ ಸಮಸ್ಯೆ ಉಂಟಾಗುತ್ತಿದೆ. ಈ ಬಗ್ಗೆ ರಸ್ತೆ ನಿರ್ಮಿಸುವಂತೆ ಶಾಸಕರಿಗೆ ಮನವಿ ಮಾಡಲಾಗಿದೆ.**
> **-ಶಿವಕುಮಾರ್, ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿ**

# ನೋಟಿಸ್‌ಗೆ ಸೀಮಿತವಾಯಿತೇ ನಗರಸಭೆ ಅಧಿಕಾರ

## ನಗರದಲ್ಲಿ ನಿಯಮ ಗಾಳಿಗೆ ತೂರಿ ಹಲವು ಕಟ್ಟಡಗಳ ನಿರ್ಮಾಣ

• ಉದಯವಾಹಿನಿ, ಶಿರಸಿ



ಉದಯವಾಹಿನಿ ಚಿತ್ರ

ನಗರದ ವಿವಿಧ ಕಡೆಗಳಲ್ಲಿ ಅನಧಿಕೃತವಾಗಿ ನಿರ್ಮಾಣ ಆಗುತ್ತಿರುವ ಹಾಗೂ ಈಗಾಗಲೇ ನಿರ್ಮಾಣಗೊಂಡಿರುವ ಕಟ್ಟಡ ಮಾಲೀಕರಿಗೆ ನಗರಾಡಳಿತವು ಮೂರು ನೋಟಿಸ್ ನೀಡಿ ಸುಮ್ಮನಾಗುತ್ತಿದೆ. ಇದರಿಂದಾಗಿ ಅಕ್ರಮ ಕಟ್ಟಡ ಕಾಮಗಾರಿ ನಡೆಸುವವರಿಗೆ ಯಾವುದೇ ಭಯವಿಲ್ಲದಂತಾಗಿದ್ದು, ಮತ್ತಷ್ಟು ಚಟುವಟಿಕೆ ಎಗ್ಗಿಲ್ಲದೇ ನಡೆಯುವಂತಾಗಿದೆ.

ಶಿರಸಿ ನಗರಸಭೆ ವ್ಯಾಪ್ತಿಯಲ್ಲಿ 31 ವಾರ್ಡ್‌ಗಳಿದ್ದು, ಬಹುತೇಕ ಎಲ್ಲ ಕಡೆ ಅನಧಿಕೃತ ಕಟ್ಟಡಗಳು ತಲೆ ಎತ್ತುತ್ತಿವೆ. ಶಿವಾಜಿ ಚೌಕ, ಸಿಪಿ ಬಝಾರ, ಉಣ್ಣೆಮಠಗಲ್ಲಿ ಸೇರಿದಂತೆ ಪ್ರಮುಖ ವ್ಯಾಪಾರಿ ಪ್ರದೇಶಗಳಲ್ಲಿ ಹೊಸ ಕಟ್ಟಡಗಳು ನಿಯಮಾವಳಿ ಅನುಸರಿಸಿ ನಿರ್ಮಿಸುತ್ತಿಲ್ಲ. ಕೆಲವೆಡೆ ಚರಂಡಿ ಅತಿಕ್ರಮಿಸಿ ಕಟ್ಟಡ ನಿರ್ಮಾಣ ಕಾರ್ಯ ನಡೆದಿದ್ದು, ಸಾರ್ವಜನಿಕರು ನಗರಸಭೆ ಗಮನಕ್ಕೆ ತರುವ ಕಾರ್ಯ ಮಾಡಿದರೂ ಕಾಮಗಾರಿ ಮಾತ್ರ ನಿಂತಿಲ್ಲ ಎಂಬುದು ಸಾರ್ವಜನಿಕರ ದೂರಾಗಿದೆ.

ನಗರ ಪ್ರದೇಶದಲ್ಲಿ 15ಕ್ಕೂ ಹೆಚ್ಚು ಕಡೆ ನಿಯಮಾವಳಿ ಗಾಳಿಗೆ ತೂರಿ ಕಟ್ಟಡ ಕಾರ್ಯ ಪ್ರಗತಿಯಲ್ಲಿದೆ. ಈ ಬಗ್ಗೆ ನಗರಸಭೆಗೆ ಮಾಹಿತಿ ನೀಡಿದರೆ ಅಲ್ಲಿನ ಅಧಿಕಾರಿಗಳು ಕಾಮಗಾರಿ ಸ್ಥಗಿತ ಮಾಡುವ ಬದಲು ಕಟ್ಟಡ ಮಾಲೀಕರಿಗೆ ನೋಟಿಸ್ ನೀಡುವುದಾಗಿ ದೂರುದಾರರಿಗೆ ಭರವಸೆ ನೀಡುತ್ತಾರೆ. ಈ ಹಿಂದೆ ಹಲವು ಕಟ್ಟಡಗಳು ಅನಧಿಕೃತವಾಗಿದೆ ಎಂದು ಸಾರ್ವಜನಿಕರು ದೂರಿದಾಗ, ನಗರಸಭೆ ಸಾಮಾನ್ಯ ಸಭೆಯಲ್ಲಿ ಸದಸ್ಯರೇ ಅಧಿಕಾರಿಗಳ ನಡೆಗೆ ಆಕ್ರೋಶ ವ್ಯಕ್ತಪಡಿಸಿದಾಗ ನೋಟಿಸ್ ನೀಡಲಾಗಿತ್ತು. ಅನಧಿಕೃತ ಕಟ್ಟಡ ಮಾಲೀಕರ ವಿರುದ್ಧ ದನಿ ಎತ್ತದ ನಗರಸಭೆ ಅಧಿಕಾರಿಗಳ ಅಧಿಕಾರ ವ್ಯಾಪ್ತಿಯು ಮೂರು ನೋಟಿಸ್ ನೀಡಿ ಸುಮ್ಮನಾಗುವುದಕ್ಕಷ್ಟೇ ಸೀಮಿತವಾದಂತಿದೆ ಎಂಬುದು ನಗರ ನಿವಾಸಿ ರಾಮಚಂದ್ರ ಭಟ್ ಮಾತಾಗಿದೆ.


**ನೋಟಿಸ್ ನೀಡಿ ಸುಮ್ಮನಾಗುವ ಅಧಿಕಾರಿಗಳು:** ಎರಡು ಮೂರು ವರ್ಷಗಳಿಂದೀಚೆ ನಗರದಲ್ಲಿ ಸಾಕಷ್ಟು ಅನಧಿಕೃತ ಕಟ್ಟಡಗಳು ನಿರ್ಮಾಣವಾಗಿವೆ. ಅಂಥ ಕಟ್ಟಡ ಮಾಲೀಕರಿಗೆ ಸಾಕಷ್ಟು ಬಾರಿ ನೋಟಿಸ್ ಕೂಡ ನೀಡಲಾಗಿದೆ. ಮೂರು ನೋಟಿಸ್ ನಂತರ ಅಂಥ ಕಟ್ಟಡ ತೆರವು ಕಾರ್ಯ ಆಗಬೇಕು. ಆದರೆ ಅಂಥ ಯಾವುದೇ ಒಂದು ಉದಾಹರಣೆ ಕೂಡ ನಡೆದಿಲ್ಲ. ಸಾಮಾನ್ಯರು ಮನೆ ದುರಸ್ತಿ ಇಲ್ಲವೇ ಎರಡನೇ ಅಂತಸ್ತು ನಿರ್ಮಿಸುವ ವೇಳೆ ಸಾಕಷ್ಟು ನಿಯಮ ಮಾತನಾಡುವ ನಗರಸಭೆ ಅಧಿಕಾರಿಗಳು ನಿಯಮಾವಳಿ ಮುರಿದು ನಿರ್ಮಿಸುವ ಬೃಹತ್ ಕಟ್ಟಡಗಳ ಮಾಲೀಕರಿಗೆ ಏನೂ ಮಾಡುತ್ತಿಲ್ಲ. ನೋಟಿಸ್‌ಗೆ ಉತ್ತರ ನೀಡುವ ಕೆಲಸವನ್ನೂ ಕಟ್ಟಡ ಮಾಲೀಕರು ಮಾಡುತ್ತಿಲ್ಲ. ಸಾರ್ವಜನಿಕರು ಸುಮ್ಮನೇ ದೂರು ನೀಡುವಂತಾಗಿದೆ ಎಂಬುದು ಹಲವು ಜನರ ಬೇಸರದ ಮಾತಾಗಿದೆ.

> **ಜನನಿಬಿಡ, ವಾಹನ ದಟ್ಟಣೆ ಇರುವ ಕೆಲವೆಡೆ ವಾಹನ ನಿಲುಗಡೆ, ಸೆಟ್ ಬ್ಯಾಕ್ ನಿಯಮ ಉಲ್ಲಂಘಿಸಿ ಕಟ್ಟಡ ನಿರ್ಮಿಸಲಾಗಿದೆ. ಈ ಬಗ್ಗೆ ಯಾವುದೇ ಕ್ರಮವಾಗಿಲ್ಲ. ಅಂಥ ಕಟ್ಟಡವನ್ನು ವಾಣಿಜ್ಯ ಬಳಕೆಗೆ ಬಾಡಿಗೆ ನೀಡಲಾಗಿದ್ದು, ಅಂಥ ಪ್ರದೇಶದಲ್ಲೇ ವಾಹನ ದಟ್ಟಣೆ ಸಮಸ್ಯೆ ಹೆಚ್ಚುತ್ತಿದೆ. ನಗರಸಭೆ ಅಧಿಕಾರಿಗಳು ಯಾರ ಒತ್ತಡಕ್ಕೆ ಸಿಲುಕಿ ಸುಮ್ಮನಿದ್ದಾರೋ ತಿಳಿಯುತ್ತಿಲ್ಲ. ಅನಧಿಕೃತ ಕಟ್ಟಡ ಮಾಲೀಕರು ಹಾಗೂ ನಗರಸಭೆ ಅಧಿಕಾರಿಗಳ ಹೊಂದಾಣಿಕೆಯ ಕಾರಣ ಸಾರ್ವಜನಿಕರು ಸಮಸ್ಯೆ ಅನುಭವಿಸುವಂತಾಗಿದೆ' ಎನ್ನುತ್ತಾರೆ.**

> **ನಗರದಲ್ಲಿ ಎಗ್ಗಿಲ್ಲದೇ ಅಕ್ರಮ ಕಟ್ಟಡಗಳು ತಲೆ ಎತ್ತುತ್ತಿದ್ದು ಸಾರ್ವಜನಿಕರು ಮಾಹಿತಿ ನೀಡಿದರೂ ನಗರಸಭೆ ಅಧಿಕಾರಿಗಳು ಅವುಗಳತ್ತ ಮುಖ ಮಾಡುತ್ತಿಲ್ಲ. ಇದನ್ನು ನೋಡಿದರೆ ಧಿಕಾರಿಗಳ ಮೇಲೆ ಸಂಶಯ ಮೂಡುತ್ತಿದೆ.**
> **-ಪರಮಾನಂದ ಹೆಗಡೆ, ಸಾಮಾಜಿಕ ಕಾರ್ಯಕರ್ತ**

> **ಅನಧಿಕೃತವಾಗಿ ಕಟ್ಟಡ ನಿರ್ಮಿಸಿದ ಕೆಲವರಿಗೆ ಈಗಾಗಲೇ ಮೂರು ನೋಟಿಸ್ ನೀಡಿದ್ದು ಮುಂದಿನ ಕ್ರಮವನ್ನು ಶೀಘ್ರದಲ್ಲಿ ಕೈಗೊಳ್ಳಲಾಗುವುದು.**
> **-ಶಿವರಾಜ ಪ್ರಭಾರ, ಪೌರಾಯುಕ್ತ**

# ನಿಮ್ಮ ಅವಕಾಶ ಮುಂದೆ ಬರಲಿದೆ ; ನೌಕಾ ಮುಖ್ಯಸ್ಥರಿಗೆ ಪ್ರಧಾನಿ ಮೋದಿ ಭರವಸೆ



**ಹೊಸದಿಲ್ಲಿ:** ಭಾರತ – ಪಾಕಿಸ್ತಾನದ ನಡುವಿನ ಕದನ ವಿರಾಮದ ಬಳಿಕ ನೌಕಾ ಮುಖ್ಯಸ್ಥ ಅಡ್ಮಿರಲ್ ದಿನೇಶ್ ತ್ರಿಪಾಠಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಒಂದು ಮಾತು ಹೇಳಿದರು. ನಿಮ್ಮ ಅವಕಾಶ ಮುಂದೆ ಬರಲಿದೆ ಎಂದು ಭರವಸೆ ನೀಡಿದರು. ಮೇ 10 ರಂದು ಭಾರತೀಯ ನೌಕಾಪಡೆಯು ಕರಾಚಿ ಬಂದರಿನ ಮೇಲೆ ಬ್ರಹ್ಮೋಸ್ ಕ್ಷಿಪಣಿಯ ದಾಳಿಯನ್ನು ನಡೆಸಲು ಸಿದ್ಧವಾಗಿತ್ತು. ಆದರೆ, ಪ್ರಧಾನಿ ಮೋದಿಯವರು ಅದನ್ನು ತಡೆದರು. ಈ ಘಟನೆಯ ನಂತರ ಪ್ರಧಾನಿ ಮೋದಿ ಈ ರೀತಿ ಹೇಳಿದ್ದಾರೆ. ಭಾರತದ ಮೂರು ಸೇನಾ ಮುಖ್ಯಸ್ಥರಾದ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್, ಜನರಲ್ ಉಪೇಂದ್ರ ದ್ವಿವೇದಿ, ಅಡ್ಮಿರಲ್ ದಿನೇಶ್ ತ್ರಿಪಾಠಿ ಅವರು ತಮ್ಮ ನಾಯಕತ್ವದಿಂದ ಗಮನ ಸೆಳೆದಿದ್ದಾರೆ.

**ಸೇನಾ ಮುಖ್ಯಸ್ಥರಿಗೆ ಸಂಪೂರ್ಣ ಸ್ವಾತಂತ್ರ್ಯ:** ಮೇ 10 ರಂದು ಪ್ರಧಾನಿ ಮೋದಿ ಅವರು ಮೂವರು ಸೇನಾ ಮುಖ್ಯಸ್ಥರನ್ನು ಅಭಿನಂದಿಸಿದರು. ಜನರಲ್ ದ್ವಿವೇದಿ ಮತ್ತು ಏರ್ ಚೀಫ್ ಮಾರ್ಷಲ್ ಸಿಂಗ್ ಅವರ ಕಾರ್ಯವನ್ನು ಶ್ಲಾಘಿಸಿದರು. ನಂತರ ಅಡ್ಮಿರಲ್ ತ್ರಿಪಾಠಿ ಅವರಿಗೆ, ನಾನು ನಿಮ್ಮ ಬಾಯಿಯಿಂದ ತುತ್ತು ಕಿತ್ತುಕೊಂಡೆ, ಆದರೆ ನಿಮಗೆ ಮತ್ತೆ ಅವಕಾಶ ಸಿಗುತ್ತದೆ ಎಂದರು. ಕರಾಚಿ ಮೇಲೆ ದಾಳಿ ಮಾಡಿದರೆ, ಪಾಕಿಸ್ತಾನವು ಗುಜರಾತ್ ಮೇಲೆ ಪ್ರತಿದಾಳಿ ನಡೆಸುವ ಸಾಧ್ಯತೆ ಇತ್ತು. ಆದರೂ, ಪ್ರಧಾನಿ ಮೋದಿ ಯಾವುದೇ ಆತಂಕವಿಲ್ಲದೆ ಮೂವರು ಸೇನಾ ಮುಖ್ಯಸ್ಥರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದರು.

### ಭಾರತದ ದಾಳಿಗೆ ಬೆದರಿದ ಪಾಕ್

**ಭಾರತೀಯ ಸೇನೆಯ ಒ777 ಎಕ್ಸಾಲಿಬರ್ ಮತ್ತು ವಾರ್ಮೇಟ್ ಕ್ಷಿಪಣಿಗಳ ದಾಳಿಯಿಂದ ಪಾಕಿಸ್ತಾನದ ಸೈನಿಕರು ಭಯಭೀತರಾದರು. ಭಾರತೀಯ ವಾಯುಪಡೆಯು ಬಲವಾಗಿ ಪ್ರತಿಕ್ರಿಯಿಸಿದ ಕಾರಣ, ಪಾಕಿಸ್ತಾನವು ತನ್ನೆಲ್ಲಾ ಬೆಲೆಬಾಳುವ ಆಸ್ತಿಗಳನ್ನು ಇರಾನ್ ಮತ್ತು ಅಫ್ಘಾನಿಸ್ತಾನದ ಗಡಿಯ ಕಡೆಗೆ ಸ್ಥಳಾಂತರಿಸಿತು. ಒಂದು ದೊಡ್ಡ ವಿಮಾನವು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದೊಳಗೆ 315 ಕಿಲೋಮೀಟರ್ ದೂರದಲ್ಲಿ ಹಾರಾಡುತ್ತಿತ್ತು. ಅದನ್ನು ಹೊಡೆದುರುಳಿಸಲು S-400 ಕ್ಷಿಪಣಿ ವ್ಯವಸ್ಥೆಯನ್ನು ಬಳಸಲಾಯಿತು.**

ಏರ್ ಚೀಫ್ ಮಾರ್ಷಲ್ ಸಿಂಗ್ ಅವರ ಹೇಳಿಕೆಗಳನ್ನು ಹಲವು ವಿಶ್ಲೇಷಕರು ಟೀಕಿಸಿದ್ದಾರೆ. ಆದರೆ, ಸಿಂಗ್ ಅವರು ಮೇ 7-10ರ ನಡುವೆ ಪಾಕಿಸ್ತಾನದ ವಿಮಾನಗಳು, ರಾಡಾರ್ ವ್ಯವಸ್ಥೆಗಳು, ಬೇಹುಗಾರಿಕಾ ವ್ಯವಸ್ಥೆಗಳನ್ನು ನಾಶಪಡಿಸಿದ ಬಗ್ಗೆ ಮಾತ್ರ ಮಾತನಾಡಿದರು.

ಗುಪ್ತಚರ ಸಂಸ್ಥೆಗಳು, ರಕ್ಷಣಾ ಯೋಜನೆಗಾರರಿಗೆ ಲಭ್ಯವಿರುವ ಹೆಚ್ಚಿನ ಮಾಹಿತಿಯನ್ನು ಅವರು ಬಹಿರಂಗಪಡಿಸಲಿಲ್ಲ. ಭಾರತದ ನೌಕಾಪಡೆಯು ಬಲವಾಗಿ ಪ್ರತಿಕ್ರಿಯೆ ನೀಡುವ ಭಯದಿಂದ ಪಾಕಿಸ್ತಾನದ ನೌಕಾಪಡೆಯು ತನ್ನ ಹಡಗುಗಳು, ಜಲಾಂತರ್ಗಾಮಿಗಳನ್ನು ಕಾರ್ಯಾಚರಣೆ ಪ್ರದೇಶಕ್ಕೆ ಕಳುಹಿಸಲಿಲ್ಲ. ಬದಲಾಗಿ, ಎಲ್ಲಾ ಹಡಗುಗಳನ್ನು ಗ್ವಾದರ್ ಬಂದರಿನ ಕಡೆಗೆ ಸರಿಸಲಾಯಿತು. ಭಾರತದ ಬ್ರಹ್ಮೋಸ್ ಕ್ಷಿಪಣಿಯು ಮೇ 10 ರಂದು ಮಧ್ಯಾಹ್ನ ಬೋಲಾರಿ ವಾಯುನೆಲೆಯ ಮೇಲೆ ದಾಳಿ ಮಾಡಿತು. ಇದರೊಂದಿಗೆ ಎಲ್ಲಾ ಗುರಿಗಳನ್ನು ಯಶಸ್ವಿಯಾಗಿ ತಲುಪಲಾಯಿತು.

## ಭಾರತೀಯ ವಿಮಾನಯಾನ ಸಂಸ್ಥೆಗಳಿಗೆ ವಾಯುಪ್ರದೇಶ ನಿಷೇಧಿಸಿ ನಷ್ಟ ಅನುಭವಿಸಿದ ಪಾಕ್



**ಇಸ್ಲಾಮಾಬಾದ್:** ಭಾರತೀಯ ವಿಮಾನಯಾನ ಸಂಸ್ಥೆಗಳಿಗೆ ವಾಯುಪ್ರದೇಶವನ್ನು ಮುಚ್ಚಿದ್ದರಿಂದ ಪಾಕಿಸ್ತಾನದ ವಿಮಾನ ನಿಲ್ದಾಣ ಸಂಸ್ಥೆ ಎರಡು ತಿಂಗಳಲ್ಲಿ 4.1 ಬಿಲಿಯನ್ ರೂ. ನಷ್ಟವನ್ನು ಅನುಭವಿಸಿದೆ ಎಂದು ಅಧಿಕೃತ ಅಂಕಿ ಅಂಶಗಳು ತಿಳಿಸಿವೆ. ಏಪ್ರಿಲ್ 22 ರಂದು ಕಾಶ್ಮೀರದಲ್ಲಿ ನಡೆದ ಪೆಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ನಂತರ ಪಾಕಿಸ್ತಾನ ಮತ್ತು ಭಾರತ ಪರಸ್ಪರ ವಿಮಾನಯಾನ ಸಂಸ್ಥೆಗಳಿಗೆ ತಮ್ಮ ವಾಯುಪ್ರದೇಶವನ್ನು ಮುಚ್ಚಿವೆ, ಇದರಲ್ಲಿ ಹೆಚ್ಚಿನವರು ಪ್ರವಾಸಿಗರು ಸೇರಿದ್ದಾರೆ. ಭಾರತವು ಮೇ 7 ರಂದು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿ ಪಾಕಿಸ್ತಾನ ನಿಯಂತ್ರಣದಲ್ಲಿರುವ ಪ್ರದೇಶಗಳಲ್ಲಿ ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಪಡಿಸಿದ ನಂತರ ನಾಲ್ಕು ದಿನಗಳ ಸಂಘರ್ಷದಿಂದಾಗಿ ಎರಡೂ ದೇಶಗಳ ನಡುವಿನ ಸಂಬಂಧಗಳು ಹದಗೆಟ್ಟ ನಂತರ ವಾಯುಪ್ರದೇಶದ ನಿಷೇಧವನ್ನು ವಿಸ್ತರಿಸಲಾಯಿತು.

ಭಾರತದಲ್ಲಿ ನೋಂದಾಯಿತ ವಿಮಾನಗಳಿಗೆ ವಾಯುಪ್ರದೇಶವನ್ನು ಮುಚ್ಚುವುದರಿಂದ ಪಾಕಿಸ್ತಾನ ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ (ಪಿಎಎ) 4.1 ಬಿಲಿಯನ್ ರೂ. ನಷ್ಟವಾಗಿದೆ ಎಂದು ರಕ್ಷಣಾ ಸಚಿವಾಲಯ ರಾಷ್ಟ್ರೀಯ ಅಸೆಂಬ್ಲಿಗೆ ತಿಳಿಸಿದೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ. ಏಪ್ರಿಲ್ 24 ರಿಂದ ಜೂನ್ 30ರವರೆಗಿನ ಕೊರತೆಯು ಅತಿಯಾದ ಆದಾಯದಲ್ಲಿದೆ ಎಂದು ಸಚಿವಾಲಯ ತಿಳಿಸಿದೆ. ಈ ಮೊತ್ತವು ಆದಾಯದಲ್ಲಿನ ಕೊರತೆಯನ್ನು ಪ್ರತಿಬಿಂಬಿಸುತ್ತದೆ, ಒಟ್ಟಾರೆ ಆರ್ಥಿಕ ನಷ್ಟವನ್ನಲ್ಲ ಎಂದು ಅದು ಸೇರಿಸಿದೆ ಮತ್ತು ಓವರ್‌ಫ್ಲೈಟ್, ವೈಮಾನಿಕ ಶುಲ್ಕಗಳು ಬದಲಾಗದೆ ಉಳಿದಿವೆ ಎಂದು ಗಮನಿಸಿದೆ.ಪಾಕಿಸ್ತಾನದ ವಾಯುಪ್ರದೇಶವು ಭಾರತೀಯ ವಿಮಾನಯಾನ ಸಂಸ್ಥೆಗಳು, ವಿಮಾನಗಳನ್ನು ಹೊರತುಪಡಿಸಿ ಎಲ್ಲರಿಗೂ ಮುಕ್ತವಾಗಿದೆ.ಅದೇ ರೀತಿ, ಪಾಕಿಸ್ತಾನಿ ವಾಹಕ ನೌಕೆಗಳು ಭಾರತೀಯ ವಾಯುಪ್ರದೇಶದಿಂದ ನಿಷೇಧಿಸಲ್ಪಟ್ಟಿವೆ.

### ಬಿಹಾರ ಡಿಸಿಎಂ ವಿಜಯ್ ಕುಮಾರ್ ಸಿನ್ಹಾ ಬಳಿ 2 ವೋಟರ್ ಐಡಿ ಇದೆ, ಕ್ರಮ ಯಾಕಿಲ್ಲ?

## ವಿಜಯ್ ಕುಮಾರ್ ಸಿನ್ಹಾ ರಾಜೀನಾಮೆ ಕೊಡಲಿ

**ಪಾಟ್ನಾ:** ಬಿಹಾರದ ಮತದಾರರ ಪಟ್ಟಿ ಪರಿಷ್ಕರಣೆ ಕುರಿತ ವಿವಾದಕ್ಕೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಹೊಸ ತಿರುವು ನೀಡಿದ್ದಾರೆ. ಉಪಮುಖ್ಯಮಂತ್ರಿ ಮತ್ತು ಬಿಜೆಪಿ ನಾಯಕ ವಿಜಯ್ ಕುಮಾರ್ ಸಿನ್ಹಾ ಎರಡು ಎಪಿಕ್ ಕಾರ್ಡ್ ಹೊಂದಿದ್ದಾರೆ ಎಂದು ಆರೋಪಿಸಿದ್ದಾರೆ.

**ತೇಜಸ್ವಿ ಯಾದವ್ ಸುಳ್ಳು ಆರೋಪ:** ಬಿಹಾರದಲ್ಲಿ ಭಾನುವಾರ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರು ಉಪ ಮುಖ್ಯಮಂತ್ರಿ ವಿಜಯ್ ಕುಮಾರ್ ಸಿನ್ಹಾ ಅವರ ಮೇಲೆ ಗಂಭೀರ ಆರೋಪ ಮಾಡಿದ್ದಾರೆ. ವಿಜಯ್ ಕುಮಾರ್ ಸಿನ್ಹಾ ಅವರು ಎರಡು ಮತದಾರರ ಗುರುತಿನ ಚೀಟಿಗಳನ್ನು ಹೊಂದಿದ್ದಾರೆ ಎಂದು ಹೇಳಿದ್ದಾರೆ. ಈ ಬಗ್ಗೆ ವಿಜಯ್ ಕುಮಾರ್ ಸಿನ್ಹಾ ವಿರುದ್ಧ ಏನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪ್ರಶ್ನಿಸಿದ್ದಾರೆ. ವಿಜಯ್ ಕುಮಾರ್ ಸಿನ್ಹಾ ಅವರು ಈ ಆರೋಪಗಳನ್ನು ತಳ್ಳಿಹಾಕಿದ್ದಾರೆ. ತೇಜಸ್ವಿ ಯಾದವ್ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದ್ದಾರೆ.

**ತೇಜಸ್ವಿ ಯಾದವ್ ಬಳಿಯೂ 2 ಎಪಿಕ್ ಕಾರ್ಡ್:** ಚುನಾವಣಾ ಆಯೋಗವು ತೇಜಸ್ವಿ ಯಾದವ್ ಅವರಿಗೂ ಎರಡು ಎಪಿಕ್ ಸಂಖ್ಯೆಗಳಿವೆ ಎಂದು ಹೇಳಿದೆ. ಈ ಬಗ್ಗೆ ತೇಜಸ್ವಿ ಯಾದವ್ ಆಯೋಗದ ವಿರುದ್ಧವೇ ತಿರುಗಿ ಬಿದ್ದಿದ್ದಾರೆ. ತಪ್ಪು ಅವರದ್ದಾಗಿದ್ದು, ನನ್ನನ್ನು ಪ್ರಶ್ನಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಹಾರದಲ್ಲಿ ಈ ವಿಷಯವು ರಾಜಕೀಯ ಕೆಸರೆರಚಾಟಕ್ಕೆ ಕಾರಣವಾಗಿದೆ. ತೇಜಸ್ವಿ ಯಾದವ್ ಅವರು ಪತ್ರಕರ್ತರೊಂದಿಗೆ ಮಾತನಾಡುತ್ತಾ, ವಿಜಯ್ ಕುಮಾರ್ ಸಿನ್ಹಾ ಅವರು 2 ಜಿಲ್ಲೆಗಳಲ್ಲಿ ಮತದಾರರಾಗಿದ್ದಾರೆ ಎಂದು ಆರೋಪಿಸಿದರು. ವಿಜಯ್ ಕುಮಾರ್ ಸಿನ್ಹಾ ಅವರು ಎರಡು ಬೇರೆ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರಾಗಿದ್ದಾರೆ. ಅವರ ಹೆಸರು ಲಖಿಸರೈ ವಿಧಾನಸಭಾ ಕ್ಷೇತ್ರ ಮತ್ತು ಪಾಟ್ನಾ



**ತೇಜಸ್ವಿ ಯಾದವ್ ಆರೋಪ**

ಜಿಲ್ಲೆಯ ಬಂಕಿಪುರ ವಿಧಾನಸಭಾ ಕ್ಷೇತ್ರ ಎರಡರಲ್ಲೂ ಇದೆ ಎಂದು ಹೇಳಿದರು. ಚುನಾವಣಾ ಆಯೋಗವು ವಿಶೇಷ ತೀವ್ರ ಪರಿಷ್ಕರಣೆ ಮಾಡಿದ ನಂತರ ಇದು ನಡೆದಿದೆ. ಇದಕ್ಕೆ ಯಾರು ಜವಾಬ್ದಾರರು? ಸಿನ್ಹಾ ಅವರೋ ಅಥವಾ ಚುನಾವಣಾ ಆಯೋಗವೋ? ಸಿನ್ಹಾ ವಿರುದ್ಧ ಏನು ಕ್ರಮ ತೆಗೆದುಕೊಳ್ಳಲಾಗುತ್ತಿದೆ? ಈ ವಿಷಯ ಬಹಿರಂಗವಾದ ನಂತರ ಅವರು ಯಾವಾಗ ರಾಜೀನಾಮೆ ನೀಡುತ್ತಾರೆ ಎಂದು ಯಾದವ್ ಪ್ರಶ್ನಿಸಿದ್ದಾರೆ.

ನಾನು ಒಂದೇ ಕಡೆ ಮತ ಹಾಕುತ್ತೇನೆ. ಕಳೆದ ಬಾರಿಯೂ ನಾನು ಒಂದೇ ಕಡೆ ಮತ ಹಾಕಿದ್ದೆ. ತೇಜಸ್ವಿ ಸುಳ್ಳು ಸಂಗತಿಗಳನ್ನು ನೀಡಿ ಜನರನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದ್ದಾರೆ. ಇಡೀ ಬಿಹಾರಕ್ಕೆ ತಿಳಿದಿದೆ. ಅವರು ಇತರರ ಇಮೇಜ್ ಅನ್ನು ಹಾಳು ಮಾಡುವ ಆಟವನ್ನು ಆಡುತ್ತಾರೆ. ನನ್ನ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಿದ್ದಕ್ಕಾಗಿ ಅವರು ಕ್ಷಮೆಯಾಚಿಸಬೇಕು ಎಂದು ಸಿನ್ಹಾ ಹೇಳಿದರು. ಇತ್ತೀಚೆಗೆ, ಚುನಾವಣಾ ಆಯೋಗ ತೇಜಸ್ವಿ ಯಾದವ್ ಅವರಿಗೆ ಎರಡು ಎಪಿಕ್ ಸಂಖ್ಯೆಗಳನ್ನು ಹೊಂದಿರುವ ಆರೋಪಗಳಿಗೆ ಪ್ರತಿಕ್ರಿಯಿಸುವಂತೆ ಕೇಳಿತ್ತು. ನನಗೆ ಎರಡು ಎಪಿಕ್ ಸಂಖ್ಯೆಗಳನ್ನು ನೀಡಿದರೆ ಯಾರ ತಪ್ಪು? ತಪ್ಪನ್ನು ಅವರೇ ಮಾಡುತ್ತಾರೆ ಮತ್ತು ನನ್ನಿಂದ ವಿವರಣೆಯನ್ನು ಕೇಳುತ್ತಾರೆ ಎಂದು ತೇಜಸ್ವಿ ವಾಗ್ದಾಳಿ ನಡೆಸಿದರು.

ಈ ಎಲ್ಲಾ ಆರೋಪಗಳು ಮತ್ತು ಪ್ರತ್ಯಾರೋಪಗಳು ಬಿಹಾರ ರಾಜಕೀಯದಲ್ಲಿ ಸಂಚಲನ ಮೂಡಿಸಿವೆ. ಈ ಬಗ್ಗೆ ತನಿಖೆ ನಡೆಯಬೇಕೆಂದು ವಿರೋಧ ಪಕ್ಷಗಳು ಆಗ್ರಹಿಸಿವೆ. ಆಡಳಿತ ಪಕ್ಷವು ಈ ಆರೋಪಗಳನ್ನು ರಾಜಕೀಯ ಪ್ರೇರಿತ ಎಂದು ತಳ್ಳಿಹಾಕಿದೆ. ಚುನಾವಣಾ ಆಯೋಗವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸುತ್ತಿದೆ.

### ನಾನು ಒಂದೇ ಕಡೆ ಮತ ಹಾಕಿದ್ದೇನೆ

**ತೇಜಸ್ವಿ ಯಾದವ್ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಸಿನ್ಹಾ, ನಾನು ಈ ಹಿಂದೆ ಬಂಕಿಪುರ ವಿಧಾನಸಭಾ ಕ್ಷೇತ್ರದಲ್ಲಿ ನನ್ನ ಕುಟುಂಬದ ಸದಸ್ಯರ ಹೆಸರನ್ನು ಸೇರಿಸಿದ್ದೆ. ಏಪ್ರಿಲ್ 2024ರಲ್ಲಿ, ಲಖಿಸರೈನಿಂದ ನನ್ನ ಹೆಸರನ್ನು ಸೇರಿಸಲು ಅರ್ಜಿ ಸಲ್ಲಿಸಿದ್ದೆ. ಬಂಕಿಪುರದಿಂದ ನಮ್ಮ ಹೆಸರುಗಳನ್ನು ತೆಗೆದುಹಾಕಲು ಫಾರ್ಮ್ ಅನ್ನು ಭರ್ತಿ ಮಾಡಿದ್ದೆ. ನನ್ನ ಬಳಿ ದಾಖಲೆಗಳಿವೆ. ಕೆಲವು ಕಾರಣಗಳಿಂದ ನನ್ನ ಹೆಸರನ್ನು ಬಂಕಿಪುರದಿಂದ ತೆಗೆದುಹಾಕಲಾಗಿಲ್ಲ. ಅದು ಕರಡು ಮತದಾರರ ಪಟ್ಟಿಯಲ್ಲಿ ಕಾಣಿಸಿಕೊಂಡಿತು. ನಾನು ಬೂತ್ ಮಟ್ಟದ ಅಧಿಕಾರಿಗೆ ಕರೆ ಮಾಡಿ ಲಿಖಿತ ಅರ್ಜಿಯನ್ನು ಸಲ್ಲಿಸಿದೆ. ಬಂಕಿಪುರದಿಂದ ನನ್ನ ಹೆಸರನ್ನು ತೆಗೆದುಹಾಕಲು ರಶೀದಿಯನ್ನು ತೆಗೆದುಕೊಂಡಿದ್ದೇನೆ. ನನ್ನ ಬಳಿ ಎರಡೂ ದಾಖಲೆಗಳಿವೆ ಎಂದು ಹೇಳಿದರು. ನಾನು ಒಂದೇ ಕಡೆ ಮತ ಹಾಕಿದ್ದೇನೆ ಎಂದು ಸಿನ್ಹಾ ಸ್ಪಷ್ಟಪಡಿಸಿದರು.**

## ಶಾಂತಿ ಒಪ್ಪಂದಕ್ಕೆ ಅರ್ಮೇನಿಯ- ಅಜರ್‌ಬೈಜಾನ್ ಸಹಿ

**ವಾಷಿಂಗ್ಟನ್:** ಮೂರು ದಶಕಗಳಿಗೂ ಹೆಚ್ಚು ಕಾಲ ಸಂಘರ್ಷದಲ್ಲಿ ತೊಡಗಿದ್ದ ಅರ್ಮೇನಿಯ ಹಾಗೂ ಅಜರ್‌ಬೈಜಾನ್ ದೇಶಗಳು ಶಾಂತಿ ಒಪ್ಪಂದಕ್ಕೆ ಸಹಿ ಹಾಕಿದವು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಧ್ಯಸ್ಥಿಕೆಯಲ್ಲಿ ಈ ಒಪ್ಪಂದ ನಡೆದಿದೆ. ಒಪ್ಪಂದಕ್ಕೆ ಸಹಿ ಹಾಕುವ ಕಾರ್ಯಕ್ರಮವು ಶ್ವೇತಭವನದಲ್ಲಿ ನಡೆಯಿತು. ಈ ವೇಳೆ ಮಾತನಾಡಿದ ಟ್ರಂಪ್ ಎಲ್ಲಾ ಸಂಘರ್ಷಗಳನ್ನು ಶಾಶ್ವತವಾಗಿ ನಿಲ್ಲಿಸಿ ವ್ಯಾಪಾರ, ವಾಣಿಜ್ಯ, ರಾಜತಾಂತ್ರಿಕ ಸಂಬಂಧಗಳನ್ನು ಬೆಳೆಸಲು, ಪರಸ್ಪರ ಸಾರ್ವಭೌಮತೆ, ಪ್ರಾದೇಶಿಕ ಸಮಾನತೆಯನ್ನು ಗೌರವಿಸಲು ಎರಡೂ ದೇಶಗಳು ಬದ್ಧವಾಗಿವೆ ಎಂದರು.

ಟ್ರಂಪ್ ಅವರ ಮಧ್ಯಸ್ಥಿಕೆಯಲ್ಲಿ ಒಪ್ಪಂದ ನಡೆದಿದೆ. ಟ್ರಂಪ್ ಅವರಿಗೆ ನೊಬೆಲ್ ಶಾಂತಿ ಪುರಸ್ಕಾರ ನೀಡಿ ಗೌರವಿಸಬೇಕು ಎಂದು ಅರ್ಮೇನಿಯ ಪ್ರಧಾನಿ ನಿಕೋಲ್ ಪಶಿನ್ಯಾನ್ ಮತ್ತು



ಅಜರ್‌ಬೈಜಾನ್ ಅಧ್ಯಕ್ಷ ಇಲ್ಹಾಮ್ ಆಲಿಯೇವ್ ಹೇಳಿದ್ದಾರೆ.

> **ಇಬ್ಬರೂ ನಾಯಕರು ಉತ್ತಮ ಸಂಬಂಧವನ್ನು ಹೊಂದಿದ್ದಾರೆ. ಸಂಘರ್ಷ ಉಂಟಾದರೆ ಅವರು ನನಗೆ ಕರೆ ಮಾಡುತ್ತಾರೆ. ನಾನು ಅದನ್ನು ಸರಿಪಡಿಸುತ್ತೇನೆ.**
> **- ಡೊನಾಲ್ಡ್ ಟ್ರಂಪ್ ಅಮೆರಿಕ ಅಧ್ಯಕ್ಷ**

ಕ್ರೈಸ್ತರು ಬಹುಸಂಖ್ಯಾತರಾಗಿರುವ ಅರ್ಮೇನಿಯ ಹಾಗೂ ಮುಸ್ಲಿಮರು ಹೆಚ್ಚಿರುವ ಅಜರ್‌ಬೈಜಾನ್ ದೇಶಗಳು ಗಡಿ ಸೇರಿದಂತೆ ಹಲವು ವಿಚಾರಗಳಿಗೆ ಸಂಘರ್ಷದಲ್ಲಿ ತೊಡಗಿದ್ದವು. ವಿವಾದಿತ ಕರಾಬಖ್ ಪ್ರದೇಶಕ್ಕಾಗಿ ಎರಡೂ ದೇಶಗಳ ನಡುವೆ ಎರಡು ಬಾರಿ ಯುದ್ಧ ನಡೆದಿದೆ.

2023ರಲ್ಲಿ ನಡೆದ ಯುದ್ಧದಲ್ಲಿ ಅರ್ಮೇನಿಯದಿಂದ ಕರಾಬಖ್ ಅನ್ನು ಅಜರ್‌ಬೈಜಾನ್ ಮರುವಶಪಡಿಸಿಕೊಂಡಿತು. ಇದರಿಂದ 1 ಲಕ್ಷಕ್ಕೂ ಅಧಿಕ ಅರ್ಮೇನಿಯನ್ ಪ್ರಜೆಗಳು ವಲಸೆ ಹೋಗಬೇಕಾಯಿತು. ಶಾಂತಿ ಒಪ್ಪಂದ ಮಾಡಿಕೊಳ್ಳಲು ಕಳೆದ ಮಾರ್ಚ್‌ನಲ್ಲಿ ಎರಡೂ ದೇಶಗಳು ಸಮ್ಮತಿಸಿದ್ದವು.

> **ಶಾಂತಿಪ್ರಿಯ ಟ್ರಂಪ್ ಇಲ್ಲದಿದ್ದರೆ ಒಪ್ಪಂದವು ಸಾಧ್ಯವಾಗುತ್ತಿರಲಿಲ್ಲ. ನಾವು ಶಾಂತಿ ಸಾಧಿಸಿದ್ದೇವೆ. ಇದು ಹೊಸ ಯುಗದ ದಾರಿಯಾಗಿದೆ**
> **-ನಿಕೋಲ್ ಪಶಿನ್ಯಾನ್ ಅರ್ಮೇನಿಯ ಪ್ರಧಾನಿ**

## ಮನೆ ಬಾಗಿಲಲ್ಲೇ ನ್ಯಾಯ ಲಭಿಸಬೇಕು



**ಇಟಾನಗರ:** ನ್ಯಾಯಾಂಗ, ಶಾಸಕಾಂಗ ಕಾರ್ಯಾಂಗವು ಜನಸೇವೆಗಾ ಅಸ್ತಿತ್ವದಲ್ಲಿರಬೇಕು. ಜನರಿಗೆ ಕಡಿಮೆ ಖರ್ಚಿನಲ್ಲಿ, ಕ್ಷಿಪ್ರಗತಿಯಲ್ಲಿ ಮನೆ ಬಾಗಿಲಲ್ಲೇ ನ್ಯಾಯ ಲಭಿಸಬೇಕು ಎಂದು ಸುಪ್ರೀಂ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅಭಿಪ್ರಾಯಪಟ್ಟರು. ಭಾನುವಾರ ಇಲ್ಲಿ ಗುವಾಹತಿ ಹೈಕೋರ್ಟ್‌ನ ಇಟಾನಗರ ಕಾಯಂ ಪೀಠದ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ನಾನು ಯಾವತ್ತೂ ವಿಕೇಂದ್ರೀಕರಣದ ಕಟ್ಟಾ ಬೆಂಬಲಿಗ. ನ್ಯಾಯವು ಅಧಿಕಾರಸ್ಥರ ಕೊಠಡಿಯಲ್ಲಿ ಉಳಿಯಬಾರದು. ಅದು ಜನರಿಗೆ ಅವರ ಮನೆ ಬಾಗಿಲಲ್ಲೇ ಸುಲಭವಾಗಿ ದೊರೆಯುವಂತಾಗಬೇಕು ಎಂದರು. ನ್ಯಾಯಾಂಗ, ಶಾಸಕಾಂಗ ಕಾರ್ಯಾಂಗ ಇರುವುದು ಜನರಿಗೆ ನ್ಯಾಯ ಒದಗಿಸಲಿಕ್ಕಾಗಿಯೇ ಎಂದು ಅವರು ಪ್ರತಿಪಾದಿಸಿದರು. ಅರುಣಾಚಲ ಪ್ರದೇಶದ ವಿವಿಧತೆಯಲ್ಲಿ ಏಕತೆಯನ್ನು ಅಭಿನಂದಿಸಿದ ಸಿಜೆಐ, ರಾಜ್ಯವು 26 ಪ್ರಮುಖ ಬುಡಕಟ್ಟು ಪಂಗಡ, 100ಕ್ಕೂ ಹೆಚ್ಚು ಉಪ ಪಂಗಡಗಳನ್ನು ಹೊಂದಿದೆ. ಇಲ್ಲಿನ ಪ್ರತಿ ಬುಡಕಟ್ಟಿನ ಸಂಪ್ರದಾಯ, ಸಂಸ್ಕೃತಿ ಸಂರಕ್ಷಣೆಗೆ ಸರ್ಕಾರ ಶ್ರಮಿಸಬೇಕು ಎಂದರು. ದೇಶದ ಅಭಿವೃದ್ಧಿ ಆಗಬೇಕು.

ಜತೆಗೆ ಪರಂಪರೆ, ಸಂಸ್ಕೃತಿಯೂ ಉಳಿಯಬೇಕು. ಪರಂಪರೆ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಸಂವಿಧಾನದಡಿ ನಮ್ಮ ಮೂಲ ಕರ್ತವ್ಯವೂ ಆಗಿದೆ ಎಂದು ಮುಖ್ಯ ನ್ಯಾಯಮೂರ್ತಿ ನೆನಪಿಸಿದರು. ಕಳೆದ ಎರಡು ವರ್ಷಗಳಲ್ಲಿ ಈಶಾನ್ಯ ಭಾರತದ ಹಲವು ರಾಜ್ಯಗಳಿಗೆ ಭೇಟಿ ನೀಡಿದ್ದು, ಅಲ್ಲಿನ ಅದ್ಭುತವಾದ ಬುಡಕಟ್ಟು ಸಂಸ್ಕೃತಿ ಕಂಡು ಮೂಕ ವಿಸ್ಮಿತನಾಗಿದ್ದೇನೆ. ಇತ್ತೀಚೆಗೆ ಮಣಿಪುರಕ್ಕೆ ಭೇಟಿ ನೀಡಿದಾಗ ಅಲ್ಲಿನ ಮಹಿಳೆಯೊಬ್ಬರು ನಿಮ್ಮ ಮನೆಗೆ ನಿಮಗೆ ಸ್ವಾಗತ ಎಂದು ಆಹ್ವಾನ ನೀಡಿದ್ದು ನನ್ನ ಹೃದಯವನ್ನು ಸ್ಪರ್ಶಿಸಿತು ಎಂದು ಅವರು ಸ್ಮರಿಸಿಕೊಂಡರು.

### ಸಂವಿಧಾನವೇ ಪರಮಗ್ರಂಥ

**ಆರ್ಥಿಕ, ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸದ ಹೊರತು ರಾಜಕೀಯ ಸಮಾನತೆಗೆ ಬೆಲೆ ಇರುವುದಿಲ್ಲ ಎಂಬ ಅಂಬೇಡ್ಕರ್ ಹೇಳಿಕೆಯನ್ನು ಸ್ಮರಿಸಿದ ಸಿಜೆಐ ಪ್ರತಿಯೊಂದು ಧರ್ಮಕ್ಕೂ ಪ್ರತ್ಯೇಕ ಧರ್ಮ ಗ್ರಂಥಗಳಿವೆ. ಆದರೆ ಭಾರತೀಯರಾದ ನಮಗೆ ಸಂವಿಧಾನವೇ ಪರಮ ಗ್ರಂಥ. ಸಂವಿಧಾನವೇ ನಮ್ಮ ನಿಷ್ಠೆ. ಪ್ರತಿಯೊಬ್ಬರೂ ಸಂವಿಧಾನವನ್ನು ಓದಬೇಕು ಎಂದು ಸಲಹೆ ನೀಡಿದರು.**

> **ಶಾಂತಿ ಮತ್ತು ಯುದ್ಧದ ಸಂದರ್ಭದಲ್ಲಿ ಭಾರತವನ್ನು ಒಗ್ಗೂಡಿಸಿರುವುದು ಮತ್ತು ಬಲಗೊಳಿಸಿರುವುದು ನಮ್ಮ ಸಂವಿಧಾನ. 75 ವರ್ಷಗಳ ನಂತರವೂ ನಾವು ಅದಕ್ಕೆ ಸಾಕ್ಷಿಯಾಗಿದ್ದೇವೆ**
> **-ಬಿ.ಆರ್.ಗವಾಯಿ ಮುಖ್ಯ ನ್ಯಾಯಮೂರ್ತಿ**

### ಆಪರೇಷನ್ ಸಿಂಧೂರ್, ಸೇನೆಯ ಪರಾಕ್ರಮವನ್ನು ಪ್ರಶ್ನಿಸಿ

## ಘನತೆ ಕೆಡಿಸಿಕೊಂಡ ರಾಹುಲ್ ಗಾಂಧಿ : ಕಿರಣ್ ರಿಜಿಜು

**ನವದೆಹಲಿ:** ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ಆಗಿರುವ ರಾಹುಲ್ ಗಾಂಧಿ ಅವರು ಭಾರತೀಯ ವಾಯುಪಡೆ ಮತ್ತು ಸಂಸತ್ತಿನಲ್ಲಿ ಆಪರೇಷನ್ ಸಿಂಧೂರ್ ಬಗ್ಗೆ ಮಾಡಿದ ಹೇಳಿಕೆಗಳ ಮೂಲಕ ಅವರು ತಮ್ಮ ಸ್ಥಾನಮಾನವನ್ನು ಕಡಿಮೆ ಮಾಡಿಕೊಂಡಿದ್ದಾರೆ, ಭಾರತದ ಉನ್ನತ ಖ್ಯಾತಿಗೆ ಹಾನಿ ಮಾಡಿದ್ದಾರೆ ಎಂದು ಭಾರತೀಯ ಜನತಾ ಪಕ್ಷದ ನಾಯಕ, ಕೇಂದ್ರ ಸಚಿವ ಕಿರಣ್ ರಿಜಿಜು ಆರೋಪಿಸಿದ್ದಾರೆ. ಕಿರಣ್ ರಿಜಿಜು ಅವರು ಎಕ್ಸ್‌ನಲ್ಲಿ ರಾಹುಲ್ ಗಾಂಧಿ ಅವರನ್ನು ಭಾರತೀಯ ಸಂಸತ್ತಿನ ಗೌರವವನ್ನು ಕಾಪಾಡಿಕೊಳ್ಳುವಂತೆ ವಿನಂತಿಸಿದ್ದಾರೆ. ರಾಹುಲ್ ಗಾಂಧಿ ಅವರು ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಗಳ ಮೇಲೆ ದಾಳಿ ಮಾಡದಂತೆ ಸರ್ಕಾರಕ್ಕೆ ತಿಳಿಸಿದ್ದರಿಂದ ಭಾರತೀಯ ವಾಯುಪಡೆಯ ಕೈಗಳನ್ನು ಸರ್ಕಾರವು ಕಟ್ಟಿಹಾಕಿದೆ ಎಂದು ಸಂಸತ್ತಿನಲ್ಲಿ ಹೇಳಿದ್ದರು. ಈ ಹೇಳಿಕೆಯನ್ನು ನಿರಾಕರಿಸುತ್ತಾ, ಭಾರತೀಯ ವಾಯುಪಡೆ ಮುಖ್ಯಸ್ಥ ಅಮರ್ ಪ್ರೀತ್ ಸಿಂಗ್ ಅವರು, ಆಪರೇಷನ್ ಸಿಂಧೂರ್ ಸಮಯದಲ್ಲಿ ಸರ್ಕಾರವು ಅವರ ಮೇಲೆ ಯಾವುದೇ ನಿರ್ಬಂಧಗಳನ್ನು ವಿಧಿಸಿಲ್ಲ, ಕಾರ್ಯಾಚರಣೆಯ ಸಮಯದಲ್ಲಿ ದಾಳಿಗಳನ್ನು ಯೋಜಿಸಲು ಮತ್ತು ಕಾರ್ಯಗತಗೊಳಿಸಲು ಅವರಿಗೆ ಪೂರ್ಣ ಸ್ವಾತಂತ್ರ್ಯ ನೀಡಲಾಗಿತ್ತು ಎಂದು ಸ್ಪಷ್ಟಪಡಿಸಿದ್ದರು. ಈ ಕಾರ್ಯಾಚರಣೆಯ ಕುರಿತು ಚರ್ಚೆಯ ಸಮಯದಲ್ಲಿ ಸಂಸತ್ತಿನಲ್ಲಿ ರಾಹುಲ್ ಗಾಂಧಿಯವರ ಹೇಳಿಕೆಗಳು ಮುಖ್ಯಸ್ಥರ ನಿರಾಕರಣೆಯ ವಿಡಿಯೋವನ್ನು ಹಂಚಿಕೊಂಡ ಕಿರಣ್ ರಿಜಿಜು ಅವರು, ಭಾರತದ ಸಂಸತ್ತಿನ ಘನತೆಯನ್ನು ಕಾಪಾಡಿಕೊಳ್ಳಲು ನಾನು ರಾಹುಲ್ ಗಾಂಧಿಯವರನ್ನು ವಿನಂತಿಸುತ್ತೇನೆ. ನೀವು ಯಾವಾಗಲೂ ಸುಳ್ಳು ಹೇಳುತ್ತಲೇ ಇರುತ್ತೀರಿ? ಸಂಸದೀಯ ಗುಣಮಟ್ಟವನ್ನು ಕಾಯ್ದುಕೊಂಡಿದ್ದ ಅನೇಕ ವಿರೋಧ ಪಕ್ಷದ ನಾಯಕರನ್ನು ನಾನು ನೋಡಿದ್ದೇನೆ.

ನೀವು ನಿಮ್ಮ ಸ್ಥಾನಮಾನವನ್ನು ಕಡಿಮೆ ಮಾಡಿದ್ದೀರಿ ಮಾತ್ರವಲ್ಲದೆ ಭಾರತದ ಉನ್ನತ ಖ್ಯಾತಿಯನ್ನು ಹಾನಿಗೊಳಿಸಿದ್ದೀರಿ ಎಂದಿದ್ದಾರೆ. ಲೋಕಸಭೆಯಲ್ಲಿ ರಾಹುಲ್ ಗಾಂಧಿ ಹೇಳಿದ್ದು ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಆಪರೇಷನ್ ಸಿಂಧೂರ್ ಕುರಿತು ಚರ್ಚೆಯ ಸಂದರ್ಭದಲ್ಲಿ, ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಗಳ ಮೇಲೆ ದಾಳಿ ಮಾಡದಂತೆ ವಾಯುಪಡೆಗೆ ತಿಳಿಸಲಾಗಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದರು.

# ಭೂಮಿಯನ್ನು ಅಧ್ಯಯನ ಮಾಡಲು ಬಂದಿರುವ ಏಲಿಯನ್ ಶಿಪ್

## ಸೌರಮಂಡಲ ಪ್ರವೇಶಿಸಿರುವ 3I/ATLAS ಹೆಸರಿನ ಮೂರನೇ ಅಂತರತಾರಾ ಬಾಹ್ಯಾಕಾಶ ಶಿಲೆ

**ವಾಷಿಂಗ್ಟನ್:** ನಮ್ಮ ಸೌರಮಂಡಲವನ್ನು ಪ್ರವೇಶಿಸಿರುವ 3I/ATLAS ಹೆಸರಿನ ಅಂತರತಾರಾ ಧೂಮಕೇತು ಕುರಿತು, ಅಮೆರಿಕದ ಹಾರ್ವರ್ಡ್ ವಿಶ್ವವಿದ್ಯಾಲಯದ ಖಗೋಳ ವಿಜ್ಞಾನಿಯೊಬ್ಬರು ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದಾರೆ. ಇದು ಧೂಮಕೇತುವಾಗಿರದೇ, ಪರಗ್ರಹ ಜೀವಿಗಳ ಬಾಹ್ಯಾಕಾಶ ನೌಕೆ ಎಂದು ಹಾರ್ವರ್ಡ್‌ನ ಖಗೋಳ ವಿಭಾಗದ ಮುಖ್ಯಸ್ಥರಾಗಿರುವ ಪ್ರೊಫೆಸರ್ ಅವಿ ಲೋಬ್ ವಾದ ಮಂಡಿಸಿದ್ದಾರೆ. ಹೌದು, 3I/ATLAS ಹೆಸರಿನ ಧೂಮಕೇತು ನಮ್ಮ ಸೌರಮಂಡಲಕ್ಕೆ ಭೇಟಿ ನೀಡಿರುವ ಮೂರನೇ ಅಂತರತಾರಾ ವಿಶೇಷ ಅತಿಥಿಯಾಗಿದೆ. ಆದರೆ ಇದು ಸಾಮಾನ್ಯ ಧೂಮಕೇತು ಅಲ್ಲ ಎಂದಿರುವ ಪ್ರೊ. ಅವಿ ಲೋಬ್ ಇದು ಭೂಮಿಯನ್ನು ಅಧ್ಯಯನ ಮಾಡಲು ಬಂದಿರುವ ಏಲಿಯನ್ ಶಿಪ್ ಎಂದು ಹೇಳುವ ಮೂಲಕ ಸಂಚಲನ ಸೃಷ್ಟಿಸಿದ್ದಾರೆ. ಇದು ಖಂಡಿತವಾಗಿಯೂ ನೈಸರ್ಗಿಕ ವಿದ್ಯಮಾನ ಅಲ್ಲ. ಇದೊಂದು ಎಂಜಿನಿಯರ್ಡ್ ಪ್ರೋಬ್ ಆಗಿದ್ದು, ಪರಗ್ರಹ ಜೀವಿಗಳು ಭೂಮಿಯನ್ನು ಅಧ್ಯಯನ ಮಾಡುತ್ತಿವೆ ಎಂದು ಪ್ರೊ. ಅವಿ ಲೋಬ್ ಹೇಳಿದ್ದಾರೆ. 2017ರಲ್ಲಿ ಸೌರಮಂಡಲ ಪ್ರವೇಶಿಸಿದ್ದ ಅಂತರತಾರಾ ಧೂಮಕೇತು ಓಮುವಾಮುವಾ ಏಲಿಯನ್ ಶಿಪ್ ಎಂಬ ವಾದ ಮಂಡಿಸಲಾಗಿತ್ತು. ಆದರೆ ಈ ಕುರಿತು ಯಾವುದೇ ಪ್ರಬಲ ಸಾಕ್ಷ್ಯ ದೊರೆಯಲಿಲ್ಲ. 3I/ATLAS ಹೆಸರಿನ ಅಂತರತಾರಾ ಧೂಮಕೇತು ನಮ್ಮ ಸೌರಮಂಡಲ ಪ್ರವೇಶಿಸಿದ್ದು,



> **12 ಮೈಲಿ ಸಂಭಾವ್ಯ ವ್ಯಾಪ್ತಿಯೊಂದಿಗೆ, 3I/ATLAS ಒಂದು ದೊಡ್ಡ ಕ್ಷುದ್ರಗ್ರಹ ಅಥವಾ ಸಂಭಾವ್ಯ ಧೂಮಕೇತು ಎಂದು ನಾಸಾ ಸ್ಪಷ್ಟಪಡಿಸಿದೆ. ಇದು ಭೂಮಿಯನ್ನು ಸಮೀಪಿಸುತ್ತಿರುವುದು ಸ್ಪಷ್ಟವಾಗಿದ್ದರೂ, ಇದರಿಂದ ಭೂಮಿಗೆ ಯಾವುದೇ ಅಪಾಯ ಇಲ್ಲ ಎಂದು ನಾಸಾ ಭರವಸೆ ನೀಡಿದೆ.**

ಸೌರವ್ಯೂಹದಿಂದ ಹಾದು ಹೋಗುತ್ತಿರುವ ಮೂರನೇ ಅಂತರತಾರಾ ಬಾಹ್ಯಾಕಾಶ ಶಿಲೆ ಎಂದು ನಾಸಾ ಹೇಳಿದೆ. ಈ ಬಾಹ್ಯಾಕಾಶ ಶಿಲೆಯನ್ನು ಕಳೆದ ಜುಲೈ ಜುಲೈ ತಿಂಗಳ ಆರಂಭದಲ್ಲಿ, ಚಿಲಿಯ ಡೀಪ್ ರ್ಯಾಂಡಮ್ ಸರ್ವೆ ದೂರದರ್ಶಕ ಯಂತ್ರದಿಂದ ಪತ್ತೆ ಮಾಡಲಾಗಿತ್ತು. 3I/ATLAS ಭೂಮಿಯನ್ನು ಅಧ್ಯಯನ ಮಾಡಲು ಬಂದಿರುವ ಏಲಿಯನ್ ಶಿಪ್ ಆಗಿದೆ. ಅದು ನಮ್ಮನ್ನು ಉಳಿಸಲು ಅಥವಾ ನಾಶಮಾಡಲು ಬರುತ್ತಿರಬಹುದು. ನಾವು ಈ ಎರಡೂ ಆಯ್ಕೆಗಳಿಗೆ ಸಿದ್ಧರಾಗಿರಬೇಕು ಮತ್ತು ಎಲ್ಲಾ ಅಂತರತಾರಾ ವಸ್ತುಗಳು ಕೇವಲ ಬಾಹ್ಯಾಕಾಶ ಶಿಲೆಗಳೇ, ಪರಗ್ರಹ ಜೀವಿಗಳಿಂದ ನಿರ್ಮಿತವಾದ ಬಾಹ್ಯಾಕಾಶ ನೌಕೆಗಳೇ ಎಂಬುದನ್ನು ನಾವು ಅರಿಯಬೇಕು ಎಂದು ಪ್ರೊ. ಅವಿ ಲೋಬ್ ಸೂಚಿಸಿದ್ದಾರೆ.

### ಅನ್ಯಲೋಕದ ತಂತ್ರಜ್ಞಾನ?

**3I/ATLAS ಅಂತರತಾರಾ ಧೂಮಕೇತು ಭೂಮಿಗೆ ಯಾವುದೇ ಅಪಾಯವನ್ನುಂಟುಮಾಡುವುದಿಲ್ಲ ಎಂದು ನಾಸಾ ಹೇಳಿದ್ದರೂ, ಅದರ ಗುಣಲಕ್ಷಣಗಳು ಅದನ್ನು ಪರಗ್ರಹದ ಬುದ್ಧಿವಂತ ನಾಗರಿಕತೆಯೊಂದು ಸೃಷ್ಟಿಸಬಹುದೇ ಎಂಬ ಪ್ರಶ್ನೆಗಳನ್ನು ಹುಟ್ಟುಹಾಕಿದೆ. 3I/ATLAS ಅನ್ಯಲೋಕದ ತಂತ್ರಜ್ಞಾನವೇ? ಎಂಬ ಪ್ರೊ. ಅವಿಲೋಬ್ ಬ್ಲಾಗ್ ಇದೀಗ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ. ಸಾಮಾನ್ಯವಾಗಿ ಧೂಮಕೇತುಗಳು ತಮ್ಮ ಹಿಂಭಾಗದಲ್ಲಿ ಉದ್ದವಾದ ಬಾಲವನ್ನು ಹೊಂದಿರುತ್ತವೆ. ಆದರೆ 3I/ATLAS ಧೂಮಕೇತುವಿನ ಮುಂಭಾಗ ಅತ್ಯಂತ ಪ್ರಕಾಶಮಾನವಾಗಿ ಹೊಳೆಯುತ್ತಿದ್ದು, ಹಿಂಬದಿಯಲ್ಲಿ ಯಾವುದೇ ಬಾಲವಿಲ್ಲ. ಹೀಗಾಗಿ ಇದು ಅಂತರತಾರಾ ಧೂಮಕೇತುವಾಗಿರದೇ, ಪರಗ್ರಹ ಜೀವಿಗಳ ಏಲಿಯನ್ ಶಿಪ್ ಆಗಿದೆ ಎಂದು ಪ್ರೊ. ಅವಿ ಲೋಬ್ ವಾದಿಸಿದ್ದಾರೆ.**

**3I/ATLAS:** ನಾಸಾದ ಪ್ರಕಾರ 3I/ATLAS ಸೌರಮಂಡಲಕ್ಕೆ ಭೇಟಿ ನೀಡಿರು ಮೂರನೇ ಅಂತರತಾರಾ ಬಾಹ್ಯಾಕಾಶ ಶಿಲೆಯಾಗಿದೆ. ಸದ್ಯ ಇದು ಭೂಮಿಯಿಂದ ಸುಮಾರು 1.8 ಖಗೋಳ ಘಟಕ ದೂರ ಇದ್ದು, ಅ. 30, 2025ರಂದು ಸೂರ್ಯನಿಗೆ ಅತ್ಯಂತ ಸಮೀಪದಿಂದ ಹಾದು ಹೋಗಲಿದೆ. A11pl3Z ಎಂದೂ ಕರೆಯಲ್ಪಡುವ ಈ ಅಂತರತಾರ ಬಾಹ್ಯಾಕಾಶ ಶಿಲೆ, ಗಂಟೆಗೆ ಗಂಟೆಗೆ 245,000 ಕಿ.ಮೀ ವೇಗದಲ್ಲಿ ಸೂರ್ಯನ ಕಡೆಗೆ ಚಲಿಸುತ್ತಿದೆ. ಮುಂದಿನ ಎರಡು ತಿಂಗಳಲ್ಲಿ ಈ ಬಾಹ್ಯಾಕಾಶ ಶಿಲೆ ನಮ್ಮ ಸೌರಮಂಡಲವನ್ನು ದಾಟಿ ಹೋಗಲಿದೆ.

**ಪ್ರೊ. ಲೋಬ್ ಭಿನ್ನ ವಾದ:** ಆದರೆ 3I/ATLASನ್ನು ನೈಸರ್ಗಿಕ ಅಂತರತಾರಾ ಧೂಮಕೇತು ಎಂದು ಒಪ್ಪಿಕೊಳ್ಳಲು ಸಿದ್ಧರಿಲ್ಲದ ಹಾರ್ವರ್ಡ್‌ನ ಖಗೋಳ ವಿಭಾಗದ ಮುಖ್ಯಸ್ಥರಾಗಿರುವ ಪ್ರೊಫೆಸರ್ ಅವಿ ಲೋಬ್, ಅದರ ಗುಣಲಕ್ಷಣಗಳು ಧೂಮಕೇತುವಿನಂತೆ ಕಾಣುತ್ತಿಲ್ಲ ಎಂದು ಹೇಳಿ ಅಚ್ಚರಿ ಮೂಡಿಸಿದ್ದಾರೆ.

3I/ATLAS ಕಕ್ಷೆಯ ಹೈಪರ್ಬೋಲಿಕ್ ಆಕಾರ ಅನೇಕ ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಈ ಧೂಮಕೇತುವಿನ ಅನಿಲ ಅಣುಗಳ ಪುರಾವೆ ಗೊಂದಲಮಯವಾಗಿದ್ದು, ಅದರ ಪಥವು ಸೌರಮಂಡಲದ ಗ್ರಹಗಳ ಕುರಿತು ಅಧ್ಯಯನಕ್ಕೆ ಹೇಳಿ ಮಾಡಿಸಿದಂತಿದೆ ಎಂದು ಪ್ರೊ. ಅವಿ ಲೋಬ್ ಹೇಳಿದ್ದಾರೆ. ಒಟ್ಟಿನಲ್ಲಿ 3I/ATLAS ಅಂತರತಾರಾ ಬಾಹ್ಯಾಕಾಶ ಶಿಲೆಗೆ ಸಂಬಂಧಿಸಿದಂತೆ, ಪ್ರೊ. ಅವಿ ಲೋಬ್ ಅವರ ಹೇಳಿಕೆ ಇದೀಗ ಜಾಗತಿಕ ಮಟ್ಟದಲ್ಲಿ ಚರ್ಚೆಗೆ ಗ್ರಾಸವಾಗಿದ್ದು, ಭೂಮಿಯ ಸಮೀಪ ಅನ್ಯಗ್ರಹ ಜೀವಿಗಳ ಬಾಹ್ಯಾಕಾಶ ನೌಕೆಯ ಅಸ್ತಿತ್ವದ ಸಾಧ್ಯತೆ ಆತಂಕಕ್ಕೆ ಕಾರಣವಾಗಿದೆ. ಸ್ಪೇನ್‌ನ ವಿಗೊ ವಿಶ್ವವಿದ್ಯಾಲಯದ ಪಿಎಚ್‌ಡಿ ವಿದ್ಯಾರ್ಥಿ ಆಲ್ಬರ್ಟೊ ಕ್ಯಾಬಲೆರೊ ಅವರು, ಸೌರಮಂಡಲದ ಆವಾಸ ಸ್ಥಾನವಾಗಿರುವ ಕ್ಷೀರಪಥ ಅಥವಾ ಮಿಲ್ಕಿ ವೇ ಗ್ಯಾಲಕ್ಸಿಯ ನಾಲ್ಕು ಏಲಿಯನ್ ಜಗತ್ತಿನಿಂದ ಭೂಮಿಗೆ ಗಂಡಾಂತರ ಕಾದಿದೆ ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಸಬಹುದು.

## ಮಿನಿ ನ್ಯೂಸ್

### ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಜಾಮೀನು ಅರ್ಜಿ ವಿಚಾರಣೆ

**ಇಸ್ಲಾಮಾಬಾದ್:** ಹಿಂಸಾಚಾರಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ಜಾಮೀನು ನಿರಾಕರಣೆಯ ವಿರುದ್ಧ ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಸಲ್ಲಿಸಿರುವ ಮೇಲ್ಮನವಿಗಳ ವಿಚಾರಣೆಯನ್ನು ಪಾಕಿಸ್ತಾನದ ಸುಪ್ರೀಂ ಕೋರ್ಟ್ ಮಂಗಳವಾರ ಪುನರಾರಂಭಿಸಲಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ. ಪಾಕಿಸ್ತಾನ ತೆಹ್ರೀಕ್-ಇ-ಇನ್ಸಾಫ್ ಮುಖ್ಯಸ್ಥರು ಸಲ್ಲಿಸಿದ ಮೇಲ್ಮನವಿಗಳ ಪ್ರಕಾರ, ಮೇ 9, 2023 ರಂದು ಇಸ್ಲಾಮಾಬಾದ್ ಹೈಕೋರ್ಟ್ ಆವರಣದಿಂದ ಅವರನ್ನು ಬಂಧಿಸಿದ ನಂತರ ಭುಗಿಲೆದ್ದ ಹಿಂಸಾಚಾರಕ್ಕೆ ಸಂಬಂಧಿಸಿದ ಎಂಟು ಪ್ರಕರಣಗಳಲ್ಲಿ ಲಾಹೋರ್ ಹೈಕೋರ್ಟ್ ಅವರಿಗೆ ಬಂಧನದ ನಂತರದ ಜಾಮೀನು ನಿರಾಕರಿಸಿದೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ. ಮೇ 9 ರಂದು ಅವರ ಬಂಧನದ ನಿರೀಕ್ಷೆಯಲ್ಲಿ ಮಿಲಿಟರಿ ಸ್ಥಾಪನೆಗಳ ಮೇಲೆ ದಾಳಿಗಳನ್ನು ಯೋಜಿಸುವಲ್ಲಿ ಅವರ ಪಾತ್ರವಿದೆ ಎಂದು ಆರೋಪಿಸಿ ಎಲ್‌ಎಚ್‌ಸಿ ಖಾನ್ ಅವರ ಜಾಮೀನು ತಿರಸ್ಕರಿಸಿತು.

ಪ್ರಮುಖ ವಕೀಲ ಸಲ್ಮಾನ್ ಸಫ್ದರ್ ವಿದೇಶದಲ್ಲಿದ್ದಾರೆ ಎಂದು ಆರೋಪಿಸಿ ರಕ್ಷಣಾ ವಕೀಲರ ಕೋರಿಕೆಯ ಮೇರೆಗೆ ಸುಪ್ರೀಂ ಕೋರ್ಟ್ ಜುಲೈ 29 ರಂದು ವಿಚಾರಣೆಯನ್ನು ಮುಂದೂಡಿತ್ತು. ವರದಿಯ ಪ್ರಕಾರ, ಪಾಕಿಸ್ತಾನದ ಮುಖ್ಯ ನ್ಯಾಯಮೂರ್ತಿ ಯಾಹ್ಯಾ ಅಫ್ರಿದಿ ನೇತೃತ್ವದ ಮತ್ತು ನ್ಯಾಯಮೂರ್ತಿ ಮುಹಮ್ಮದ್ ಶಫಿ ಸಿದ್ದಿಕಿ ಮತ್ತು ನ್ಯಾಯಮೂರ್ತಿ ಮಿಯಾಂಗುಲ್ ಹಸನ್ ಔರಂಗಜೇಬ್ ಅವರನ್ನು ಒಳಗೊಂಡ ಸುಪ್ರೀಂ ಕೋರ್ಟ್‌ನ ತ್ರಿಸದಸ್ಯ ಪೀಠವು ಮಂಗಳವಾರ ಈ ಪ್ರಕರಣವನ್ನು ಕೈಗೆತ್ತಿಕೊಳ್ಳಲಿದೆ.72 ವರ್ಷದ ಖಾನ್ ಅವರ ವಿರುದ್ಧ ಮೇ 9ರಂದು ನಡೆದ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಲಾಹೋರ್‌ನಲ್ಲಿ ಹಲವಾರು ಪ್ರಕರಣಗಳಲ್ಲಿ ಪ್ರಕರಣ ದಾಖಲಾಗಿದ್ದು, ಇದರಲ್ಲಿ ಅವರ ಬೆಂಬಲಿಗರನ್ನು ಸರ್ಕಾರಿ ಮತ್ತು ಮಿಲಿಟರಿ ಕಟ್ಟಡಗಳ ಮೇಲೆ ದಾಳಿ ಮಾಡಲು ಪ್ರಚೋದಿಸಿದ ಆರೋಪವೂ ಸೇರಿದೆ.

### 3 ಮಕ್ಕಳೊಂದಿಗೆ ಕಾಲುವೆಗೆ ಹಾರಿ ಮಹಿಳೆ ಆತ್ಮಹತ್ಯೆ

**ಬಂದಾ:** ಉತ್ತರ ಪ್ರದೇಶದ ಬಂದಾ ಜಿಲ್ಲೆಯಲ್ಲಿ ಮಹಿಳೆಯೊಬ್ಬರು ಕೌಟುಂಬಿಕ ಕಲಹದಿಂದ ನೊಂದು ತನ್ನ ಮೂವರು ಮಕ್ಕಳನ್ನು ದೇಹಕ್ಕೆ ಕಟ್ಟಿಕೊಂಡು ಕಾಲುವೆಗೆ ಹಾರಿ ಆತಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ರಿಸೌರಾ ಗ್ರಾಮದ ಅಖಿಲೇಶ್ ಎಂಬುವವರ ಪತ್ನಿ ರೀನಾ (30) ಮತ್ತು ಅವರ ಮೂವರು ಮಕ್ಕಳಾದ ಹಿಮಾಂಶು (9), ಅನ್ಶಿ (5), ಪ್ರಿನ್ಸ್(3) ಮೃತರು. ಪತಿಯೊಂದಿಗೆ ಜಗಳವಾಡಿ ಕೊಂಡ ಮಕ್ಕಳೊಂದಿಗೆ ಮನೆ ತೊರೆದಿದ್ದ ಮಹಿಳೆ ದುಡುಕಿ ಆತಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ನಾಲ್ಕು ಶವಗಳನ್ನು ನೀರಿನಿಂದ ಮೇಲೆತ್ತಲಾಗಿದ್ದು ಮಹಿಳೆಯ ಪತಿಯನ್ನು ವಿಚಾರಣೆಗಾಗಿ ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಿವರಾಜ್ ತಿಳಿಸಿದ್ದಾರೆ.

ಮೊದಲು ಮಹಳೆ ಮಕ್ಕಳು ನಾಪತ್ತೆಯಾಗಿರುವ ವಿಷಯ ತಿಳಿದು ಪೊಲೀಸರು, ಕುಟುಂಬ ಸದಸ್ಯರು ಹುಡುಕಾಟ ಆರಂಭಿಸಿದಾಗ, ಗ್ರಾಮದಿಂದ ಸುಮಾರು ಒಂದು ಕಿಮೀ ದೂರದಲ್ಲಿರುವ ಕೆನ್ ಕಾಲುವೆಯ ದಡದಲ್ಲಿ ರೀನಾಳ ಬಳೆಗಳು, ಕೆಲವು ಮಕ್ಕಳ ಬಟ್ಟೆಗಳು ಕಂಡುಬಂದಿವೆ. ಆಕೆ ಕಾಲುವೆಗೆ ಹಾರಿದ್ದಾಳೆ ಎಂಬ ಅನುಮಾನದಿಂದ, ಅಧಿಕಾರಿಗಳು ನೀರಿನ ಹರಿವನ್ನು ನಿಲ್ಲಿಸಿದರು, ಸ್ಥಳೀಯ ಈಜುಗಾರರನ್ನು, ಪೊಲೀಸ್ ತಂಡಗಳ ಸಹಾಯದಿಂದ ಪತ್ತೆ ಹಚ್ಚಲು ಮುಂದಾಗಿ ಎಲ್ಲರ ಶವ ಪತ್ತೆಯಾಗಿದೆ. ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಹೇಳಿದರು. ಘಟನೆಯ ಕುರಿತು ಹೆಚ್ಚಿನ ವಿವರಗಳನ್ನು ಖಚಿತಪಡಿಸಿಕೊಳ್ಳಲು ಆಕೆಯ ಪತಿ ಅಖಿಲೇಶ್ ಅವರನ್ನು ವಿಚಾರಣೆ ನಡೆಸಲಾಗುತ್ತಿದೆ ಮತ್ತು ಕಾನೂನು ಕ್ರಮಗಳು ನಡೆಯುತ್ತಿವೆ ಎಂದು ಪೊಲೀಸರು ತಿಳಿಸಿದ್ದಾರೆ.

### ರಫ್ತು ಹೆಚ್ಚಳ, ಆಮದು ಕಡಿಮೆ ಮಾಡುವ ಅವಶ್ಯಕತೆ ಇದೆ ; ನಿತಿನ್ ಗಡ್ಕರಿ

**ನಾಗ್ಪುರ:** ಇಂದಿನ ಜಗತ್ತಿನಲ್ಲಿ ದಾದಗಿರಿಯಲ್ಲಿ ತೊಡಗಿರುವ ದೇಶಗಳು ಆರ್ಥಿಕವಾಗಿ ಬಲಿಷ್ಠವಾಗಿರುವುದರಿಂದ ಮತ್ತು ತಂತ್ರಜ್ಞಾನವನ್ನು ಹೊಂದಿರುವುದರಿಂದ ಅವರು ಹಾಗೆ ಮಾಡಬಹುದು ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ವಿಶ್ವೇಶ್ವರಯ್ಯ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯಲ್ಲಿ ಮಾತನಾಡಿದ ಗಡ್ಕರಿ, ಭಾರತದ ರಫ್ತುಗಳನ್ನು ಹೆಚ್ಚಿಸುವ ಆಮದುಗಳನ್ನು ಕಡಿಮೆ ಮಾಡುವ ಅಗತ್ಯವನ್ನು ಒತ್ತಿ ಹೇಳಿದರು. ನಮ್ಮ ರಫ್ತು, ಆರ್ಥಿಕತೆಯ ದರ ಹೆಚ್ಚಾದರೆ, ನಾವು ಯಾರ ಬಳಿಯೂ ಹೋಗಬೇಕಾಗಿಲ್ಲ ಎಂದು ನಾನು ಭಾವಿಸುತ್ತೇನೆ.

ದಾದಗಿರಿಯಲ್ಲಿ ತೊಡಗಿರುವವರು ಅವರು ಆರ್ಥಿಕವಾಗಿ ಬಲಿಷ್ಠ ಆಗಿರುವುದರಿಂದ, ಅವರ ಬಳಿ ತಂತ್ರಜ್ಞಾನ ಇರುವುದರಿಂದ ಹಾಗೆ ಮಾಡುತ್ತಿದ್ದಾರೆ ಎಂದಿದ್ದಾರೆ. ನಾವು ಉತ್ತಮ ತಂತ್ರಜ್ಞಾನ ಮತ್ತು ಸಂಪನ್ಮೂಲಗಳನ್ನು ಪಡೆದರೆ, ನಾವು ಯಾರನ್ನೂ ಬೆದರಿಸುವುದಿಲ್ಲ, ಏಕೆಂದರೆ ನಮ್ಮ ಸಂಸ್ಕೃತಿಯು ಪ್ರಪಂಚದ ಕಲ್ಯಾಣವು ಅತ್ಯಂತ ಮುಖ್ಯ ಎಂದು ನಮಗೆ ಕಲಿಸುತ್ತದೆ ಎಂದು ಅವರು ಹೇಳಿದರು. ನಾವು ಜಾಗತಿಕವಾಗಿ ವಿವಿಧ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ, ಈ ಎಲ್ಲಾ ಸಮಸ್ಯೆಗಳಿಗೆ ಪರಿಹಾರವೆಂದರೆ ವಿಜ್ಞಾನ, ತಂತ್ರಜ್ಞಾನ, ಅದು ಜ್ಞಾನ, ಅದು ಒಂದು ಶಕ್ತಿ ಎಂದು ಹೇಳಿದರು. ಭಾರತವು ವಿಶ್ವಗುರು ಆಗಲು ಬಯಸಿದರೆ ರಫ್ತುಗಳನ್ನು ಹೆಚ್ಚಿಸುವುದು, ಆಮದುಗಳನ್ನು ಕಡಿಮೆ ಮಾಡುವುದು ಅವಶ್ಯಕ ಎಂದು ಬಿಜೆಪಿ ಮುಖಂಡರು ಹೇಳಿದರು. ಸಂಶೋಧನಾ ಸಂಸ್ಥೆಗಳು, ಐಐಟಿಗಳು, ಎಂಜಿನಿಯರಿಂಗ್ ಕಾಲೇಜುಗಳು ದೇಶದ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಸಂಶೋಧನೆ ನಡೆಸಬೇಕು ಎಂದು ಅವರು ಹೇಳಿದರು. ಆದರೆ ಇತರ ಕ್ಷೇತ್ರಗಳಲ್ಲಿ ಸಂಶೋಧನೆಯು ಅಷ್ಟೇ ಮುಖ್ಯವಾಗಿದೆ ಎಂದು ಹೇಳಿದರು.

### ಕ್ಲೋರಿನ್ ಅನಿಲ ಸೇವಿಸಿ 600 ಯಾತ್ರಿಕರು ಅಸ್ವಸ್ಥ: ಆಸ್ಪತ್ರೆಗೆ ದಾಖಲು

**ನಜಾಫ್:** ಇರಾಕ್‌ನಲ್ಲಿ ಕ್ಲೋರಿನ್ ಅನಿಲ ಸೇವಿಸಿ 600ಕ್ಕೂ ಹೆಚ್ಚು ಯಾತ್ರಿಕರು ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದಾರೆ. ಆದರೆ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಸುನ್ನಿ ಸಮುದಾಯಕ್ಕೆ ಸೇರಿದ ನದಾಫ್, ಕರ್ಬಾಲಾ ಎಂಬ ಪ್ರಸಿದ್ಧ ಯಾತ್ರಾ ಸ್ಥಳಗಳ ನಡುವೆ ಇರುವ ನಜಾಕ್ ಪಟ್ಟಣದ ಸಮೀಪದಲ್ಲಿರುವ ನೀರಿನ ಶುದ್ದೀಕರಣ ಘಟಕದಲ್ಲಿ ಕ್ಲೋರಿನ್ ಅನಿಲ ಸೋರಿಕೆಯಾಗಿದೆ.ಸಾವಿರಾರು ಮಂದಿ ಇದನ್ನು ಸೇವಿಸಿದ್ದಾರೆ. ಈ ಪೈಕಿ ಸುಮಾರು 600 ಜನರು ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದಾರೆ ಎಂದು ಮಾಧ್ಯಮಗಳ ವರದಿ ಮಾಡಿವೆ. ಆ. ತಿಂಗಳಲ್ಲಿ ನದಾಫ್, ಕರ್ಬಾಲಾ ಯಾತ್ರಾ ಸ್ಥಳಗಳಿಗೆ ಲಕ್ಷಾಂತರ ಜನರು ಭೇಟಿ ನೀಡುತ್ತಾರೆ. ಈ ಸಲ ಸುಮಾರು 70 ಲಕ್ಷ ಜನರು ಆಗಮಿಸುವ ನಿರೀಕ್ಷೆಯಿದೆ. ಸಾವಿರಾರು ಯಾತ್ರಿಕರು ನಜಾಕ್ ಪಟ್ಟಣದಲ್ಲಿರುವ ನೀರಿನ ಶುದ್ದೀಕರಣ ಘಟಕದ ಸಮೀಪ ತಂಗಿದ್ದರು. ಈ ವೇಳೆ ಅನಿಲ ಸೋರಿಕೆಯಾಗಿದೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಎಲ್ಲರೂ ಸುರಕ್ಷಿತವಾಗಿದ್ದಾರೆ ಎಂದು ಸರ್ಕಾರದ ಅಧಿಕಾರಿಗಳು ಹೇಳಿದ್ದಾರೆ.

# ಸ್ಮೃತಿ ಇರಾನಿಗೆ ಭರ್ಜರಿ ಸಂಭಾವನೆ

## ಪ್ರತಿ ಕಾಲ್ ಶೀಟ್‌ಗೆ 14 ಲಕ್ಷ



ಒಂದು ಕಾಲದಲ್ಲಿ ಕಿರುತೆರೆಯಲ್ಲಿ ಬಿರುಗಾಳಿ ಎಬ್ಬಿಸಿದ ಸರಣಿ 'ಕ್ಯೂಂಕಿ ಸಾಸ್ ಭಿ ಕಭಿ ಬಹು ಥಿ' ಧಾರಾವಾಹಿ. ಈ ಧಾರಾವಾಹಿಯ ಎಲ್ಲಾ ಪಾತ್ರಗಳು ಜನಪ್ರಿಯತೆ ಪಡೆದವು. ಈಗ, ಹಲವು ವರ್ಷಗಳ ನಂತರ, ಈ ಸರಣಿಯ ಮುಂದಿನ ಭಾಗವಾದ 'ಕ್ಯೂಂಕಿ ಸಾಸ್ ಭಿ ಕಭಿ ಬಹು ಥಿ 2 ಪ್ರೇಕ್ಷಕರ ಎದುರು ಬಂದಿದೆ. ಈ ಸರಣಿಯ ಮೂಲಕ ಸ್ಮೃತಿ ಇರಾನಿ ಕಿರುತೆರೆಗೆ ಮರಳುತ್ತಿರುವುದು ಸಂಚಲನ ಮೂಡಿಸಿದೆ. ಅವರ ಸಂಭಾವನೆ ವಿಚಾರ ಕೂಡ ಚರ್ಚೆ ಆಗಿದೆ. ವರದಿಯ ಪ್ರಕಾರ, ಸ್ಮೃತಿ ಇರಾನಿ ಸಂಭಾವನೆ ವಿಷಯದಲ್ಲಿ ಇತರ ಟಿವಿ ಕಲಾವಿದರನ್ನು ಹಿಂದಿಕ್ಕಿದ್ದಾರೆ. ಅವರು ಪ್ರತಿ ಕಾಲ್‌ಶೀಟ್‌ಗೆ 14 ಲಕ್ಷ ರೂ.ಗಳನ್ನು ಪಡೆಯುತ್ತಿದ್ದಾರೆ ಎಂದು ವರದಿ ಆಗಿದೆ. ಇದರಿಂದಾಗಿ ಅವರು ಭಾರತದಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ಟಿವಿ ನಟಿಯಾಗಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಸ್ಮೃತಿ ಇರಾನಿ ಸ್ವತಃ ತಮ್ಮ ಸಂಭಾವನೆಯನ್ನು ಖಚಿತಪಡಿಸಿದ್ದಾರೆ. ಇತ್ತೀಚೆಗೆ, ಸುದ್ದಿ ವಾಹಿನಿಯೊಂದಕ್ಕೆ ಮಾತನಾಡುತ್ತಾ, ಸ್ಮೃತಿ ಇರಾನಿ ಅವರು ದಾಖಲೆಯ ಸಂಭಾವನೆ ಪಡೆಯುತ್ತಿದ್ದಾರೆ ಎಂದು ಒಪ್ಪಿಕೊಂಡರು. ಕಠಿಣ ಪರಿಶ್ರಮ ಮತ್ತು ಟಿಆರ್‌ಪಿ ಅಂಕಿಅಂಶಗಳಿಂದಾಗಿ ಅವರು ಈ ಸಂಭಾವನೆಯನ್ನು ಗಳಿಸಿದ್ದಾರೆ ಎಂದು ಹೇಳಿದರು. ಸ್ಮೃತಿ ಇರಾನಿ ಅವರು ವೇತನ ಸಮಾನತೆಯನ್ನು ಬಹುವಾಗಿ ಒಪ್ಪುತ್ತಾರೆ. ಹೀಗಾಗಿ. ಇದು ಬಹಳಷ್ಟು ಕಠಿಣ ಪರಿಶ್ರಮಕ್ಕೆ ಸಿಕ್ಕ ಉತ್ತರ' ಎಂದಿದ್ದಾರೆ ಅವರು. ತುಳಸಿ ವಿರಾನಿ ಪಾತ್ರದಲ್ಲಿ ನಟಿಸಿರುವ ಸ್ಮೃತಿ ಇರಾನಿ ನಟಿಸಿದ್ದಾರೆ.

ಭಾರತದ ಕಿರುತೆರೆ ಲೋಕದಲ್ಲಿ 'ಕ್ಯೂಂಕಿ ಸಾಸ್ ಭಿ ಕಭಿ ಬಹು ಥಿ' ಧಾರಾವಾಹಿ ಅತ್ಯಂತ ಜನಪ್ರಿಯತೆ ಪಡೆದಿತ್ತು. ಏಕ್ತಾ ಕಪೂರ್ ನಿರ್ಮಾಣ ಮಾಡಿದ ಈ ಧಾರಾವಾಹಿ 2000ನೇ ಇಸವಿಯ ಜುಲೈ 3ರಿಂದ 2008ರ ನವೆಂಬರ್ 6ರ ತನಕ ಪ್ರಸಾರ ಆಗಿತ್ತು. ಸ್ಟಾರ್ ಪ್ಲಸ್ ವಾಹಿನಿಯಲ್ಲಿ ಈ ಸೀರಿಯಲ್ ಬಿತ್ತರವಾಗಿತ್ತು. ಒಟ್ಟು 1,800 ಸಂಚಿಕೆಗಳು ಪ್ರಸಾರವಾಗಿದ್ದವು ಅನ್ನೋದು ಧಾರಾವಾಹಿಯ ಹೆಗ್ಗಳಿಕೆ. ಸ್ಮೃತಿ ಅವರು ಬಣ್ಣದ ಲೋಕ ತೊರೆದ ಬಳಿಕ ರಾಜಕೀಯದಲ್ಲಿ ಬ್ಯುಸಿ ಆಗಿದ್ದರು. ಆದರೆ, ಈಗ ಅವರು ಚುನಾವಣೆಯಲ್ಲಿ ಸೋತ ಹಿನ್ನೆಲೆಯಲ್ಲಿ ಮತ್ತೆ ಕಿರುತೆರೆಗೆ ಮರಳಬೇಕಾದ ಅನಿವಾರ್ಯತೆ ಎದುರಾಗಿದೆ.



# ನನ್ನ ಆಪ್ತಮಿತ್ರ ವಿಷ್ಣು ಬದುಕಿದ್ದಾಗಲೇ ಕೆಲವು ಬೇಸರದ ಘಟನೆಗಳು ನಡೆದಿದ್ದವು



ಇದು ಬಹಳ ನೋವು ಕೊಡುವ ವಿಚಾರ. ಯಾವುದೇ ಒಂದು ವ್ಯಕ್ತಿಗೆ ಸ್ಮಾರಕ ಮಾಡಿದಾಗ, ಅನಧಿಕೃತವಾಗಿ ಏನೂ ಮಾಡಿರಲ್ಲ. 2009ರಲ್ಲಿ ಅವರು ತೀರಿಕೊಂಡಿದ್ದು, ಇವಾಗ 2025. ಸುಮಾರು 16 ವರ್ಷಗಳೇ ಆಗೋಯ್ತು. ಅವಾಗ ಮುಂಚಿನಿಂದಲೂ ಬಾಲಣ್ಣ ಸ್ಟುಡಿಯೋ ಅವರು ಲೀಸ್‌ಗೆ ತಗೊಂಡಿದ್ರು. ಮತ್ತೆ ಸರ್ಕಾರ ಏನೋ ಅಲ್ಲಿ ಮಾಡಿ ಆಮೇಲೆ ತದನಂತರ ಏನೋ ಮಾಡೋದು ಅಂತ ಆಗಿ, ಮೈಸೂರಲ್ಲಿ ಇವಾಗ ವಿಷ್ಣು ಭವನ ಆಗಿದೆ. ಆದರೆ ಏಕಾಏಕಿ ಇದನ್ನೆಲ್ಲಾ ಹೋಗಿ ರಾತ್ರೋರಾತ್ರಿ ಕೆಡವಿ ಅಭಿಮಾನಿಗಳಿಗೆ ನೋವು ಮಾಡೋದು ಅಷ್ಟು ಶ್ರೇಯಸ್ಸಲ್ಲ ಎಂದು ನಟ ಸುಂದರ್ ರಾಜ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದಾರೆ.

# ಡಾ. ವಿಷ್ಣುವರ್ಧನ್ ಪ್ರತಿಮೆ ನಿರ್ಮಾಣಕ್ಕೆ ಯಾರ ಬಳಿ ಭಿಕ್ಷೆ ಬೇಡುವುದು ಬೇಡ



ಸಾಹಸ ಸಿಂಹ' ವಿಷ್ಣುವರ್ಧನ್ ಅವರ ಪುಣ್ಯಭೂಮಿ ತೆರವಿಗೆ ನಟ ಸುದೀಪ್ ಸೇರಿದಂತೆ ಚಿತ್ರರಂಗದ ಹಲವು ನಟ, ನಟಿಯರು ತೀವ್ರ ವಿರೋಧ ವ್ಯಕ್ತಪಡಿಸಿದ್ದು, ನಗರದಲ್ಲೇ 10 ಸಾವಿರದಿಂದ 20 ಸಾವಿರ ಚ.ಅಡಿ ವಿಸ್ತೀರ್ಣದ ಜಾಗದಲ್ಲಿ ಬೃಹತ್ ಪ್ರತಿಮೆ ಸ್ಥಾಪಿಸಲು ಚರ್ಚಿಸಲಾಗಿದೆ. ಪ್ರತಿಮೆ ಸ್ಥಾಪನೆ ಸಂಬಂಧ ಅಂತಿಮ ರೂಪುರೇಷೆ ಸಿದ್ಧಪಡಿಸಲು ನಿರ್ಧರಿಸಲಾಗಿದೆ. ಡಾ. ವಿಷ್ಣುವರ್ಧನ್ ಅಭಿಮಾನಿಯಾಗಿರುವ ನಟ ಕಿಚ್ಚ ಸುದೀಪ್ ಅವರು ಅಭಿಮಾನ್ ಸ್ಟುಡಿಯೋದಲ್ಲಿದ್ದ ವಿಷ್ಣು ಸ್ಮಾರಕ ನಿರ್ಮಾಣಕ್ಕೆ ಯತ್ನಿಸಿದ್ದರು. ಸಮಾಧಿ ನೆಲಸಮಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಅವರು, ಸಮಾಧಿ ತೆರವು ಅತ್ಯಂತ ಹೇಡಿತನದ ಕೃತ್ಯ. ವಿಷ್ಣುವರ್ಧನ್ ಅವರ ಅಭಿಮಾನಿಗಳು ಇನ್ಮುಂದೆ ಸ್ಮಾರಕ ನಿರ್ಮಾಣಕ್ಕಾಗಿ ಯಾರನ್ನೂ ಬೇಡುವ ಅವಶ್ಯಕತೆಯಿಲ್ಲ. ಪ್ರತಿಮೆ ಸ್ಥಾಪನೆಗೆ ಅಗತ್ಯ ನೆರವು ನೀಡಲಾಗುವುದು ಎಂದು ತಿಳಿಸಿದ್ದಾರೆ. ವಿಷ್ಣುವರ್ಧನ್ ಅವರ ಸಮಾಧಿ ವಿಚಾರವಾಗಿ ಏನು ಆಗಬಾರದಿತ್ತೋ, ಅದು ಆಗಿ ಹೋಗಿದೆ. ಎಲ್ಲಾ ಮುಗಿದು ಹೋಗಿದೆ. ಸಮಾಧಿಯನ್ನು ಉಳಿಸುವಂತೆ ಸಾಕಷ್ಟು ಮನವಿ ಮಾಡಿದ್ದೆವು. ಆ ಕೆಲಸ ಅಧಿಕಾರದಲ್ಲಿದ್ದವರಿಗೆ ಸಾಧ್ಯವಿತ್ತು. ಆದರೆ, ಆಗಲಿಲ್ಲ ಎಂದು ಕಿಚ್ಚ ಸುದೀಪ್ ಹೇಳಿದ್ದಾರೆ.

# ವಿಷ್ಣು ಸಮಾಧಿ ತೆರವಿಗೆ ನಟಿ ಸುಮಲತಾ ಬೇಸರ



ಅಭಿಮಾನಿಗಳ ನೋವಲ್ಲಿ ಅರ್ಥ ಇದೆ. ಇದು ನೋವಾಗುವಂತಹ ವಿಷಯವೇ. ಏಕೆ ಹೀಗಾಗಿದೆ ಅನ್ನೋದು ಗೊತ್ತಿಲ್ಲ. ಹೈಕೋರ್ಟ್ ಆದೇಶದ ಮುಂದೆ ನಾವೆಲ್ಲರು ನಿಸ್ಸಹಾಯಕರಾಗಿದ್ದೇವೆ ಎಂದು ನಟಿ ಹಾಗೂ ಮಾಜಿ ಸಂಸದೆ ಸುಮಾಲತಾ ಬೇಸರ ಹೊರಹಾಕಿದ್ದಾರೆ. ಡಾ. ವಿಷ್ಣುವರ್ಧನ್ ಸಮಾಧಿ ತೆರವು ವಿಚಾರವಾಗಿಮಾತನಾಡಿದ ಅವರು, ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ. ಅಭಿಮಾನಿಗಳ ನೋವಲ್ಲಿ ಅರ್ಥ ಇದೆ. ಇದು ನೋವಾಗುವಂತಹ ವಿಷಯವೇ. ಏಕೆ ಹೀಗಾಗಿದೆ ಅನ್ನೋದು ಗೊತ್ತಿಲ್ಲ. ಒಂದು ಕಡೆ ಅಧಿಕೃತ ಸಮಾಧಿ ಮೈಸೂರಿನಲ್ಲಿ ಸುಂದರವಾಗಿ ಬಂದಿದೆ. ಅದೊಂದು ಸ್ವಲ್ಪ ಸಮಾಧಾನ ಮಾಡಿಕೊಳ್ಳುವ ಅವಕಾಶ. ತೆರವು ಮಾಡುವ ಬಗ್ಗೆ ಮುಂಚೆನೇ ತಿಳಿಸಿ ಮಾಡಬೇಕಿತ್ತು. ಅಂತ್ಯಕ್ರಿಯೆ ನಡೆದ ಜಾಗವಾದ ಕಾರಣ ಸಣ್ಣದಾಗಿಯಾದ್ರು ಅಭಿಮಾನಿಗಳಿಗೆ ತಿಳಿಸುವ ಕೆಲಸ ಮಾಡಬೇಕಿತ್ತು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## ಮನೋರಂಜನಗೆ ಜೋಡಿಯಾದ ಬೃಂದಾ ಆಚಾರ್ಯ

ನಟ ಮನೋರಂಜನ್ ರವಿಚಂದ್ರನ್ ಅವರು ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ಇದು ಅವರ 5ನೇ ಸಿನಿಮಾ. ಬೆಂಗಳೂರಿನ ಮಲ್ಲೇಶ್ವರದಲ್ಲಿರುವ ಲಕ್ಷ್ಮಿ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ಈ ಸಿನಿಮಾಗೆ ಮುಹೂರ್ತ ಮಾಡಲಾಗಿದೆ. ಮನು ಸಹೋದರ ವಿಕ್ರಮ್ ರವಿಚಂದ್ರನ್ ಅವರು ಮೊದಲ ದೃಶ್ಯಕ್ಕೆ ಕ್ಲ್ಯಾಪ್ ಮಾಡಿ ಶುಭಾಶಯ ತಿಳಿಸಿದರು. ಹೊಸ ನಿರ್ದೇಶಕ ರುದ್ರೇಶ್ ಅವರು ಈ ಸಿನಿಮಾಗೆ ಆ್ಯಕ್ಷನ್-ಕಟ್ ಹೇಳುತ್ತಿದ್ದಾರೆ. ಮನೋರಂಜನ್ ಜೊತೆ ಬೃಂದಾ ಆಚಾರ್ಯ ನಾಯಕಿಯಾಗಿ ನಟಿಸುತ್ತಿದ್ದಾರೆ.

# ಕಳಪೆ ಪ್ರದರ್ಶನದ ಬಗ್ಗೆ ಮೌನ ಮುರಿದ ಕರುಣ್ ನಾಯರ್



8 ವರ್ಷಗಳ ನಂತರ ಭಾರತ ತಂಡದಲ್ಲಿ ಸ್ಥಾನ ಪಡೆದಿದ್ದ ಕರ್ನಾಟಕದ ಅನುಭವಿ ಬ್ಯಾಟ್ಸ್‌ಮನ್ ಕರುಣ್ ನಾಯರ್‌ಗೆ ಇಂಗ್ಲೆಂಡ್ ಪ್ರವಾಸದಲ್ಲಿ ನಿರೀಕ್ಷಿತ ಪ್ರದರ್ಶನ ನೀಡಲು ಸಾಧ್ಯವಾಗಲಿಲ್ಲ. ಇಂಗ್ಲೆಂಡ್ ಪ್ರವಾಸದಲ್ಲಿ ಐದು ಟೆಸ್ಟ್‌ಗಳ ಸರಣಿಯಲ್ಲಿ 4 ಪಂದ್ಯಗಳನ್ನು ಆಡಿದ ಕರುಣ್ 25.62 ಸರಾಸರಿಯಲ್ಲಿ ಕೇವಲ 205 ರನ್ ಗಳಿಸಿದರು. ಇದರಲ್ಲಿ ಕೇವಲ ಒಂದು ಅರ್ಧಶತಕ ಮಾತ್ರ ಸೇರಿತ್ತು. ಇದೀಗ ಪ್ರವಾಸ ಮುಗಿಸಿ ಬಂದಿರುವ ಕರುಣ್ ಜೊತೆ ಮಾತನಾಡಿದ್ದು, ಇಂಗ್ಲೆಂಡ್‌ನಲ್ಲಿ ಶತಕ ಬಾರಿಸದಿರುವುದು ಬೇಸರ ಮೂಡಿಸಿದೆ ಎಂದಿದ್ದಾರೆ. ಅಲ್ಲದೆ ಓವಲ್‌ನಲ್ಲಿ ನಡೆದ ಕೊನೆಯ ಟೆಸ್ಟ್‌ನ ಮೊದಲ ಇನ್ನಿಂಗ್ಸ್‌ನಲ್ಲಿ ಉತ್ತಮ ಆರಂಭ ಪಡೆದ ಹೊರತಾಗಿಯೂ ತಮ್ಮ ಅರ್ಧಶತಕವನ್ನು ಶತಕವನ್ನಾಗಿ ಪೂರೈಸಿದರಿವುದು ಕೂಡ ಬೇಸರ ತಂದಿದೆ ಎಂದಿದ್ದಾರೆ. ಓವಲ್‌ನಲ್ಲಿ ನನ್ನ ಆರಂಭವನ್ನು ಶತಕವಾಗಿ ಪರಿವರ್ತಿಸದಿರುವುದು ನನಗೆ ನಿರಾಶೆಯನ್ನುಂಟುಮಾಡಿತು. ಆದರೆ ಹಿಂತಿರುಗಿ ನೋಡಿದಾಗ, ಆ ಕಠಿಣ ಪರಿಸ್ಥಿತಿಯಲ್ಲಿ ಮೊದಲ ದಿನದಂದು ತಂಡದೊಂದಿಗೆ ನಿಲ್ಲುವುದು ನನಗೆ ಬಹಳ ಮುಖ್ಯವಾಗಿತ್ತು. ನಾನು ಮೊದಲು ಅಲ್ಲಿ ಆಡಿದ್ದೇನೆ ಸರ್ರೆ ವಿರುದ್ಧ ನಾನು ನಾರ್ಥಾಂಟ್ಸ್ ಪರ 150 ರನ್ ಗಳಿಸಿದ್ದೆ. ಆದರೆ ಅರ್ಧಶತಕವನ್ನು ಶತಕವನ್ನಾಗಿ ಪರಿವರ್ತಿಸಲು ಸಾಧ್ಯವಾಗುತ್ತದೆ ಎಂದು ನಾನು ಆಶಿಸಿದ್ದೆ, ಆದರೆ ಅದು ನನಗೆ ಸಾಧ್ಯವಾಗಲಿಲ್ಲ. ಇದು ಏರಿಳಿತಗಳ ಸರಣಿಯಾಗಿತ್ತು, ನಾನು ಅದರ ಬಗ್ಗೆ ಬಹಳಷ್ಟು ಯೋಚಿಸಿದೆ. ಆದರೆ ಏನಾಯಿತು ಎಂಬುದನ್ನು ಮರೆತು ಮುಂದಿನ ಕೆಲವು ತಿಂಗಳುಗಳಲ್ಲಿ ನಾನು ಏನು ಮಾಡಬೇಕು ಎಂಬುದರ ಮೇಲೆ ಗಮನಹರಿಸುವುದು ಸಹ ಮುಖ್ಯವಾಗಿದೆ ಎಂದು ಕರುಣ್ ಹೇಳಿದ್ದಾರೆ. ಕಮ್‌ಬ್ಯಾಕ್ ಟೆಸ್ಟ್‌ನ ಮೊದಲ ಇನ್ನಿಂಗ್ಸ್‌ನಲ್ಲಿ ನಾಯರ್ ಶೂನ್ಯಕ್ಕೆ ಔಟಾಗಿದ್ದರು. ಲೀಡ್ಸ್‌ನಲ್ಲಿ ನಡೆದ ಎರಡನೇ ಇನ್ನಿಂಗ್ಸ್‌ನಲ್ಲಿ ಕೇವಲ 20 ರನ್ ಗಳಿಸಿದ್ದರು. ನಂತರ ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ಎರಡನೇ ಟೆಸ್ಟ್‌ನಲ್ಲಿ ಕ್ರಮವಾಗಿ 31 ಮತ್ತು 26 ರನ್‌ಗಳ ಇನ್ನಿಂಗ್ಸ್ ಆಡಿದರು.

ಲಾರ್ಡ್ಸ್ ಟೆಸ್ಟ್‌ನ ಮೊದಲ ಇನ್ನಿಂಗ್ಸ್‌ನಲ್ಲಿ 40 ರನ್ ಮತ್ತು ಎರಡನೇ ಇನ್ನಿಂಗ್ಸ್‌ನಲ್ಲಿ 14 ರನ್ ಗಳಿಸಿದ್ದರು. ಮ್ಯಾಂಚೆಸ್ಟರ್‌ನಲ್ಲಿ ನಡೆದ ನಾಲ್ಕನೇ ಪಂದ್ಯದಲ್ಲಿ ಅವರನ್ನು ಆಡುವ ಹನ್ನೊಂದರ ಬಳಗದಿಂದ ಕೈಬಿಡಲಾಯಿತು. ಆದಾಗ್ಯೂ ಓವಲ್‌ನಲ್ಲಿ ನಡೆದ ಕೊನೆಯ ಪಂದ್ಯದಲ್ಲಿ ಆಡುವ ಅವಕಾಶ ಪಡೆದಿದ್ದ ಕರುಣ್, ಮೊದಲ ಇನ್ನಿಂಗ್ಸ್‌ನಲ್ಲಿ 57 ರನ್ ಬಾರಿಸಿ ಭಾರತವನ್ನು 200 ದಾಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಉಳಿದಂತೆ ಎರಡನೇ ಇನ್ನಿಂಗ್ಸ್‌ನಲ್ಲಿ ಕರುಣ್ 17 ರನ್ ಬಾರಿಸಲಷ್ಟೇ ಶಕ್ತರಾಗಿದ್ದರು.



# ವಿಲ್ ಜ್ಯಾಕ್ಸ್ ಬಿರುಗಾಳಿ ಬ್ಯಾಟಿಂಗ್ 57 ಎಸೆತಗಳಲ್ಲಿ ಮುಗಿದ ಪಂದ್ಯ

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ದಿ ಹಂಡ್ರೆಡ್ ಲೀಗ್‌ನಲ್ಲಿ ವಿಲ್ ಜ್ಯಾಕ್ಸ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಓವಲ್ ಇನ್ವಿನ್ಸಿಬಲ್ಸ್ ಮತ್ತು ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಮ್ಯಾಚ್‌ನಲ್ಲಿ ಟಾಸ್ ಸೋತರೂ ಮೊದಲು ಬ್ಯಾಟ್ ಮಾಡಿದ ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡವು 100 ಎಸೆತಗಳಲ್ಲಿ 128 ರನ್‌ಗಳಿಸಿ ಆಲೌಟ್ ಆಯಿತು.

129 ರನ್‌ಗಳ ಗುರಿ ಬೆನ್ನತ್ತಿದ ಓವಲ್ ಇನ್ವಿನ್ಸಿಬಲ್ಸ್ ಪರ ವಿಲ್ ಜ್ಯಾಕ್ಸ್ ಹಾಗೂ ತವಾಂಡಾ ಮುಯೆಯೆ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದರು. ಮೊದಲ ಓವರ್‌ನಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ವಿಲ್ ಜ್ಯಾಕ್ಸ್ ಕೇವಲ 23 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಅಷ್ಟೇ ಅಲ್ಲದೆ 26 ಎಸೆತಗಳಲ್ಲಿ 2 ಭರ್ಜರಿ ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 61 ರನ್ ಬಾರಿಸಿ ಔಟಾದರು. ಮತ್ತೊಂದೆಡೆ ತವಾಂಡಾ ಮುಯೆಯೆ 28 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ ಅಜೇಯ 59 ರನ್ ಬಾರಿಸಿದರು. ಈ ಮೂಲಕ ಓವಲ್ ಇನ್ವಿನ್ಸಿಬಲ್ಸ್ ತಂಡವು ಕೇವಲ 57 ಎಸೆತಗಳಲ್ಲಿ 129 ರನ್ ಬಾರಿಸಿ 9 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಓವಲ್ ಇನ್ವಿನ್ಸಿಬಲ್ಸ್ ತಂಡವು 8 ಪಾಯಿಂಟ್ಸ್‌ನೊಂದಿಗೆ ದಿ ಹಂಡ್ರೆಡ್ ಲೀಗ್ ಅಂಕ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ.

# ಹೊಸ ಇತಿಹಾಸ ನಿರ್ಮಿಸಿದ ಸಾಲ್ಟ್

## ದಿ ಹಂಡ್ರೆಡ್ ಲೀಗ್‌ನಲ್ಲಿ ಅತ್ಯಧಿಕ ರನ್



ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ದಿ ಹಂಡ್ರೆಡ್ ಲೀಗ್‌ನಲ್ಲಿ ಫಿಲ್ ಸಾಲ್ಟ್ ಭರ್ಜರಿ ಪ್ರದರ್ಶನ ಮುಂದುವರೆಸಿದ್ದಾರೆ. ಈ ಟೂರ್ನಿಯ 5ನೇ ಪಂದ್ಯದ ಮೂಲಕ ಸಾಲ್ಟ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಅದು ಸಹ ದಿ ಹಂಡ್ರೆಡ್ ಲೀಗ್‌ನಲ್ಲಿ ಟಾಪ್ ರನ್ ಸರದಾರನಾಗುವ ಮೂಲಕ ಎಂಬುದು ವಿಶೇಷ. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಈ ಟೂರ್ನಿಯ 5ನೇ ಪಂದ್ಯದಲ್ಲಿ ಓವಲ್ ಇನ್ವಿನ್ಸಿಬಲ್ಸ್, ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಓವಲ್ ಇನ್ವಿನ್ಸಿಬಲ್ಸ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡಕ್ಕೆ ಫಿಲ್ ಸಾಲ್ಟ್ ಉತ್ತಮ ಆರಂಭ ಒದಗಿಸಿದ್ದರು. ಆರಂಭಿಕನಾಗಿ ಕಣಕ್ಕಿಳಿದ ಫಿಲ್ ಸಾಲ್ಟ್ ಕೇವಲ 32 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 1 ಫೋರ್‌ನೊಂದಿಗೆ 41 ರನ್ ಬಾರಿಸಿದರು. 41 ರನ್‌ಗಳೊಂದಿಗೆ ದಿ ಹಂಡ್ರೆಡ್ ಲೀಗ್‌ನಲ್ಲಿ ಅತ್ಯಧಿಕ ರನ್ ಕಲೆಹಾಕಿದ ದಾಖಲೆ ಫಿಲ್ ಸಾಲ್ಟ್ ಪಾಲಾಯಿತು.

# ಆರ್‌ಸಿಬಿ ವೇಗಿ ಯಶ್ ದಯಾಳ್‌ಗೆ ನಿಷೇಧ



ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವೇಗದ ಬೌಲರ್ ಯಶ್ ದಯಾಳ್ ಅವರನ್ನು ಉತ್ತರ ಪ್ರದೇಶ ಟಿ20 ಲೀಗ್‌ನಿಂದ ನಿಷೇಧಿಸಲಾಗಿದೆ ಎಂದು ವರದಿಯಾಗಿದೆ. ಅತ್ಯಾಚಾರ ಪ್ರಕರಣದಲ್ಲಿ ಸಿಲುಕಿರುವ ಯಶ್ ದಯಾಳ್ ಅವರನ್ನು ಯುಪಿ ಟಿ-20 2025 ಲೀಗ್‌ನಿಂದ ಕೈ ಬಿಡಲಾಗಿದ್ದು, ಹೀಗಾಗಿ ಮುಂಬರುವ ಟೂರ್ನಿಯಲ್ಲಿ ಅವರು ಕಾಣಿಸಿಕೊಳ್ಳುವುದಿಲ್ಲ.

ಯಶ್ ದಯಾಳ್ ಮೇಲೆ 17 ವರ್ಷದ ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಆರೋಪವಿದೆ. ಈ ಪ್ರಕರಣ ಸಂಬಂಧ ಬಂಧನದ ಭೀತಿಯನ್ನು ಸಹ ಎದುರಿಸುತ್ತಿದ್ದಾರೆ. ಹೀಗಾಗಿ ಯುಪಿ ಕ್ರಿಕೆಟ್ ಅಸೋಸಿಯೇಷನ್ (ಯುಪಿಸಿಎ) ಮುಂಬರುವ ಉತ್ತರ ಪ್ರದೇಶ ಟಿ20 ಲೀಗ್‌ನಲ್ಲಿ ಕಣಕ್ಕಿಳಿಯದಂತೆ ಯಶ್ ದಯಾಳ್‌ಗೆ ಸೂಚಿಸಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಉ. ಪ್ರದೇಶ ಟಿ20 ಲೀಗ್‌ನಲ್ಲಿ ಯಶ್ ದಯಾಳ್ ಗೋರಖ್‌ಪುರ ಲಯನ್ಸ್ ಪರ ಕಣಕ್ಕಿಳಿಯಬೇಕಿತ್ತು. ಕಳೆದ ಬಾರಿ ಹರಾಜಿನಲ್ಲಿ ಕಾಣಿಸಿಕೊಂಡಿದ್ದ ಆರ್‌ಸಿಬಿ ವೇಗಿಯನ್ನು ಗೋರಖ್‌ಪುರ್ ಲಯನ್ಸ್ ಫ್ರಾಂಚೈಸಿಯು 7 ಲಕ್ಷ ರೂ. ನೀಡಿ ಖರೀದಿಸಿದ್ದರು. ಆದರೀಗ ದಯಾಳ್ ಅವರನ್ನು ಕೈ ಬಿಡುವಂತೆ ಗೋರಖ್‌ಪುರ್ ಲಯನ್ಸ್ ಫ್ರಾಂಚೈಸಿಗೆ ಯುಪಿಸಿಎ ತಿಳಿಸಿದೆ.

# ಏಕದಿನ ಕ್ರಿಕೆಟ್‌ಗೆ ಗುಡ್‌ಬೈ ಹೇಳ್ತಾರಾ ರೋ-ಕೊ?

## ಇವರಿಬ್ಬರ ಆಯ್ಕೆ ಬಗ್ಗೆ ಅನುಮಾನ

ಭಾರತೀಯ ಕ್ರಿಕೆಟ್‌ನ ಐಕಾನ್‌ಗಳಾದ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಏಕದಿನ ಕ್ರಿಕೆಟ್‌ಗೆ ಈ ವರ್ಷದಲ್ಲೇ ನಿವೃತ್ತಿ ಘೋಷಿಸುವ ಸಾಧ್ಯತೆಗಳಿವೆ ಎಂಬ ಸುದ್ದಿ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಹೌದು. ಟೆಸ್ಟ್ ಹಾಗೂ ಟಿ20 ಕ್ರಿಕೆಟ್‌ಗೆ ಈಗಾಗಲೇ ನಿವೃತ್ತಿ ಘೋಷಿಸಿರುವ ರೋಹಿತ್, ವಿರಾಟ್ ಇದೀಗ ಏಕದಿನ ಕ್ರಿಕೆಟ್ ವೃತ್ತಿ ಜೀವನಕ್ಕೂ ತೆರೆ ಎಳೆಯುವ ಸನಿಹದಲ್ಲಿದ್ದಾರೆ. ಮೂಲಗಳ ಪ್ರಕಾರ, 2027ರ ಏಕದಿನ ವಿಶ್ವಕಪ್ ತಂಡದಲ್ಲಿ ಈ ಜೋಡಿ ಸ್ಥಾನ ಪಡೆಯುವುದು ಖಚಿತವಿಲ್ಲ. ಈಗಾಗಲೇ ಇಬ್ಬರೂ ದಿಗ್ಗಜರು ಟೆಸ್ಟ್ ಹಾಗೂ ಟಿ20 ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿರುವ ಕಾರಣ ಮುಂಬರುವ ವರ್ಷಗಳಲ್ಲಿ ಪಂದ್ಯದ ಸಮಯವೂ ಸೀಮಿತವಾಗಿರಲಿದೆ. ಹೀಗಾಗಿ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಕೂಡ ಇವರಿಬ್ಬರ ಆಯ್ಕೆ ಬಗ್ಗೆ ಅನುಮಾನ ವ್ಯಕ್ತಪಡಿಸಿದೆ. ಇದಕ್ಕೆ ಮುಂದಿನ ಅಕ್ಟೋಬರ್‌ನಲ್ಲಿ ನಡೆಯಲಿರುವ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿ ಅತ್ಯಂತ ನಿರ್ಣಾಯಕವಾಗಿದೆ.

ರೋಹಿತ್ ಮತ್ತು ಕೊಹ್ಲಿ 2027ರ ಏಕದಿನ ವಿಶ್ವಕಪ್ ರೇಸ್‌ನಲ್ಲಿ ಉಳಿಯಬೇಕಾದ್ರೆ, ಈ ವರ್ಷ ಡಿಸೆಂಬರ್‌ನಲ್ಲಿ ಶುರುವಾಗಲಿರುವ ದೇಸಿ ಕ್ರಿಕೆಟ್ ವಿಜಯ್ ಹಜಾರೆ ಟ್ರೋಫಿಯಲ್ಲಿ ಆಡಬೇಕಾಗುತ್ತೆ. ಇಲ್ಲದಿದ್ದರೆ, ಬಹುತೇಕ ಏಕದಿನ ಕ್ರಿಕೆಟ್‌ನಿಂದಲೂ ಔಟ್ ಆಗಲಿದ್ದಾರೆ ಎಂದು ವರದಿಗಳು ತಿಳಿಸಿವೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966